ಸಂಪುಟ: 22, ಸಂಚಿಕೆ: 27, ಪುಟಗಳು: 8, ಬುಧವಾರ, 6 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡವೇ ಸತ್ಯ, ಕನ್ನಡವೇ ನಿತ್ಯ
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

**ಸುಭಾಷಿತ**

ಸಜ್ಜನರೇ ಸಜ್ಜನರ ಆಪತ್ತಿನಲ್ಲಿ ರಕ್ಷಣೆ ನೀಡಬಲ್ಲರು. ಕೆಸರಲ್ಲಿ ಸಿಲುಕಿದ ಆನೆಯನ್ನು ಮತ್ತೊಂದು ಆನೆ ಮಾತ್ರವೇ ರಕ್ಷಿಸಬಲ್ಲದಲ್ಲವೇ?

**ಪಂಚಾಂಗ**

(ಬುಧವಾರ 6, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಕಾರ್ತಿಕ ಮಾಸ, ಶುಕ್ಲ ಪಕ್ಷ,
- ತಿಥಿ: ಪಂಚಮಿ
- ನಕ್ಷತ್ರ: ಮೂಲ
- ರಾಹುಕಾಲ: 12:07 ರಿಂದ 1:34
- ಗುಳಿಕಕಾಲ: 10:40 ರಿಂದ 12:07
- ಯಮಗಂಡಕಾಲ: 7:46 ರಿಂದ 9:13




## ಸಂಕ್ಷಿಪ್ತ ಸುದ್ದಿ

### ಲಾರಿ, ಕಾರು ನಡುವೆ ಅಪಘಾತ– ದಂಪತಿ ಸ್ಥಳದಲ್ಲೇ ಸಾವು



**ಗದಗ:** ಲಾರಿ ಮತ್ತು ಕಾರ್ ನಡುವೆ ಅಪಘಾತ ಸಂಭವಿಸಿದೆ. ಕಾರಿನಲ್ಲಿದ್ದ ದಂಪತಿ ಸ್ಥಳದಲ್ಲೇ ಸಾವನ್ನಪ್ಪಿದ್ದು, ಇಬ್ಬರು ಮಕ್ಕಳು ಗಾಯಗೊಂಡಿರುವ ದಾರುಣ ಘಟನೆ ಗದಗ ಜಿಲ್ಲೆ ನರಗುಂದ ತಾಲೂಕಿನ ಭೈರನಹಟ್ಟಿ ಗ್ರಾಮದ ಬಳಿ ನಡೆದಿದೆ.

ಬಾಗಲಕೋಟೆ ಮೂಲದ ಸಿದ್ದರಾಮ ಹಾಗೂ ಹೇಮಾ ಮೃತ ದಂಪತಿ. ಮಕ್ಕಳಾದ ಮಲ್ಲಿಕಾರ್ಜುನ ಹಾಗೂ ಸಹನಾ ಗಾಯಾಳುಗಳು ನರಗುಂದ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೃತ ಕುಟುಂಬಸ್ಥರು ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನದಿಂದ ಪೂಜೆ ಮುಗಿಸಿಕೊಂಡು ಮರಳಿ ಊರಿಗೆ ಬರುತ್ತಿದ್ದಾಗ ದಾರಿ ಮಧ್ಯೆ ಈ ದುರ್ಘಟನೆ ನಡೆದಿದೆ. ಲಾರಿ ಹುಬ್ಬಳ್ಳಿ ಕಡೆಗೆ ಹೊರಟಿತ್ತು, ಕಾರು ಬಾಗಲಕೋಟೆಗೆ ಹೊರಟಿತ್ತು. ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಪುಟ 2

### ಕುಡಿಯಲು ಹಣ ನೀಡದ್ದಕ್ಕೆ ಥಳಿಸಿ ತಾಯಿಯನ್ನೇ ಕೊಂದ ಮಗ

**ಹಾಸನ:** ಕುಡಿಯಲು ಹಣ ನೀಡದ ಕಾರಣಕ್ಕೆ ಮನಬಂದಂತೆ ಥಳಿಸಿ ತಾಯಿಯನ್ನೇ ಮಗ ಕೊಂದಿರುವ ಘಟನೆ ಹಾಸನ ಜಿಲ್ಲೆ, ಅರಕಲಗೂಡು ತಾಲ್ಲೂಕಿನ, ಮಧುರನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಚಿಕ್ಕಮ್ಮ (61) ಪುತ್ರನಿಂದಲೇ ಕೊಲೆಯಾದ ದುರ್ದೈವಿ ತಾಯಿ. ಭರತ್ (26) ತಾಯಿಯನ್ನು ಕೊಂದ ಮಗ. ಕುಡಿತದ ದಾಸನಾಗಿದ್ದ ಭರತ್ ಪೈಂಟ್ ಕೆಲಸ ಮಾಡುತ್ತಿದ್ದ. ಈತ ಅ.29ರಂದು ಕಂಠಪೂರ್ತಿ ಕುಡಿದು ಮನೆಗೆ ಬಂದಿದ್ದು, ತಾಯಿ ಚಿಕ್ಕಮ್ಮ ಬಳಿ ಕುಡಿಯಲು ಹಣ ನೀಡುವಂತೆ ಒತ್ತಾಯಿಸಿದ್ದನು. ಹಣ ನೀಡಲು ನಿರಾಕರಿಸಿದ ಕಾರಣಕ್ಕೆ ಭರತ್ ಕೋಪಗೊಂಡು ಚಿಕ್ಕಮ್ಮನಿಗೆ ದೊಣ್ಣೆಯಿಂದ ಹೊಡೆದು, ಪುಟ 2



### ಅಮೆರಿಕ ಅಧ್ಯಕ್ಷೀಯ ಚುನಾವಣೆ
# 10 ರಾಜ್ಯಗಳಲ್ಲಿ ಟ್ರಂಪ್ ಮುನ್ನಡೆ

**ನ್ಯೂಯಾರ್ಕ್:** ಕುತೂಹಲ ಮೂಡಿಸಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಮತದಾನ ಇಂದು ಭಾರತೀಯ ಕಾಲಮಾನದ ಪ್ರಕಾರ ಬೆಳಗ್ಗೆ 11:30 ಕ್ಕೆ ಅಂತ್ಯವಾಗಲಿದೆ. ಇಲ್ಲಿವರೆಗೆ ಲಭ್ಯವಿರುವ ಮಾಹಿತಿ ಪ್ರಕಾರ, ರಿಪಬ್ಲಿಕನ್‌ನ ಡೊನಾಲ್ಡ್ ಟ್ರಂಪ್ 10 ರಾಜ್ಯಗಳಲ್ಲಿ ಮುನ್ನಡೆ ಕಾಯ್ದುಕೊಂಡಿದ್ದಾರೆ.

ಕೆಂಟುಕಿ, ಇಂಡಿಯಾನಾ, ವೆಸ್ಟ್ ವರ್ಜೀನಿಯಾ, ಅಲಬಾಮಾ, ಟೆನ್ನೆಸ್ಸೀ, ಮಿಸೌರಿ, ಒಕ್ಲಹೋಮ, ಫ್ಲೋರಿಡಾ, ಸೌತ್ ಕೆರೊಲಿನಾ, ಅರ್ಕಾನ್ಸಾಸ್ ರಾಜ್ಯಗಳಲ್ಲಿ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮುನ್ನಡೆ ಸಾಧಿಸಿದ್ದಾರೆ.

ರಿಪಬ್ಲಿಕನ್ ಪಕ್ಷದ ಡೊನಾಲ್ಡ್ ಟ್ರಂಪ್ ಮತ್ತು ಡೆಮಾಕ್ರಟಿಕ್‌ನ ಕಮಲಾ ಹ್ಯಾರಿಸ್ ಅವರು 7 ಸ್ವಿಂಗ್ ರಾಜ್ಯಗಳಲ್ಲಿ ತಲಾ ಎರಡು ರಾಜ್ಯಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ. ಅರಿಜೋನಾ, ಜಾರ್ಜಿಯಾ, ಮಿಚಿಗನ್, ನೆವಾಡಾ, ಉತ್ತರ ಕೆರೊಲಿನಾ, ಪೆನ್ಸಿಲ್ವೇನಿಯಾ ಮತ್ತು ವಿಸ್ಕಾನ್ಸಿನ್ ರಾಜ್ಯಗಳಲ್ಲಿನ ಗೆಲುವೇ ನಿರ್ಣಾಯಕವಾಗಿದೆ. ಪುಟ 2



# 40 ಬಂಡಾಯ ನಾಯಕರನ್ನು ಪಕ್ಷದಿಂದ ಉಚ್ಚಾಟಿಸಿದ ಬಿಜೆಪಿ



**ಮಹಾರಾಷ್ಟ್ರ:** ಮಹಾರಾಷ್ಟ್ರದಲ್ಲಿ ವಿಧಾನಸಭಾ ಚುನಾವಣೆಗೆ ಮುನ್ನ ಭಾರತೀಯ ಜನತಾ ಪಕ್ಷ (ಬಿಜೆಪಿ) ರಾಜ್ಯದಲ್ಲಿ ಮಹತ್ವದ ಕ್ರಮ ಕೈಗೊಂಡಿದೆ. ಪಕ್ಷವು 37 ವಿವಿಧ ವಿಧಾನಸಭಾ ಕ್ಷೇತ್ರಗಳಿಂದ 40 ಕಾರ್ಯಕರ್ತರು, ನಾಯಕರನ್ನು ಉಚ್ಚಾಟಿಸಿದೆ. ಈ ಹಿಂದೆ ಉದ್ಧವ್ ಠಾಕ್ರೆ ಕೂಡ ಶಿವಸೇನೆ-ಯುಬಿಟಿ ಬಂಡಾಯವೆದ್ದವರ ವಿರುದ್ಧ ಕ್ರಮ ಕೈಗೊಂಡಿದ್ದರು. ಪಕ್ಷ ವಿರೋಧಿ ಕ್ರಮದಲ್ಲಿ 5 ನಾಯಕರನ್ನು ಉದ್ಧವ್ ಠಾಕ್ರೆ ಉಚ್ಚಾಟಿಸಿದ್ದರು. ಅವರಲ್ಲಿ ಮಾಜಿ ಭಿವಂಡಿ ಶಾಸಕರಾದ ರೂಪೇಶ್ ಮ್ಹಾತ್ರೆ, ವಿಶ್ವಾಸ್ ನಾಂದೇಕರ್, ಚಂದ್ರಕಾಂತ್ ಘುಗುಲ್, ಸಂಜಯ್ ಅವರಿ ಮತ್ತು ಪ್ರಸಾದ್ ಠಾಕ್ರೆ ಇದ್ದರು.

ಬಂಡಾಯಗಾರರ ವಿರುದ್ಧ ಎಲ್ಲ ಪಕ್ಷಗಳೂ ಕಠಿಣ ನಿಲುವು ತಳೆಯುತ್ತಿವೆ. ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯ ದಿನಗಳು ಸಮೀಪಿಸುತ್ತಿವೆ. ಅದೇ ರೀತಿ ನಾಯಕರ ಬಂಡಾಯದ ದನಿಯೂ ಎದ್ದಿದೆ. ಇತ್ತೀಚೆಗಷ್ಟೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಹಾಮೈತ್ರಿಕೂಟದ ನಾಯಕರಿಗೆ ಬಂಡಾಯವೆದ್ದವರು ಚುನಾವಣೆಯಲ್ಲಿ ಸ್ಪರ್ಧಿಸಬಾರದು ಎಂದು ಸೂಚನೆ ನೀಡಿದ್ದರು.

ಮಹಾರಾಷ್ಟ್ರದ 288 ವಿಧಾನಸಭಾ ಸ್ಥಾನಗಳಿಗೆ ನವೆಂಬರ್ 20 ರಂದು ಮತದಾನ ನಡೆಯುತ್ತಿದೆ. ಈ ಸೀಟುಗಳ ಫಲಿತಾಂಶ ನವೆಂಬರ್ 23 ರಂದು ಪ್ರಕಟವಾಗಲಿದೆ. ಈ ಬಾರಿ ಬಿಜೆಪಿ ಗರಿಷ್ಠ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಎರಡನೆಯದು ಕಾಂಗ್ರೆಸ್ ನಂತರ ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನೆ. ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರ ಶಿವಸೇನೆ ನಾಲ್ಕನೇ ಸ್ಥಾನದಲ್ಲಿದ್ದರೆ, ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಎನ್‌ಸಿಪಿ ಆರನೇ ಸ್ಥಾನದಲ್ಲಿದೆ.

ಮಹಾರಾಷ್ಟ್ರದಲ್ಲಿ ಒಟ್ಟು 288 ವಿಧಾನಸಭಾ ಸ್ಥಾನಗಳಿದ್ದು, ಬಹುಮತಕ್ಕೆ 145 ಸ್ಥಾನಗಳ ಅಗತ್ಯವಿದೆ. 2019 ರ ಚುನಾವಣೆಯಲ್ಲಿ ಬಿಜೆಪಿ 105, ಶಿವಸೇನೆ 56, ಎನ್‌ಸಿಪಿ 54, ಕಾಂಗ್ರೆಸ್ 44 ಮತ್ತು ಇತರರು 29 ಸ್ಥಾನಗಳನ್ನು ಗೆದ್ದಿದ್ದಾರೆ. ಪುಟ 2

# ಕಾಡುತ್ತಿದೆ ವಕ್ಫ್ ಸಂಕಷ್ಟ
## ಮುಲ್ಲಾ, ಮುಜಾವರ್, ಖಾಜಿಗಳಿಗೂ ಈಗ ಆತಂಕ ಶುರು

**ಧಾರವಾಡ:** ರೈತರ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ದಾಖಲಾತಿ ವಿಚಾರ ದಿನೇ ದಿನೇ ಕಾಡುತ್ತಿದ್ದು, ಇನ್ನೂ ಮುಗಿಯುವ ಹಂತಕ್ಕೆ ಬಂದಂತೆ ಕಾಣುತ್ತಿಲ್ಲ. ಪ್ರತಿ ದಿನವೂ ಒಂದೊಂದು ತಾಲೂಕುಗಳಲ್ಲಿ ವಕ್ಫ್ ಆಸ್ತಿ ಜನರ ನೆಮ್ಮದಿಯನ್ನು ಕಿತ್ತುಕೊಂಡಿದೆ.

ವಿಜಯಪುರ ಬಳಿಕ ಧಾರವಾಡ ಜಿಲ್ಲೆಯಲ್ಲಿಯೂ ಸದ್ದು ಮಾಡಿತ್ತು. ಮೊದಲು ಇದು ಹಿಂದೂ ರೈತರ ವಿಚಾರವಾಗಿತ್ತು. ಬಳಿಕ ಇದು ಮುಸ್ಲಿಂ ರೈತರ ಜಮೀನಿಗೂ ವಿಸ್ತರಿಸಿತ್ತು. ಇದೀಗ ಮುಸ್ಲಿಂ ಸಮಾಜಕ್ಕೆ ಸದಾ ಮಾರ್ಗದರ್ಶಿಗಳಾಗಿರುವ ಮುಲ್ಲಾ, ಮುಜಾವರ್, ಖಾಜಿ, ಮಕಾನದಾರ್‌ಗಳ ಜಮೀನು ಪಹಣಿಯಲ್ಲಿಯೂ ವಕ್ಫ್ ಬೋರ್ಡ್ ಹೆಸರು ನಮೂದಾಗಿದೆ. ಇವರಿಗೆಲ್ಲ ಇನಾಮು ಕೊಟ್ಟ ಜಮೀನಾಗಿದ್ದರೂ ಕೂಡ, ಇನಾಮ್ ಕಾನೂನಿಗೆ ತಿದ್ದುಪಡಿಯಾದಾಗ ಇವರಿಗೆಲ್ಲ ಮಾಲೀಕತ್ವ ಸಿಕ್ಕಿತ್ತು. ಆದರೆ ಈಗ ನೂರಾರು ಮುಲ್ಲಾ, ಮುಜಾವರ್, ಖಾಜಿಗಳ ಸಾವಿರಾರು ಎಕರೆ ಜಮೀನುಗಳ ದಾಖಲೆಗಳಲ್ಲಿ ವಕ್ಫ್ ಹೆಸರು ನಮೂದಾಗಿದೆ. ಇದೀಗ ವಕ್ಫ್ ಬೋರ್ಡ್ ಇವರೆಲ್ಲರ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರೋದಕ್ಕೆ ಮುಲ್ಲಾಗಳು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಪುಟ 2



### ದಲಿತರ ಆಸ್ತಿ ಪಹಣಿಯಲ್ಲೂ ವಕ್ಫ್ ಬೋರ್ಡ್
## ಸರ್ಕಾರದ ವಿರುದ್ಧ ಆಕ್ರೋಶ

**ಯಾದಗಿರಿ:** ಕರ್ನಾಟಕದಲ್ಲಿ ವಕ್ಫ್ ಬೋರ್ಡ್ ಆಸ್ತಿ ವಿಚಾರವಾಗಿ ಚರ್ಚೆ ಜೋರಾಗಿದೆ. ಯಾದಗಿರಿ ನಗರದ ಹೃದಯ ಭಾಗದಲ್ಲಿರುವ ದಲಿತರ ಜಮೀನಿನ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ಸೇರ್ಪಡೆಯಾಗಿದೆ. ಮಲ್ಲಪ್ಪ ಹರಿಜನ ಎಂಬವರಿಗೆ ಸೇರಿರುವ 4 ಎಕರೆ 27 ಗುಂಟೆ ಜಮೀನು ಈಗ ವಕ್ಫ್ ಆಸ್ತಿಯಾಗಿದೆ. ಜೊತೆಗೆ ಇದೇ ಜಮೀನಿನಲ್ಲಿ ಮುಸ್ಲಿಂ ಸಮುದಾಯದ ಖಬರಸ್ತಾನ ಇದೆ. ಪುಟ 2



# ಹೆಚ್‌ಕೆ ಸುರೇಶ್ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆಗೆ ಕರೆ

**ಹಾಸನ:** ಸರ್ಕಾರಿ ಶಾಲೆಗೆಂದು ಮೀಸಲಿಟ್ಟಿದ್ದ ಜಾಗವನ್ನು ವಕ್ಫ್ ಮಂಡಳಿ ಗುಳುಂ ಮಾಡಿದ ಘಟನೆ ಹಾಸನದಲ್ಲಿ ನಡೆದಿದೆ. ರಾಜ್ಯಾದ್ಯಂತ ವಕ್ಫ್ ವಿವಾದ ತೀವ್ರಗೊಂಡ ಬೆನ್ನಲ್ಲೇ ಹಾಸನದಲ್ಲಿ ಮೊದಲ ಪ್ರಕರಣ ಬೆಳಕಿಗೆ ಬಂದಿದೆ.

» **ಶಾಲೆಗೆಂದು ಮೀಸಲಿಟ್ಟಿದ್ದ ಜಾಗ ವಕ್ಫ್ ಹೆಸರಿಗೆ**

ಬೇಲೂರು ತಾಲೂಕಿನ, ಹಳೇಬೀಡು ಹೋಬಳಿ, ಘಟ್ಟದಹಳ್ಳಿ ಗ್ರಾಮದಲ್ಲಿ ಪ್ರಕರಣ ಬೆಳಕಿಗೆ ಬಂದಿದೆ. ಗ್ರಾಮದ ಸರ್ಕಾರಿ ಶಾಲೆಗೆಂದು ಭೂದಾನ ಮಾಡಿದ್ದ ಜಾಗ ವಕ್ಫ್ ಹೆಸರಿಗೆ ಮಾಡಲಾಗಿದೆ. ಘಟ್ಟದಹಳ್ಳಿ ಗ್ರಾಮದ ಶಾಲೆಗೆ 38 ಗುಂಟೆ ಜಾಗವನ್ನು ಭೂದಾನ ಮಾಡಲಾಗಿತ್ತು. ಸರ್ವೆ ನಂಬರ್ 435ರಲ್ಲಿ 38 ಗುಂಟೆ ಭೂಮಿಯನ್ನು ಸರ್ಕಾರಿ ಶಾಲೆಗೆ ದಾನ ಮಾಡಲಾಗಿತ್ತು. ಪಹಣಿಯಲ್ಲಿ ಭೂದಾನ ಶಾಲೆಗೋಸ್ಕರ ಎಂದು ನಮೂದಾಗಿತ್ತು. ಪುಟ 2



# ಅಬಕಾರಿ ಸಚಿವ ತಿಮ್ಮಾಪುರರಿಂದ ವಾರಕ್ಕೆ 18 ಕೋಟಿ ರೂ. ಹಫ್ತಾ ವಸೂಲಿ

**ಬೆಂಗಳೂರು:** ಕರ್ನಾಟಕ ಬಕಾರಿ ಇಲಾಖೆಯು ಮದ್ಯದಂಗಡಿಗಳಿಂದ 'ಮಂಥ್ಲಿ ಮನಿ' ಹೆಸರಿನಲ್ಲಿ ಲಂಚ ಪಡೆಯುತ್ತಿದೆ ಎಂಬ ಆರೋಪ ಕೇಳಿಬಂದ ಬೆನ್ನಲ್ಲೇ ಈ ವಿಚಾರವಾಗಿ ಪ್ರತಿಪಕ್ಷ ನಾಯಕ ಆರ್ ಅಶೋಕ್ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

» **ಆರ್.ಅಶೋಕ ವಾಗ್ದಾಳಿ**

ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಬೆಂಗಳೂರಿನಲ್ಲಿ ರೌಡಿಗಳು ಹಫ್ತಾ ವಸೂಲಿ ಮಾಡುತ್ತಿದ್ದರು ಈಗ ಈ ಸರ್ಕಾರದ ಸಚಿವರು ಹಫ್ತಾ ವಸೂಲಿಗೆ ಇಳಿದಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಅಬಕಾರಿ ಇಲಾಖೆಯಲ್ಲಿ ಸಚಿವ ತಿಮ್ಮಾಪುರ ವಾರಕ್ಕೆ 18 ಕೋಟಿ ರೂ. ಮದ್ಯದಂಗಡಿಗಳಿಂದ ಹಫ್ತಾ ವಸೂಲಿ ಮಾಡುತ್ತಿದ್ದಾರೆ. ಈ ಬಗ್ಗೆ ರಾಜ್ಯಪಾಲರಿಗೆ ಮದ್ಯದಂಗಡಿ ಮಾಲೀಕರೇ ದೂರು ಕೊಟ್ಟಿದ್ದಾರೆ. ರಾಜ್ಯದಲ್ಲಿ 11 ಸಾವಿರಕ್ಕೂ ಹೆಚ್ಚು ವೈನ್ ಸ್ಟೋರ್ ಗಳಿವೆ. ಪ್ರತಿಯೊಂದರಿಂದ 20 ಸಾವಿರ ರೂ. ವಸೂಲಿ ಮಾಡುತ್ತಿದ್ದಾರೆ ಎಂದು ಅಶೋಕ್ ಗಂಭೀರ ಆರೋಪ ಮಾಡಿದರು.

ನಮ್ಮ ವಿರುದ್ಧ ಹಿಂದೆ ಪೇಸಿಎಂ ಪೋಸ್ಟರ್ ಅಂಟಿಸಿದ್ದಿರಿ. ಆಗ ನಾವು ನಿಮ್ಮನ್ನು ಸನ್ಮಾನ ಮಾಡಲು ಆಗಲಿಲ್ಲ. ಈಗ ಪೇಸಿಎಂ ಪೋಸ್ಟರ್ ಅಂಟಿಸಿದಾಗ ಹೇಳಿ ಬಂದು ಸನ್ಮಾನ ಮಾಡುತ್ತೇವೆ ಎಂದು ಅಶೋಕ್ ವ್ಯಂಗ್ಯವಾಡಿದರು. ಪುಟ 2

# ಬೇಲೆಕೇರಿ ಬಂದರಿನಲ್ಲಿರುವ ಗ್ರಾನೈಟ್‌ಗೆ ವಾರಸುದಾರರೇ ಇಲ್ಲ!

**ಕಾರವಾರ:** ಕೊಟ್ಯಂತರ ರೂಪಾಯಿ ಬೆಲೆ ಬಾಳುವ ಕಬ್ಬಿಣದ ಅದಿರು ನಾಪತ್ತೆ ಪ್ರಕರಣದಲ್ಲಿ ಅಪರಾಧಿಗಳಿಗೆ ಕಠಿಣ ಜೈಲು ಶಿಕ್ಷೆ ಪ್ರಕಟವಾದ ಬೆನ್ನಲ್ಲೇ, ಬೇಲೆಕೇರಿ ಬಂದರಿನ ಮೂಲಕ ಈ ಹಿಂದೆ ಅಕ್ರಮ ಸಾಗಾಟ ಮಾಡುತ್ತಿದ್ದ ದಂಧೆಕೋರರಿಗೆ ಭಯ ಉಂಟಾಗಿದೆ. ಕಾರವಾರದಲ್ಲಿ ಅದಿರಿನ ಜೊತೆ ಅಮೂಲ್ಯವಾದ ಗ್ರಾನೈಟ್‌ಗಳು ಚೈನಾ, ತೈವಾನ್, ಇಸ್ರೇಲ್ ಸೇರಿದಂತೆ ಹಲವು ದೇಶಗಳಿಗೆ ರಫ್ತಾಗುತ್ತಿದ್ದವು. ಹೀಗೆ ರಫ್ತು ಮಾಡಲೆಂದು ಬಂದರಿನಲ್ಲಿ ಸಂಗ್ರಹಿಸಿಟ್ಟಿದ್ದ ವಿಧದ ವಿವಿಧ ಮಾದರಿಯ ಕೋಟ್ಯಂತರ ರೂಪಾಯಿ ಬೆಲೆಯ ಗ್ರಾನೈಟ್ ಕಲ್ಲುಗಳು ಇದೀಗ ಅನಾಥವಾಗಿ ಬಿದ್ದಿವೆ. ಇದು ತಮ್ಮದೆಂದು ಹೇಳಿಕೊಳ್ಳಲು ವಾರಸುದಾರರು ಮುಂದೆ ಬರುತ್ತಿಲ್ಲ. ಸುಮಾರು 10 ಕ್ಕೂ ಹೆಚ್ಚು ವರ್ಷಗಳ ಕಾಲ ಬಂದರಿನಲ್ಲಿ ಬಿದ್ದಿರುವುದು ಸಾರ್ವಜನಿಕ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಪುಟ 2



# ಎಗ್ಗಿಲ್ಲದೆ ಕಲಬೆರಕೆ ಸೇಂದಿ ಮಾರಾಟ

**ರಾಯಚೂರು:** ನಗರದಲ್ಲಿ ಸಿಎಚ್ ಪೌಡರ್ ಕಲಬೆರಕೆ ಸೇಂದಿ ತಯಾರಿಕೆ ಹಾಗೂ ಮಾರಾಟ ದಂಧೆ ಅವ್ಯಾಹತವಾಗಿ ನಡೆದಿದ್ದು, ಅಬಕಾರಿ ಹಾಗೂ ಪೊಲೀಸ್ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ಮಾಡಿದ್ದಾರೆ.



» **ಅಧಿಕಾರಿಗಳ ದಾಳಿ ವೇಳೆ 500 ಗ್ರಾಂ ಸಿಎಚ್ ಪೌಡರ್ ಜಪ್ತಿ**

ನಗರದ ಗದ್ವಾಲ್ ರಸ್ತೆಯ ಕೊರವರ ಓಣಿಯಲ್ಲಿ ಎರಡು ಕಡೆ ದಾಳಿ ನಡೆಸಿದ ಅಧಿಕಾರಿಗಳು ಅಪಾರ ಪ್ರಮಾಣದ ಸಿಎಚ್ ಪೌಡರ್ ಹಾಗೂ ಸೇಂದಿ ಜಪ್ತಿ ಮಾಡಿದ್ದಾರೆ. ಸಿಎಚ್ ಪೌಡರ್ ಕಲಬೆರಕೆ ಸೇಂದಿ ಮಾರಾಟ ಮಾಡುವ ಮನೆಗಳ ಮೇಲೆ ದಾಳಿ ನಡೆಸಿದ ಅಧಿಕಾರಿಗಳು ದಂಧೆಕೋರರ ಮನೆಗಳಲ್ಲಿ ತೀವ್ರ ಶೋಧ ನಡೆಸಿದ್ದಾರೆ. ದೇವರ ಗಡಿಗೆಗಳಲ್ಲಿ, ಅಲ್ಮೆರಾ ಸೇರಿ ಮನೆಗಳಲ್ಲಿ ಹಲವೆಡೆ ಸಂಗ್ರಹಿಸಿಟ್ಟಿದ್ದ ಸಿಎಚ್ ಪೌಡರ್ ಜಪ್ತಿ ಮಾಡಿದ್ದಾರೆ. ಹೊಸದಾಗಿ ರೆಡಿ ಮಿಕ್ಸ್ ಪೌಡರ್ ಪ್ಯಾಕೆಟ್‌ಗಳನ್ನ ತಯಾರಿಸುತ್ತಿರುವ ದಂಧೆಕೋರರ ಅಕ್ರಮ ಮಾರಾಟಕ್ಕೆ ಹೊಸ ದಾರಿ ಕಂಡುಕೊಂಡಿದ್ದಾರೆ. ಪುಟ 2

# ಲಾಲ್‌ಬಾಗ್ ಪ್ರವೇಶ ಶುಲ್ಕ ಪಾರ್ಕಿಂಗ್ ಫೀ ಹೆಚ್ಚಳ



**ಬೆಂಗಳೂರು:** ಬೆಂಗಳೂರಿನ ಸಸ್ಯಕಾಶಿ ಲಾಲ್ ಬಾಗ್ ಪ್ರವಾಸಿಗರ ಆಕರ್ಷಣೆಯ ಕೇಂದ್ರ. ಹೀಗಾಗಿ ಬೆಂಗಳೂರು ಅಷ್ಟೇ ಅಲ್ಲದೆ ಬೇರೆ ಬೇರೆ ಭಾಗದಿಂದಲೂ ಪ್ರವಾಸಿಗರು ಬರುತ್ತಾರೆ. ಜೊತೆಗೆ ಇಷ್ಟು ದಿನ ಲಾಲ್ ಬಾಗ್ ಪಾರ್ಕಿಂಗ್ ಶುಲ್ಕ ಕೂಡ ಕಡಿಮೆ ಇತ್ತು. ಹೀಗಾಗಿ ಕುಟುಂಬ ಸಮೇತ ಪ್ರವಾಸಿಗರು ಬಂದು ಪಾರ್ಕ್‌ನಲ್ಲಿ ಸಂತಸದ ಕ್ಷಣಗಳನ್ನು ಕಳೆಯುತ್ತಿದ್ದರು. ಆದರೆ ಈಗ ಪ್ರವೇಶ ಶುಲ್ಕ, ಕಾರ್ ಪಾರ್ಕಿಂಗ್, ಮಕ್ಕಳ ಎಂಟ್ರಿ ಶುಲ್ಕ ಕೂಡ ಜಾಸ್ತಿ ಮಾಡಲಾಗಿದೆ.

ಐದು ವರ್ಷಗಳಿಗೊಮ್ಮೆ ಲಾಲ್ ಬಾಗ್ ತೋಟಗಾರಿಕೆ ಇಲಾಖೆ ಪ್ರವೇಶ ಶುಲ್ಕವನ್ನು ಜಾಸ್ತಿ ಮಾಡುತ್ತದೆ. ಅದರಂತೆ 2018 ರಲ್ಲಿ ಲಾಲ್ ಬಾಗ್‌ನಲ್ಲಿ ಪ್ರವೇಶ ಶುಲ್ಕವನ್ನು 20 ರಿಂದ 30 ರೂ.ಗೆ ಜಾಸ್ತಿ ಮಾಡಲಾಗಿತ್ತು. ಇದೀಗ ಆರು ವರ್ಷದ ಬಳಿಕ ಎಂಟ್ರಿ ಫೀ, ಪಾರ್ಕಿಂಗ್ ಫೀ, ಮಕ್ಕಳ ಎಂಟ್ರಿ ಫೀ ಕೂಡ ಜಾಸ್ತಿಯಾಗಿದೆ. ಪುಟ 2

# ಇದ್ದಕ್ಕಿದ್ದಂತೆ ದೇವಾಲಯಗಳು ವಕ್ಫ್ ಆಸ್ತಿಯಾಗಿದ್ದು ಹೇಗೆ?



**ದಾವಣಗೆರೆ:** ಇದ್ದಕ್ಕಿದ್ದಂತೆ ದೇವಾಲಯಗಳು ವಕ್ಫ್ ಆಸ್ತಿಯಾಗಿದ್ದು ಹೇಗೆ ಎಂದು ಪೇಜಾವರ ಶ್ರೀಗಳು ಸರ್ಕಾರಕ್ಕೆ ಪ್ರಶ್ನಿಸಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ದೇವಾಲಯಗಳು ಇದ್ದಕ್ಕಿದ್ದಂತೆ ವಕ್ಫ್ ಆಸ್ತಿಯಾಗುತ್ತಿವೆ. ಜನರಿಗೆ ಇಷ್ಟು ಭಯ ಹಾಗೂ ಗೊಂದಲ ಉಂಟುಮಾಡುವ ಕೆಲಸ ಮಾಡಬಾರದು. ಆದಷ್ಟು ಒಳ್ಳೆಯ ಕೆಲಸಗಳನ್ನು ಮಾಡಬೇಕು ಎಂದು ಸರ್ಕಾರಕ್ಕೆ ಕಿವಿಮಾತು ಹೇಳಿದ್ದಾರೆ.

ರೈತರ ಜಮೀನು, ಮಠಗಳ ಆಸ್ತಿಯಲ್ಲಿ ವಕ್ಫ್ ಹೆಸರು ಕಾಣಿಸಿಕೊಳ್ಳುತ್ತಿದೆ. ನಮ್ಮಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಅಡಿ ಅನೇಕ ದೇವಾಲಯಗಳಿವೆ. ಮೊದಲು ಅವುಗಳ ಆಸ್ತಿ ರಕ್ಷಣೆಗೆ ಮುಂದಾಗಬೇಕು. ದೇವಸ್ಥಾನದ ಆಸ್ತಿಗಳನ್ನು ದೇವರ ಹೆಸರಿನಲ್ಲಿ ನೋಂದಣಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ನಾವು ನಮ್ಮ ದೇಶ ಎಂದು ತಿಳಿದು ಸಹ ಇಷ್ಟು ದಿನ ಸುಮ್ಮನೇ ಇದ್ದೇವೆ. ಅದ್ದರಿಂದ ಹಂತಹಂತವಾಗಿ ಆಸ್ತಿ ಪರಭಾರೆಯಾಗುತ್ತಿದೆ. ಹಾಸನದಲ್ಲಿ ಈಗ ದೇವಸ್ಥಾನದ ಆಸ್ತಿಯನ್ನು ದೇವರ ಹೆಸರಿಗೆ ಮಾಡಿಕೊಳ್ಳಲು ಮುಂದಾಗಿದ್ದಾರೆ. ಅದೇ ರೀತಿ ಎಲ್ಲಾ ಕಡೆ ಮಾಡಬೇಕು. ಪರಭಾರೆ ಮಾಡಿ ಕೊಡುವ ಕೆಲಸ ಯಾರು ಮಾಡಿದ್ದು ಏಕೆ ಮಾಡಿದ್ದು ಎಂದು ತಿಳಿಯಬೇಕು. ಈ ವಿಚಾರದಲ್ಲಿ ತಪ್ಪು ಮಾಡಿದವರಿಗೆ ಕಾನೂನಾತ್ಮಕವಾಗಿ ಶಿಕ್ಷೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ವಕ್ಫ್ ವಿವಾದದ ವಿಚಾರವಾಗಿ, ಕೇಂದ್ರ ಸರ್ಕಾರದ ತಂಡ ರಾಜ್ಯಕ್ಕೆ ಭೇಟಿ ನೀಡಿರುವುದು ತುಂಬಾ ಒಳ್ಳೇಯ ಕೆಲಸವಾಗಿದೆ. ಇನ್ನೂ ಜಾತಿಗಣತಿ ಬಗ್ಗೆ ನಾವೇನು ಹೇಳಲು ಹೋಗುವುದಿಲ್ಲ ಎಂದಿದ್ದಾರೆ.

## ಎಡನೀರು ಮಠದ ಶ್ರೀಗಳ ಕಾರಿನ ಮೇಲೆ ಅನ್ಯ ಕೋಮಿನ ಯುವಕರಿಂದ ದಾಳಿ




**ಮಂಗಳೂರು:** ಕಾಸರಗೋಡಿನ ಎಡನೀರು ಮಠದ ಶ್ರೀಗಳ ಕಾರಿನ ಮೇಲೆ ಅನ್ಯ ಮತೀಯ ಯುವಕರ ಗುಂಪು ದಾಳಿ ನಡೆಸಿದ ಘಟನೆ ಮಂಗಳೂರಿನಲ್ಲಿ ನಡೆದಿದೆ.

ಸಚ್ಚಿದಾನಂದ ಭಾರತೀ ಸ್ವಾಮಿಜಿ ಕಾರ್ಯಕ್ರಮವೊಂದನ್ನು ಮುಗಿಸಿ ಕಾಸರಗೋಡಿನ ಬೋವಿಕಾನ ಇರಿಯಣ್ಣೆ ಮಾರ್ಗದಲ್ಲಿ ತೆರಳುತ್ತಿದ್ದರು. ಈ ವೇಳೆ ಕಿಡಿಗೇಡಿಗಳು ಕಾರಿನ ಗಾಜಿಗೆ ದೊಣ್ಣೆಯಿಂದ ಬಡಿದಿದ್ದಾರೆ. ಘಟನೆಯನ್ನು ಹಿಂದೂ ಪರ ಸಂಘಟನೆಗಳು ಖಂಡಿಸಿವೆ. ಹಿಂದೂ ಐಕ್ಯವೇದಿ ನೇತೃತ್ವದಲ್ಲಿ ಕಾಸರಗೋಡಿನ ಬೋವಿಕಾನದಲ್ಲಿ ಪ್ರತಿಭಟನೆಗೆ ಕರೆ ನೀಡಲಾಗಿದೆ. ಅನ್ಯ ಕೋಮಿನ ಯುವಕರಿಂದ ಈ ದಾಳಿ ನಡೆದಿದೆ. ಈ ಘಟನೆಯ ಬಗ್ಗೆ ಸೂಕ್ತ ತನಿಖೆ ನಡೆಸಬೇಕು. ಸ್ವಾಮೀಜಿಯವರಿಗೆ ಹೆಚ್ಚಿನ ಭದ್ರತೆ ಒದಗಿಸಬೇಕು ಎಂದು ಹಿಂದೂ ಪರ ಸಂಘಟನೆಗಳು ಒತ್ತಾಯಿಸಿವೆ.

## ಸಿಎಂರನ್ನು ಜಿಲ್ಲಾ ಮಟ್ಟದ ಅಧಿಕಾರಿ ವಿಚಾರಣೆ ಮಾಡಲು ಸಾಧ್ಯನಾ?

**ಮೈಸೂರು:** ಸಿಎಂ ರಾಜೀನಾಮೆ ಕೊಟ್ಟು ವಿಚಾರಣೆಗೆ ಬರಬೇಕು. ಸಿಎಂ ಸ್ಥಾನದಲ್ಲಿ ಇರುವವರನ್ನು ಒಬ್ಬ ಜಿಲ್ಲಾ ಮಟ್ಟದ ಅಧಿಕಾರಿ ಪ್ರಶ್ನೆ ಮಾಡಲು ಸಾಧ್ಯನಾ? ಅಂತಹ ಧೈರ್ಯ ಅಧಿಕಾರಿಗಳಿಗೆ ಇರುತ್ತಾ? ಎಂದು ಮೈಸೂರಿನ ಬಿಜೆಪಿ ಶಾಸಕ ಶ್ರೀವತ್ಸ ಪ್ರಶ್ನಿಸಿದ್ದಾರೆ.



ಮೈಸೂರಿನಲ್ಲಿ ಮಾಧ್ಯಮದ ಜೊತೆ ಮಾತನಾಡಿದ ಅವರು, ಸಿಎಂರನ್ನು ಒಬ್ಬ ಜಿಲ್ಲಾ ಮಟ್ಟದ ಅಧಿಕಾರಿ ಕಠಿಣ ವಿಚಾರಣೆ ಮಾಡುತ್ತಾರೆ ಎಂದು ನಿರೀಕ್ಷೆ ಮಾಡುವುದೇ ತಪ್ಪು. ಸಿಎಂಗೆ ವಿಚಾರಣೆ ವೇಳೆ ಇರಿಸುಮುರಿಸು ಮಾಡಬೇಡಿ ಎಂದು ಲೋಕಾಯುಕ್ತ ಎಸ್ಪಿಗೆ ಗೃಹ ಇಲಾಖೆಯ ನಿರ್ದೇಶನ ಇರುತ್ತದೆ ಎಂದರು.

ಮುಖ್ಯಮಂತ್ರಿಯವರನ್ನು ವಿಚಾರಣೆ ಮಾಡುವ ಎಸ್ಪಿ ಸಿಎಂ ಪತ್ನಿಯನ್ನು ಯಾಕೆ ಕಚೇರಿಗೆ ವಿಚಾರಣೆಗೆ ಕರೆದಿಲ್ಲ? ಕದ್ದುಮುಚ್ಚಿ ಯಾಕೆ ವಿಚಾರಣೆ ಮಾಡಿದ್ದಾರೆ? ಇದನ್ನೆಲ್ಲಾ ನೋಡಿದರೆ ನ್ಯಾಯಾಲದ ನಿರ್ದೇಶನಕ್ಕೋಸ್ಕರ ಮಾಡುತ್ತಿರುವ ಹಾಗಿದೆ. ಇದು ನಮಗೆ ಸಮಾಧಾನ ತಂದಿಲ್ಲ. ಹೀಗಾಗಿ ಬಿಜೆಪಿ ಬುಧವಾರ ಮೈಸೂರಿನಲ್ಲಿ ಬೆಳಗ್ಗೆ 9:30ರಿಂದ 'ಗೋ ಬ್ಯಾಕ್ ಸಿಎಂ' ಚಳವಳಿ ಮಾಡುತ್ತಿದೆ ಎಂದು ತಿಳಿಸಿದರು.

## ದೇಶಕ್ಕೆ ಮುಸ್ಲಿಮರು ಬಂದಿದ್ದು ಯಾವಾಗ? ಚರಿತ್ರೆಯೇ ಗೊತ್ತಿಲ್ಲ

**ಬಾಗಲಕೋಟೆ:** ದೇಶಕ್ಕೆ ಮುಸ್ಲಿಮರು ಬಂದಿದ್ದು ಯಾವಾಗ? ಮಂತ್ರಿಯಾಗಿ ಇವರಿಗೆ ಚರಿತ್ರೆಯೇ ಗೊತ್ತಿಲ್ಲ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ವಿರುದ್ಧ ಮಾಜಿ ಡಿಸಿಎಂ ಈಶ್ವರಪ್ಪ ಕಿಡಿಕಾರಿದ್ದಾರೆ.



ಮುಸ್ಲಿಂ ರಾಜರು ಹಿಂದುಗಳ ಮಠ ಮಾನ್ಯಗಳಿಗೆ ಜಮೀನು ದಾನ ನೀಡಿದ್ದರು ಎಂದು ಸಚಿವ ಶಿವಾನಂದ ಪಾಟೀಲ ಹೇಳಿಕೆಯ ಬಗ್ಗೆ ಪ್ರತಿಕ್ರಿಯಿಸಿದ ಇವರು, ಮುಸಲ್ಮಾನರನ್ನು ಸಂತೃಪ್ತಿ ಪಡಿಸುವ ವಿಚಾರದಲ್ಲಿ ಜಮೀರ್ ಅಹ್ಮದ್ ಮೊದಲನೇ ಸ್ಥಾನದಲ್ಲಿದ್ದರೆ ಶಿವಾನಂದ ಪಾಟೀಲ ಎರಡನೇ ಸ್ಥಾನದಲ್ಲಿ ಬರುತ್ತಾರೆ ಎಂದು ಗರಂ ಆದರು.

ಭಾರತ ಸಾಧು ಸಂತರ ನಾಡು. ಮುಸ್ಲಿಮರು ಆಕ್ರಮಣಕಾರಿಗಳು. ಇಲ್ಲಿಯ ಆಸ್ತಿ ಪಾಸ್ತಿ ಲೂಟಿ ಮಾಡಿ ಮಹಿಳೆಯರನ್ನ ಮತಾಂತರ ಮಾಡಿ, ಗೋವುಗಳನ್ನು ಕಡಿದು ರಾಜ್ಯಭಾರ ಮಾಡಿದ್ದರು. ಅವರೇನು ನಮಗೆ ಕೊಡುವಂತದ್ದು ಇಲ್ಲ ಎಂದರು.

ನಮ್ಮ ಭೂಮಿಯನ್ನು ವಕ್ಫ್ ಆಸ್ತಿ ಎಂದು ಮಾಡುತ್ತಿರುವುದನ್ನ ವಾಪಸ್ ತೆಗೆದುಕೊಳ್ಳುವವರೆಗೆ ಹಿಂದೂ ಸಮಾಜ ಬಿಡಲ್ಲ. ಆಗದೇ ಇದ್ದರೆ ಈ ರಾಜ್ಯದಲ್ಲಿ ರಕ್ತಕ್ರಾಂತಿ ಆಗುತ್ತೆ. ನಮ್ಮ ಸಾಧು ಸಂತರು ಸುಮ್ಮನೆ ಕುಳಿತಿಲ್ಲ. ಎಲ್ಲೆಲ್ಲಿ ದೇವಸ್ಥಾನ, ಮಠ ಮಾನ್ಯಗಳನ್ನ ಆಕ್ರಮಣ ಮಾಡಿ ವಕ್ಫ್ ಆಸ್ತಿ ಎಂದು ನಮೂದಿಸಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ವಕ್ಫ್ ನೋಟಿಸ್ ಹಿಂದೆ ಪಡೆದಿದ್ದು ದೊಡ್ಡದಲ್. ಈ ಮೂಲಕ ಸರ್ಕಾರ ನಾನು ತಪ್ಪು ಮಾಡಿದೆ ಎಂದು ಒಪ್ಪಿದಂತಾಗಿದೆ. ಕೆ.ಎನ್. ರಾಜಣ್ಣ ಜಮೀರ್ ಅಹ್ಮದ್ ಮಾಡಿದ್ದು ತಪ್ಪು. ಯಾವುದೇ ಕಾರಣಕ್ಕೆ ಒಪ್ಪಲ್ಲ ಅಂದಿದ್ದಾರೆ. ಕ್ಯಾಬಿನೆಟ್‌ನಲ್ಲಿ ಒಬ್ಬರಾದರೂ ಗಂಡು ಇದ್ದಾರಲ್ಲ ಅಂತ ಅವರಿಗೆ ಅಭಿನಂದಿಸುವೆ ಎಂದರು.

## ಕೆಎಸ್‌ಆರ್‌ಟಿಸಿಗೆ ಬಂಪರ್ ಒಂದೇ ದಿನ ಬರೋಬ್ಬರಿ 5.59 ಕೋಟಿ ಆದಾಯ



**ಬೆಂಗಳೂರು:** ದೀಪಾವಳಿ ಹಬ್ಬದ ಹಿನ್ನೆಲೆ ಕೆಎಸ್‌ಆರ್‌ಟಿಸಿ ಬಂಪರ್ ಆದಾಯಗಳಿಸಿದೆ.

ದೀಪಾವಳಿ ಹಬ್ಬದಿಂದ ಸಾಲು ಸಾಲು ರಜೆಗಳಿದ್ದ ಕಾರಣ ಊರಿನತ್ತ ತೆರಳಿದ್ದವರು ನ.03 ರಂದು ಭಾನುವಾರ ಮತ್ತೆ ಸಿಲಿಕಾನ್ ಸಿಟಿಗೆ ಮರಳಿದ್ದಾರೆ. ಇದರಿಂದಾಗಿ ಭಾನುವಾರ ಒಂದೇ ದಿನ ಆನ್‌ಲೈನ್‌ಲ್ಲಿ 85,462 ಸೀಟುಗಳನ್ನು ಬುಕಿಂಗ್ ಆಗಿದ್ದವು.

85,462 ಸೀಟುಗಳು ಬುಕ್ ಆಗಿದ್ದು, ಒಂದೇ ದಿನದಲ್ಲಿ ಬರೋಬ್ಬರಿ 5.59 ಕೋಟಿ ರೂ. ಆದಾಯವನ್ನು ಕೆಎಸ್‌ಆರ್‌ಟಿಸಿ ಗಳಿಸಿದೆ. ಇದಕ್ಕೂ ಮೊದಲು ಅಕ್ಟೋಬರ್ ಅಂತ್ಯದ ದಿನವೊಂದರಲ್ಲಿ 67,033 ಟಿಕೆಟ್ ಮಾರಾಟವಾಗಿದ್ದವು.

ಹಬ್ಬದ ನಿಮಿತ್ತ ಕೆಎಸ್‌ಆರ್‌ಟಿಸಿ ಜೊತೆಗೆ ಬಿಎಂಟಿಸಿಯು ಕಾರ್ಯನಿರ್ವಹಿಸಿದ್ದು, ಗಳಿಸಿರುವ ಆದಾಯಕ್ಕೆ ಸಾಥ್ ನೀಡಿದೆ.

## ಮುಡಾ ಹಗರಣ ಸಿಬಿಐ ತನಿಖೆಗೆ ವಹಿಸಲು ಮನವಿ: ನ.26 ಕ್ಕೆ ವಿಚಾರಣೆ ಮುಂದೂಡಿದ ಹೈಕೋರ್ಟ್

**ಬೆಂಗಳೂರು:** ಮುಡಾ ಸೈಟ್ ಹಗರಣ ಪ್ರಕರಣದ ತನಿಖೆಯನ್ನು ಸಿಬಿಐಗೆ ವರ್ಗಾಯಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಮುಂದೂಡಿದೆ. ಅಲ್ಲದೇ, ಈ ಸಂಬಂಧ ಸಿಎಂ ಸಿದ್ದರಾಮಯ್ಯ ಹಾಗೂ ಇತರರಿಗೆ ಕೋರ್ಟ್ ನೋಟಿಸ್ ನೀಡಿದೆ.

ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ್ದ ಅರ್ಜಿಯ ಮೇರೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಕೇಂದ್ರೀಯ ತನಿಖಾ ದಳ (ಸಿಬಿಐ) ಮತ್ತು ಲೋಕಾಯುಕ್ತ ಪೊಲೀಸರಿಗೆ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ.



ನ.25 ರವರೆಗೆ ನಡೆಸುವ ತನಿಖೆಯ ವಿವರಗಳನ್ನು ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಹೈಕೋರ್ಟ್ ಸೂಚಿಸಿದ್ದು, ಅರ್ಜಿಯ ಮುಂದಿನ ವಿಚಾರಣೆಯನ್ನು ನ.26ಕ್ಕೆ ಮುಂದೂಡಿದೆ.

## ಜನ ಬಿಜೆಪಿಯ ಹಣ ಪಡೆದು ಕಾಂಗ್ರೆಸ್‌ಗೆ ಮತ ಹಾಕ್ತಾರೆ

**ಹುಬ್ಬಳ್ಳಿ:** ಉಪಚುನಾವಣೆಯಲ್ಲಿ ಹಣ ನೂರಕ್ಕೆ ನೂರರಷ್ಟು ಕೆಲಸ ಮಾಡಲ್ಲ. ಜನ ಬಿಜೆಪಿಯಿಂದ ಹಣ ಪಡೆದು ಕಾಂಗ್ರೆಸ್‌ಗೆ ಮತ ಹಾಕುತ್ತಾರೆ. ಮೂರು ಉಪಚುನಾವಣೆ ಮುಗಿದ ನಂತರ ಬಿಜೆಪಿ ಪ್ರತಿಭಟನೆ ಮುಗಿಯುತ್ತದೆ. ಆಗ ಅವರು ಮನೆಗೆ ಹೋಗುತ್ತಾರೆ ಎಂದು ಸಚಿವ ಶಿವಾನಂದ ಪಾಟೀಲ್ ಹೇಳಿದರು.



ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ನಮ್ಮ ಪಕ್ಷದಲ್ಲಿ ಸಾಮರಸ್ಯ ಇದೆ. ಬಿಜೆಪಿಯಲ್ಲಿ ಇಲ್ಲಾ, ಈ ಬಾರಿ ಕಾಂಗ್ರೆಸ್ ಖಂಡಿತ ಗೆದ್ದೇ ಗೆಲ್ಲುತ್ತದೆ, ಅದರಲ್ಲಿ ಎರಡು ಮಾತಿಲ್ಲ. ವಕ್ಫ್‌ನಲ್ಲಿ ಕಾಂಗ್ರೆಸ್ ತಪ್ಪು ಮಾಡಲಿಲ್ಲ. ಹಿಂದೆ ಬಿಜೆಪಿ ಕೊಟ್ಟ ನೋಟಿಸ್ ಮುಂದುವರೆಯುತ್ತಿದೆ. ಕಾಂಗ್ರೆಸ್ ಎಂದೂ ಕೂಡ ರೈತರ ವಿರೋಧಿ ಅಲ್ಲಾ. ಕಾಂಗ್ರೆಸ್ 22 ಲಕ್ಷ ಎಕರೆ ಜಮೀನು ದೇವರಾಜ ಅರಸ್ ಇದ್ದಾಗ ರಾಜ್ಯದ ಜನರಿಗೆ ಕೊಡುತ್ತಾ ಇರಲಿಲ್ಲ. ನೀವು ಹೇಗೆ ಕಾಂಗ್ರೆಸ್ ರೈತ ವಿರೋಧಿ ಅಂತ ಹೇಳುತ್ತೀರಿ ಎಂದು ಪ್ರಶ್ನಿಸಿದರು.

ವಿಜಯಪುರದಲ್ಲಿ ರೈತರ ಪ್ರತಿಭಟನೆಗೆ ಪ್ರತಿಕ್ರಿಯೆ ನೀಡಿ, ಯಾವುದೋ ಒಂದೆರಡು ಆಕಸ್ಮಿಕ ಘಟನೆ ಆಗಿದ್ದರೆ ಧರಣಿ ಮಾಡುತ್ತಾರೆ. ಅವರಿಗೆ ಆ ಅಧಿಕಾರ ಇದೆ. ಅದಕ್ಕೆ ಮುಖ್ಯಮಂತ್ರಿ ಹೇಳಿಕೆ ನೀಡಿದ್ದಾರೆ. ನೋಟಿಸ್ ಹಿಂಪಡೆದು ರೈತರಿಗೆ ಅನ್ಯಾಯ ಆಗದಂತೆ ನೋಡಿಕೊಳ್ಳುತ್ತೇವೆ ಅಂದಿದ್ದಾರೆ. ಮೂರು ಚುನಾವಣೆ ಮುಗಿದ ನಂತರ ಪ್ರತಿಭಟನೆ ಮುಗಿಯುತ್ತದೆ. ಆಗ ಬಿಜೆಪಿಯವರು ಮನೆಗೆ ಹೋಗುತ್ತಾರೆ ಎಂದರು.

## ಅಂತರರಾಜ್ಯ ಕಳ್ಳರ ಸೆರೆ 40 ಲಕ್ಷ ರೂ. ಚಿನ್ನಾಭರಣ ವಶಕ್ಕೆ

**ಬೆಳಗಾವಿ:** ಅಂತರರಾಜ್ಯ ಕಳ್ಳರನ್ನು ಸೆರೆಹಿಡಿದು ಬಂಧಿತರಿಂದ 40 ಲಕ್ಷ ರೂ. ಚಿನ್ನಾಭರಣವನ್ನ ಅಥಣಿ ಪೊಲೀಸರು ವಶಪಡಿಸಿಕೊಂಡಿದ್ದಾರೆ.



ಬೆಳಗಾವಿ ಜಿಲ್ಲೆಯ ಅಥಣಿ, ಐಗಳಿ, ಕಾಗವಾಡ, ಸೇರಿದಂತೆ ಹಲವು ಠಾಣಾ ವ್ಯಾಪ್ತಿಯಲ್ಲಿ ಕಳ್ಳತನ ಮಾಡುತ್ತಿದ್ದ ಕಳ್ಳರನ್ನ ವಶಕ್ಕೆ ಪಡೆದು ಸುಮಾರು 40 ಲಕ್ಷ ರೂಪಾಯಿ ಮೌಲ್ಯದ 522 ಗ್ರಾಂ ಚಿನ್ನಾಭರಣ ಮತ್ತು ಮೋಟಾರ್ ಸೈಕಲನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಕಾರ್ಯಾಚರಣೆ ಮಾಡಿ ಕಳ್ಳರನ್ನ ಸೆರೆ ಹಿಡಿದು ಹೆಡೆಮುರಿ ಕಟ್ಟಿದ ಅಥಣಿ ಪೊಲೀಸರಿಗೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ. ಅಥಣಿ ಪೊಲೀಸರ ಕಾರ್ಯಾಚರಣೆಗೆ ಬೆಳಗಾವಿ ಎಸ್‌ಪಿ ಭೀಮಾಶಂಕರ ಗುಳೇದ ಅವರು ಶ್ಲಾಘನೆ ವ್ಯಕ್ತ ಪಡಿಸಿದ್ದಾರೆ.

## ಟ್ರಂಪ್ ಮುನ್ನಡೆ

ಡೊನಾಲ್ಡ್ ಟ್ರಂಪ್ 177 ಸ್ಥಾನಗಳಲ್ಲಿ ಮುಂದಿದ್ದರೆ, ಕಮಲಾ ಹ್ಯಾರಿಸ್ 99 ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ. ಪಶ್ಚಿಮ ವರ್ಜೀನಿಯಾದಲ್ಲಿ ಟ್ರಂಪ್ ಸತತ ಮೂರನೇ ಬಾರಿಗೆ ಗೆಲುವು ಸಾಧಿಸಿದ್ದಾರೆ. ಮಿಸ್ಸಿಸ್ಸಿಪ್ಪಿ, ಅಲಬಾಮಾ, ಒಕ್ಲಹೋಮ, ಟೆನ್ನೆಸ್ಸೀ, ದಕ್ಷಿಣ ಕೆರೊಲಿನಾ ಮತ್ತು ಅರ್ಕಾನ್ಸಾಸ್‌ನಲ್ಲಿ ಟ್ರಂಪ್ ಜಯಗಳಿಸಿದ್ದಾರೆ.

## ಉಚ್ಛಾಟಿಸಿದ ಬಿಜೆಪಿ

ಮಹಾರಾಷ್ಟ್ರದಲ್ಲಿ 9 ಕೋಟಿ 63 ಲಕ್ಷ ಮತದಾರರು ಇರಲಿದ್ದಾರೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದರು. ಇಲ್ಲಿ 5 ಕೋಟಿ ಪುರುಷ ಮತದಾರರಿದ್ದಾರೆ. ಇಲ್ಲಿನ ಒಂದು ಲಕ್ಷ ಮತಗಟ್ಟೆಗಳಲ್ಲಿ ಮತದಾನ ನಡೆಯಲಿದೆ. ಮಹಾರಾಷ್ಟ್ರದಲ್ಲಿ ಪ್ರತಿ ಬೂತ್‌ನಲ್ಲಿ ಸುಮಾರು 960 ಮತದಾರರಿದ್ದಾರೆ. ಮುಂಬೈನಲ್ಲಿ ಮತದಾನ ಕೇಂದ್ರಗಳನ್ನು ಹೆಚ್ಚಿಸಲಾಗಿದೆ.

ಕೊಲ್ಹಾಪುರ ಉತ್ತರದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ, ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್ ಮತ್ತು ಅಜಿತ್ ಪವಾರ್ ಜಂಟಿಯಾಗಿ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು.

## ಕಾಡುತ್ತಿದೆ ವಕ್ಫ್ ಸಂಕಷ್ಟ

ಜಮೀನು ಕಳೆದುಕೊಳ್ಳುವ ಭೀತಿಯಲ್ಲಿರುವ ತಮ್ಮ ಸಮಾಜದ ರೈತರಿಗೆ ಮಾರ್ಗದರ್ಶನ ಮಾಡಬೇಕಾದ ಗುರುಸ್ಥಾನದವರೇ ಜಮೀನು ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ.

**ನೂರಾರು ಮುಲ್ಲಾಗಳ ಜಮೀನಿಗೆ ಕಂಟಕ:** ಈಗ ನೂರಾರು ಮುಲ್ಲಾ, ಮುಜಾವರ, ಖಾಜಿಗಳ ಸಾವಿರಾರು ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಲು ವಕ್ಫ್ ಬೋರ್ಡ್ ಮುಂದಾಗಿದೆ. ಇದು ಸಹಜವಾಗಿ ಮುಲ್ಲಾಗಳಲ್ಲಿ ಆಕ್ರೋಶ ಹುಟ್ಟುಹಾಕಿದೆ. ಪರಿಣಾಮವಾಗಿ ಧಾರವಾಡದಲ್ಲಿ ಇದೀಗ ಧರ್ಮ ಗುರುಗಳೇ ವಕ್ಫ್ ವಿರುದ್ಧ ತಿರುಗಿ ಬಿದ್ದಿದ್ದಾರೆ.

ದಿನದಿಂದ ದಿನಕ್ಕೆ ಹೊಸ ರೂಪ ಪಡೆಯುತ್ತಿರುವ ವಕ್ಫ್ ಪ್ರಕರಣ ಇದೀಗ ಮುಸ್ಲಿಂ ಸಮುದಾಯಕ್ಕೂ ಕಂಠಕವಾಗಿ ಪರಿಣಮಿಸಿದೆ. ಇದನ್ನೆಲ್ಲ ನೋಡಿದರೆ ವಕ್ಫ್ ಬೋರ್ಡ್ ಪ್ರಹಾರಕ್ಕೆ ಯಾರೂ ಹೊರತಿಲ್ಲ ಅನ್ನುವಂತಾಗಿದೆ. ಅನೇಕ ಸಾಮಾನ್ಯ ಜನರ ಜಮೀನು ಕಬಳಿಸುವ ತಂತ್ರ ಎಂದು ಅಂದುಕೊಳ್ಳುತ್ತಿದ್ದ ಈ ನಡೆ ಇದೀಗ ಮುಸ್ಲಿಂ ಸಮಾಜದ ಮುಲ್ಲಾಗಳ ಕಡೆಗೂ ಹೊರಳಿರುವುದು ಮತ್ತೊಂದು ಎಡವಟ್ಟಿಗೆ ಕಾರಣವಾಗಿರೋದಂತೂ ಸತ್ಯ.

ಧಾರವಾಡದ ನವಲಗುಂದದ 20ಕ್ಕೂ ಹೆಚ್ಚು ಮುಸ್ಲಿಂ ರೈತರ ಆಸ್ತಿ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿರುವುದು ಕೆಲವು ದಿನಗಳ ಹಿಂದಷ್ಟೇ ಬೆಳಕಿಗೆ ಬಂದಿತ್ತು. ಇದರಿಂದ ಮುಸ್ಲಿಮರಲ್ಲಿಯೂ ವಕ್ಫ್ ಬಗ್ಗೆ ಆಕ್ರೋಶ ಮೂಡಿತ್ತು. ಮುಸ್ಲಿಂ ರೈತರು ವಕ್ಫ್ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದರು.

## ಸರ್ಕಾರದ ವಿರುದ್ಧ ಆಕ್ರೋಶ

ಅಂಬೇಡ್ಕರ್ ಬಡಾವಣೆಯ ಬಳಿಯಿರುವ ಈ ಖಬರಸ್ತಾನ ಹಿಂದೆ ಮಲ್ಲಪ್ಪ ಹರಿಜನ್ ಗೆ ಸೇರಿದ ಜಮೀನಾಗಿತ್ತು. ಸರ್ವೆ ನಂ 263/2 ನ ಈ ಜಮೀನು 1963 ರಿಂದ 1984ರವರೆಗೆ ಪಟ್ಟೇದಾರ ಅವರ ಹೆಸರಿನಲ್ಲಿತ್ತು. ಆದರೆ, 1984ರ ನಂತರ ಏಕಾಏಕಿ ವಕ್ಫ ಬೋರ್ಡ್ ಹೆಸರಿಗೆ ಬದಲಾಗಿದೆ. ಯಾವುದೇ ನೋಟೀಸ್ ನೀಡದೆ ನಮ್ಮ ಹಿರಿಯರಿಂದ ಬಂದ ಜಮೀನು ಮೋಸದಿಂದ ತಮ್ಮ ಹೆಸರಿಗೆ ಮಾಡಿಕೊಂಡಿದ್ದಾರೆ. ಹೀಗಾಗಿ ನ್ಯಾಯಬೇಕು ಅಂತ

### ಮೊದಲನೇ ಪುಟದಿಂದ...

ಮಲ್ಲಪ್ಪನ ಮೊಮ್ಮಗ ಈಗ ಹೋರಾಟ ನಡೆಸುತ್ತಿದ್ದಾರೆ.

ಪಟ್ಟೇದಾರ ಮಲ್ಲಪ್ಪ ಪೀರಪ್ಪ ಹರಿಜನ ಅವರು ಜಮೀನು ಮಾರಾಟ ಅಥವಾ ಸರ್ಕಾರಕ್ಕೆ ಬಿಟ್ಟುಕೊಟ್ಟಿಲ್ಲ ಜೊತೆಗೆ ಖರೀದಿ ಪತ್ರವೂ ಆಗಿಲ್ಲ. ಪಟ್ಟೇದಾರನಿಗೆ ಯಾವುದೇ ಪರಿಹಾರವೂ ನೀಡಿಲ್ಲ. 1983-84ರಲ್ಲಿ ಏಕಾಏಕಿ ವಕ್ಫ್ ಬೋರ್ಡ್ ಆಸ್ತಿ ಎಂದು ಪಹಣಿಯ ಕಾಲಂ ನಂಬರ್ 11 ರಲ್ಲಿ ನಮೂದು ಮಾಡಲಾಗಿದೆ. 1985 ರಿಂದ ಇಂದಿನವರೆಗೂ ಸತತವಾಗಿ ಹೋರಾಟ ಮಾಡುತ್ತಿರುವ ದಲಿತ ಕುಟುಂಬ ವಕ್ಫ್ ಬೋರ್ಡ್ ಗೆ ಕಾನೂನು ಬಾಹಿರವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ತಮ್ಮ ಆಸ್ತಿಯಲ್ಲಿ ವಕ್ಫ್ ಬೋರ್ಡ್ 4 ಎಕರೆ ಜಮೀನನ್ನು ಖಬರಸ್ತಾನ್ ಗೆ ಮಂಜೂರು ಮಾಡಿದೆ. ಹಲವು ವರ್ಷಗಳಿಂದ ನಮ್ಮ ಭೂಮಿಗಾಗಿ ಹೋರಾಟ ಮಾಡುತ್ತಿದ್ದೇವೆ. ಆದರೆ, ಮುಸ್ಲಿಮರು ದೌರ್ಜನ್ಯ ಮಾಡಿ ನಮ್ಮ ಆಸ್ತಿ ಕಸಿದುಕೊಂಡಿದ್ದಾರೆ. ಕೂಡಲೇ ವಕ್ಫ್ ಬೋರ್ಡ್ ಹೆಸರಿಗೆ ವರ್ಗಾವಣೆ ಮಾಡಿದ್ದನ್ನು ರದ್ದುಪಡಿಸಿಬೇಕು. ನಮ್ಮ ಆಸ್ತಿ ಖಬರಸ್ತಾನ್ ಗೆ ನೀಡಿದ್ದು ಎಷ್ಟು ಸರಿ ಸರ್ಕಾರ ನಮಗೆ ನ್ಯಾಯ ಕೊಡಿಸಬೇಕೆಂದು ದಲಿತ ಕುಟುಂಬ ಒತ್ತಾಯ ಮಾಡುತ್ತಿದೆ.

ಜಿಲ್ಲೆಯ ಸಾಕಷ್ಟ ಜಮೀನು ವಕ್ಫ ಬೋರ್ಡ್ ಹೆಸರಿಗೆ ಆಗಿದೆ. ಹೀಗಾಗಿ ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಈ ರೀತಿ ಆಗುತ್ತಿದೆ. ಹೀಗಾಗಿ ಕೂಡಲೆ ಸರ್ಕಾರ ರೈತರಿಗೆ ನ್ಯಾಯ ಕೊಡುವ ಕೆಲಸ ಮಾಡಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಒಟ್ಟಿನಲ್ಲಿ ಯಾದಗಿರಿ ಜಿಲ್ಲೆಯಲ್ಲಿ ವಕ್ಫ ಬೋರ್ಡ್‌ನ ರಾದಂತ ಬಯಲಾಗುತ್ತಿದೆ. ರೈತರು ತಮ್ಮ ಜಮೀನು ದಶಮಾನಗಳಿಂದ ಉಳುಮೆ ಮಾಡಿಕೊಂಡು ಬರುತ್ತಿದ್ದಾರೆ. ಆದರೆ, ಈಗ ವಕ್ಫ ಬೋರ್ಡ್ ಪಹಣಿಯಲ್ಲಿ ತನ್ನ ಹೆಸರು ಸೇರುತ್ತಿರುವುದರಿಂದ ರೈತರಿಗೆ ಆತಂಕ ಎದುರಾಗಿದೆ. ಹೀಗಾಗಿ ಕೂಡಲೆ ಸರ್ಕಾರ ಆಗಿರುವ ಗೊಂದಲಗಳನ್ನು ತಿಳಿಗೊಳಿಸುವ ಕೆಲಸ ಮಾಡಬೇಕಿದೆ.

## ಬೃಹತ್ ಪ್ರತಿಭಟನೆಗೆ ಕರೆ

ವಕ್ಫ್ ಭೂವಿವಾದದ ನಂತರ ಪಹಣಿ ಪರಿಶೀಲನೆ ನಡೆಸಿದಾಗ ವಕ್ಫ್ ಎಂದು ಹೆಸರು ನಮೂದಾಗಿರುವುದು ಬೆಳಕಿಗೆ ಬಂದಿದೆ. ಸರ್ಕಾರಿ ಶಾಲೆಗೆ ಭೂದಾನ ಮಾಡಿದ್ದ 38 ಗುಂಟೆ ಜಾಗವನ್ನು ವಕ್ಫ್ ಬೋರ್ಡ್ ನುಂಗಿದೆ. ಶಾಲೆಗೆಂದು ಮೀಸಲಿಟ್ಟಿದ್ದ ಜಾಗವನ್ನು ವಕ್ಫ್ ತನ್ನ ಹೆಸರಿಗೆ ಮಾಡಿಕೊಂಡಿದೆ. ವಕ್ಫ್ ಬೋರ್ಡ್ ವಿರುದ್ಧ ಶಾಸಕ ಹೆಚ್‌ಕೆ ಸುರೇಶ್ ಆಕ್ರೋಶ ವ್ಯಕ್ತಪಡಿಸಿದ್ದು, ಇಂದು ಬೇಲೂರಿನಲ್ಲಿ ಬೃಹತ್ ಪ್ರತಿಭಟನೆಗೆ ಕರೆ ನೀಡಿದ್ದಾರೆ.

## ಹಫ್ತಾ ವಸೂಲಿ

ಪ್ರತಿನಿತ್ಯ ಸಚಿವರಿಂದ ಲೂಟಿ ನಡೆಯುತ್ತಿದೆ: ಲೋಕಾಯುಕ್ತ ಅಧಿಕಾರಿಗಳಿಂದ ಸಿದ್ದರಾಮಯ್ಯ ವಿಚಾರಣೆ ವಿಚಾರವಾಗಿ ಪ್ರತಿಕ್ರಿಯಿಸಿದ ಅಶೋಕ್, ಈ ಸರ್ಕಾರದಲ್ಲಿ ಪ್ರತಿ ನಿತ್ಯ ಒಬ್ಬರಲ್ಲ ಒಬ್ಬ ಸಚಿವರು ಲೂಟಿ ಹೊಡೆಯುತ್ತಿದ್ದಾರೆ. 40 ವರ್ಷದ ರಾಜಕೀಯ ಜೀವನ ತೆರೆದ ಪುಸ್ತಕ ಎಂದಿದ್ದರು. ತೆರೆದ ಪುಸ್ತಕ ಎಂದವರು ಲೋಕಾಯುಕ್ತ ವಿಚಾರಣೆಗೆ ಹೋಗಿದ್ದಾರೆ. ಮುಖ್ಯಮಂತ್ರಿ ಆಗಿ ವಿಚಾರಣೆ ಎದುರಿಸುತ್ತಿದ್ದಾರೆ, ನಾಚಿಕೆ ಆಗಲ್ವಾ ಎಂದು ಅಶೋಕ್ ಪ್ರಶ್ನಿಸಿದರು.

ಇದೇನು ಮ್ಯಾಚ್ ಫಿಕ್ಸಿಂಗ್ ಕೇಸಾ: ಅಶೋಕ್ ಪ್ರಶ್ನೆ: ಬೆಳಗ್ಗೆ ವಿಚಾರಣೆ ಅಂತೆ, ಮಧ್ಯಾಹ್ನ ಪ್ರಚಾರ ಅಂತೆ. ಸಿಎಂ ಮೊದಲೇ ಟೈಮ್ ಫಿಕ್ಸ್ ಮಾಡಿಕೊಂಡು ಹೋಗಿದ್ದಾರೆ. ಇದೇನು ಮ್ಯಾಚ್ ಫಿಕ್ಸಿಂಗ್ ಕೇಸಾ ಎಂದು ಅಶೋಕ್ ವಾಗ್ದಾಳಿ ನಡೆಸಿದರು.

ತನಿಖಾಧಿಕಾರಿಗಳು ಎಷ್ಟು ಹೊತ್ತು ವಿಚಾರಣೆ ನಡೆಸ್ತಾರೆಂದು ಗೊತ್ತಾ ಇವರೇ ಲೋಕಾಯುಕ್ತ ವಿಚಾರಣೆಗೆ ಸಮಯ ನಿಗದಿ ಮಾಡಿದ್ದಾರಾ ಎಂದು ಅಶೋಕ್ ಪ್ರಶ್ನೆಗಳ ಮಳೆಗೈದರು.

ಅಬಕಾರಿ ಇಲಾಖೆ ಅಧಿಕಾರಿಗಳು ಮದ್ಯ ಮಾರಾಟ ವ್ಯಾಪಾರಿಗಳಿಂದ ಮಾಸಿಕ ಹಣ ವಸೂಲಿ ಮಾಡುತ್ತಿದ್ದಾರೆ ಎಂದು ಕರ್ನಾಟಕ ವೈನ್ ಮರ್ಚೆಂಟ್ ಅಸೋಸಿಯೇಷನ್ ಮಂಗಳವಾರ ಆರೋಪಿಸಿತ್ತು.

## ಪಾರ್ಕಿಂಗ್ ಫೀ ಹೆಚ್ಚಳ

**ಪರಿಷ್ಕೃತ ದರ ಎಷ್ಟು?:** ಈವರೆಗೆ ಪ್ರವೇಶ ಶುಲ್ಕ 30 ರೂ. ಇದ್ದು, ಈಗ 50 ರೂ.ಗೆ ಟಿಕೆಟ್ ದರ ಏರಿಕೆ ಮಾಡಲಾಗಿದೆ. ಇನ್ನು, ಕಾರ್ ಪಾರ್ಕಿಂಗ್ ಶುಲ್ಕವನ್ನು 50 ರೂ.ನಿಂದ 60 ರೂ.ಗೆ ಏರಿಕೆ ಮಾಡಲಾಗಿದೆ. ಮಕ್ಕಳ ಪ್ರವೇಶ ಶುಲ್ಕ 20 ರೂ ಇದ್ದುದನ್ನು 30 ರೂ.ಗೆ ಏರಿಕೆ ಮಾಡಲಾಗಿದೆ.

**ದರ ಏರಿಕೆ ಪ್ರಮಾಣದಲ್ಲೂ ಹೆಚ್ಚಳ:** ಆರು ವರ್ಷಗಳ ಹಿಂದೆ ಪ್ರವೇಶ ಶುಲ್ಕವನ್ನು 20 ರೂ.ಗಳಿಂದ 30 ರೂ.ಗೆ ಜಾಸ್ತಿ ಮಾಡಲಾಗಿತ್ತು. ಆದರೆ ಈಗ, 30 ರೂ.ನಿಂದ 50 ರೂ.ಗೆ ಏರಿಕೆ ಮಾಡಲಾಗಿದೆ. ಅಂದರೆ ದರ ಏರಿಕೆಯ ಪ್ರಮಾಣವೂ ಹೆಚ್ಚಳವಾಗಿದೆ. ಇದಕ್ಕೆ ಪ್ರವಾಸಿಗರು ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಪಾರ್ಕ್‌ಗಳಿಗೆ ಸಾಮಾನ್ಯವಾಗಿ ಬಡವರ್ಗದ ಕುಟುಂಬಗಳೇ ಹೆಚ್ಚಾಗಿ ಬರುತ್ತವೆ. ಒಂದೇ ಕುಟುಂಬದ ಐವರು ಬಂದರೆ ಟಿಕೆಟ್‌ಗೆ 250 ರೂ. ಕೊಟ್ರೆ ಬೇರೆ ಕಡೆ ಏನು ನೋಡಬೇಕು? ಲಾಲ್ ಬಾಗ್ ಸರ್ಕಾರ ವ್ಯಾಪ್ತಿಯಲ್ಲಿದೆ. ಶುಲ್ಕ ಇಷ್ಟೊಂದು ಜಾಸ್ತಿ ಮಾಡಿದರೆ ಸರ್ಕಾರಿ ಜಾಗಗಳಿಗೂ ಖಾಸಗಿ ಜಾಗಗಳಿಗೂ ವ್ಯಾತ್ಯಾಸ ಏನು ಇರುತ್ತದೆ ಎಂದು ಅಂತ ಪ್ರವಾಸಿಗರು ಪ್ರಶ್ನಿಸುತ್ತಿದ್ದಾರೆ.

**ಲಾಲ್ ಬಾಗ್ ನಿರ್ದೇಶಕರು ಹೇಳುವುದೇನು?:** ಈ ಕುರಿತಾಗಿ ಲಾಲ್ ಬಾಗ್ ನಿರ್ದೇಶಕರು ಪ್ರತಿಕ್ರಿಯಿಸಿದ್ದು, ವರ್ಷದಿಂದ ವರ್ಷಕ್ಕೆ ಪಾರ್ಕ್‌ಗಳ ನಿರ್ವಹಣಾ ವೆಚ್ಚ ಜಾಸ್ತಿಯಾಗುತ್ತಲೇ ಇದೆ. ಪ್ರತಿ ಐದು ವರ್ಷಗಳಿಗೊಮ್ಮೆ ನಾವು ಎಂಟ್ರಿ, ಪಾರ್ಕಿಂಗ್ ಫೀಜ್ ಜಾಸ್ತಿ ಮಾಡುತ್ತೇವೆ. ಅದರಂತೆ ಈಗಲೂ ಕೂಡ ಜಾಸ್ತಿ ಮಾಡಿದ್ದೇವೆ. ಪ್ರತಿದಿನ ಲಾಲ್ ಬಾಗ್‌ಗೆ 3 ಸಾವಿರಕ್ಕೂ ಹೆಚ್ಚು ಜನರು ಭೇಟಿಕೊಡುತ್ತಾರೆ. ಹೀಗಿವಾಗ ಲಾಲ್ ಬಾಗ್ ನಿರ್ವಹಣೆ ಮಾಡುವ ಹೊಣೆ ನಮ್ಮ ಮೇಲೆ ಇರುತ್ತದೆ. ಅಲ್ಲದೇ ನೂರಾರು ಜನರು ನಮ್ಮಲ್ಲಿ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಶುಲ್ಕ ಜಾಸ್ತಿ ಮಾಡಿದ್ದೇವೆ. ಬೇರೆ ಬೇರೆ ಪ್ರವಾಸಿ ಸ್ಥಳಗಳಿಗೆ ಹೋಲಿಕೆ ಮಾಡಿದರೆ ನಮ್ಮಲ್ಲಿ ಶುಲ್ಕ ಕಡಿಮೆಯೇ ಇದೆ ಎಂದು ಹೇಳಿದ್ದಾರೆ.

ಒಟ್ಟಿನಲ್ಲಿ ಇಷ್ಟು ದಿನ ಕಡಿಮೆ ಪ್ರವೇಶ ಶುಲ್ಕ ಇದೆ ಎಂದು ಸಾಕಷ್ಟು ಜನರು ಲಾಲ್ ಬಾಗ್‌ಗೆ ಬಂದು ವೀಕ್ಷಣೆ ಮಾಡುತ್ತಿದ್ದರು. ಈಗ ಪ್ರವೇಶ ಶುಲ್ಕ ಕೇಳಿ ಶಾಕ್ ಆಗುತ್ತಿದ್ದು, ಮುಂದಿನ ದಿನಗಳಲ್ಲಿ ಪ್ರವಾಸಿಗರ ಸಂಖ್ಯೆ ಎಷ್ಟು ಇರಲಿದೆ ಎಂಬುದನ್ನು ಕಾದು ನೋಡಬೇಕಿದೆ.

## ಸೇಂದಿ ಮಾರಾಟ

ದಾಳಿ ವೇಳೆ 450 ಲೀ. ಕಲಬೆರಕೆ ಸೇಂದಿ, 500 ಗ್ರಾಂ ಸಿಎಚ್ ಪೌಡರ್, ಕಲಬೆರಕೆ ಸೇಂದಿ ತಯಾರಿಕೆಗೆ ಬಳಸುವ ರಾಸಾಯನಿಕಗಳು ಹಾಗೂ ಅಕ್ರಮ ಮದ್ಯದ ಪೌಚ್‌ಗಳು ಸೇರಿ ಸಾವಿರಾರು ರೂಪಾಯಿ ಮೌಲ್ಯದ ವಸ್ತುಗಳು ಜಪ್ತಿಯಾಗಿವೆ.

ಗಜ್ಜಿ ವಿರೇಶ್, ಉರುಕುಂದಮ್ಮ ಎಂಬುವವರ ವಿರುದ್ಧ ಪ್ರಕರಣ ದಾಖಲಾಗಿದೆ. ಈಗಾಗಲೇ ಸುಮಾರು 20 ಪ್ರಕರಣ ಎದುರಿಸುತ್ತಿರುವ ಆರೋಪಿ ಗಜ್ಜಿ ವಿರೇಶ್ ಒಂದು ಬಾರಿ ಗಡಿಪಾರಾಗಿದ್ದ ಆದರೂ ದಂಧೆ ಬಿಟ್ಟಿಲ್ಲ. ಈಗ ಗಜ್ಜಿ ವೀರೇಶ್ ಹಾಗೂ ಆತನ ಪತ್ನಿ ವಿರುದ್ಧ ಅಬಕಾರಿ ಪೊಲೀಸ್ ಠಾಣೆಯಲ್ಲಿ ಮತ್ತೊಂದು ಪ್ರಕರಣ ದಾಖಲಾಗಿದೆ.

## ವಾರಸುದಾರರೇ ಇಲ್ಲ!

**ಅದಿರಿನ ಜತೆ ರಫ್ತಾಗುತ್ತಿದ್ದ ಗ್ರಾನೈಟ್:** ಸುಮಾರು 20 ವರ್ಷದ ಹಿಂದೆ ಹಲವು ಕಂಪನಿಗಳು ಗ್ರಾನೈಟ್‌ಗಳನ್ನು ಅದಿರಿನ ಜೊತೆಯಲ್ಲಿ ವಿದೇಶಕ್ಕೆ ರಫ್ತು ಮಾಡುತ್ತಿದ್ದವು. ಇದಕ್ಕಾಗಿ ಕಾರವಾರ ಬಂದರಿನ ಜಾಗವನ್ನು ಕೂಡ ಬಂದರು ಇಲಾಖೆಯಿಂದ ಬಾಡಿಗೆ ಪಡೆಯಲಾಗಿತ್ತು. ಎಲ್ಲಿ ಅಕ್ರಮ ಅದಿರು ಪ್ರಕರಣ ಮುನ್ನೆಲೆಗೆ ಬಂದಿತೋ ಗ್ರಾನೈಟ್ ಉದ್ಯಮಕ್ಕೂ ಇದರ ಬಿಸಿ ತಟ್ಟಿತ್ತು. ಹೀಗಾಗಿ ಕಾರವಾರದ ಬಂದರಿನಲ್ಲಿ ಸಂಗ್ರಹಿಸಿಟ್ಟಿದ್ದ 820 ಗ್ರಾನೈಟ್ ಕಲ್ಲುಗಳು ಬಂದರಿನಲ್ಲೇ ಉಳಿದಿದ್ದವು. ಇದರ ಜೊತೆ ಬಂದರು ಇಲಾಖೆಗೆ ಪಾವತಿ ಮಾಡಬೇಕಾದ ಬಾಡಿಗೆ ಸಹ ಪಾವತಿ ಮಾಡದೇ ಕಂಪನಿಗಳು ದೂರವಾಗಿದ್ದವು. ಇನ್ನು ಜಾಗದ ಕೊರತೆಯಿಂದ ಇಲಾಖೆ ಈ ಹಿಂದೆ ಸಂಗ್ರಹಿಸಿದ್ದ ಅದಿರನ್ನು ಕೋರ್ಟ್ ಆದೇಶದ ಪ್ರಕಾರ ಹರಾಜು ಹಾಕಲಾಗಿತ್ತು.

**ಅನಾಥವಾದ ಗ್ರ್ಯಾನೈಟ್‌ಗಳು!:** 20 ವರ್ಷಗಳು ಕಳೆದಿದ್ದರಿಂದ ಎಕರೆಗಟ್ಟಲೇ ಜಾಗದಲ್ಲಿ ತುಂಬಿದ್ದ ಈ ಗ್ರಾನೈಟ್ ಅನ್ನು ಸಹ ಖಾಲಿ ಮಾಡಬೇಕಿದ್ದು ಇದರ ಮಾಲೀಕರು ಯಾರ್ಯಾರು ಇದ್ದಾರೆ ಎಂಬ ಬಗ್ಗೆ ದಾಖಲೆ ಕಲೆಹಾಕಿದಾಗ ಗಣೇಶ್ ಷಿಪಿಂಗ್ ಕಂಪನಿಯ ಹೆಸರು ಮಾತ್ರ ಸಿಕ್ಕಿದೆ. ಉಳಿದ ಕಂಪನಿಗಳ ದಾಖಲೆಗಳೇ ಇರಲಿಲ್ಲ, ಹೀಗಾಗಿ ಬಂದರು ಇಲಾಖೆ ಸಹ ತೆರವುಗೊಳಿಸಲು ಈ ಕಂಪನಿಗೆ ನೋಟಿಸ್ ನೀಡಿತ್ತು. ಆದರೇ ಈ ಕಂಪನಿ ಸಹ ಈ ಗ್ರಾನೈಟ್ ನಮ್ಮದು ಎಂದು ಕ್ಲೈಮ್ ಮಾಡಲಿಲ್ಲ .ಹೀಗಾಗಿ ಇವುಗಳ ಮೌಲ್ಯ ಸಾಂದ್ರತೆ ಮಾಪನ ಮಾಡಿ ಹರಾಜು ಹಾಕುವಂತೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಪತ್ರ ಬರೆಯಲಾಗಿದೆ. ಯಾರೂ ತಮ್ಮದೆಂದು ಹೇಳದ ಹಿನ್ನಲೆಯಲ್ಲಿ ಒಟ್ಟು 820 ಗ್ರ್ಯಾನೈಟ್‌ಗಳ ಅಳತೆ ಸಾಂದ್ರತೆಯ ಪರೀಕ್ಷೆ ಮಾಡಿದ್ದು ಕೋಟಿಗಟ್ಟಲೇ ಬೆಲೆ ಬಾಳುವ ಈ ಗ್ರಾನೈಟ್ ನನ್ನು ಶೀಘ್ರದಲ್ಲೇ ಹರಾಜು ಹಾಕಲು ಇಲಾಖೆ ಮುಂದಾಗಿದೆ. ಈ ಬಗ್ಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನಿರ್ದೇಶಕಿ ಆಶಾ ತಿಳಿಸಿದ್ದಾರೆ.

ಕೋಟಿಗಟ್ಟಲೆ ಬೆಲೆ ಬಾಳುವ ಈ ಗ್ರಾನೈಟ್‌ಗಳ ಮೂಲ ವಾರಸುದಾರರು ಯಾರು ಎಂಬ ಪ್ರಶ್ನೆ ಎದ್ದಿದ್ದು, ಇಷ್ಟೊಂದು ದೊಡ್ಡ ಮಟ್ಟದಲ್ಲಿ ಬಂದರಿನಲ್ಲಿ ಗ್ರಾನೈಟ್ ಸಂಗ್ರಹಿಸಿಟ್ಟು ಅಕ್ರಮವಾಗಿ ವಿದೇಶಗಳಿಗೆ ರಫ್ತು ಮಾಡಲಾಗುತಿತ್ತಾ ಎಂಬ ಅನುಮಾನ ಮೂಡಿದೆ. ತನಿಖೆಯಿಂದ ನಿಜಾಂಶ ಹೊರಬರಬೇಕಿದೆ. ಒಟ್ಟಿನಲ್ಲಿ ಇದೀಗ ವಾರಸುದಾರರು, ದಾಖಲೆ ಇಲ್ಲದ ಕೋಟಿ ಮೌಲ್ಯದ ಗ್ರಾನೈಟ್‌ಗಳು ಹರಾಜು ಪ್ರಕ್ರಿಯೆ ಮೂಲಕ ಸರ್ಕಾರದ ಖಜಾನೆಗೆ ಹಣ ತುಂಬಲಿವೆ.

## ಸಾವು

ಸ್ಥಳಕ್ಕೆ ನರಗುಂದ ಪೊಲೀಸರು ಭೇಟಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಗದಗ ಜಿಲ್ಲೆಯ ನರಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೇವಸ್ಥಾನಕ್ಕೆಂದು ಹೋದವರು ಶಾಶ್ವತವಾಗಿ ದೇವರ ಪಾದ ಸೇರಿದ್ದಾರೆ. ಮಕ್ಕಳು ಅನಾಥರಾಗಿದ್ದು ನಿಜಕ್ಕೂ ದುರಂತವೆ ಸರಿ. ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

## ಮಗ

ತಲೆಯನ್ನು ಗೋಡೆಗೆ ಬಡಿದು ಪರಾರಿಯಾಗಿದ್ದಾನೆ. ಹಲ್ಲೆಗೊಳಗಾಗಿ ಚಿಕ್ಕಮ್ಮ ಕುಸಿದು ಬಿದ್ದಿರುವುದನ್ನು ಗ್ರಾಮಸ್ಥರು ಕಂಡು ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಚಿಕ್ಕಮ್ಮ ಸಾವನ್ನಪ್ಪಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ, ಪರಿಶೀಲನೆ ನಡೆಸಿದ್ದಾರೆ. ಕೊಣನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಸೌತಡ್ಕ ಮಹಾಗಣಪತಿ ದೇವಸ್ಥಾನದ ಭೂಮಿ, ಹಣ ದುರುಪಯೋಗ ಆರೋಪ



**ಮಂಗಳೂರು:** ಪ್ರಸಿದ್ಧ ಸೌತಡ್ಕ ಮಹಾಗಣಪತಿ ದೇವಸ್ಥಾನದ ಜಾಗ ಮತ್ತು ಹಣ ದುರುಪಯೋಗಪಡಿಸಿಕೊಳ್ಳಲಾಗಿದೆ ಎಂದು ಶ್ರೀಕ್ಷೇತ್ರ ಸೌತಡ್ಕ ಮಹಾಗಣಪತಿ ದೇವಸ್ಥಾನ ಸಂರಕ್ಷಣಾ ವೇದಿಕೆ ಗಂಭೀರ ಆರೋಪ ಮಾಡಿದೆ. ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಕೊಕ್ಕಡದಲ್ಲಿ ಸೌತಡ್ಕ ಮಹಾಗಣಪತಿ ದೇವಸ್ಥಾನವಿದೆ. ಈ ದೇವಸ್ಥಾನ ಬಯಲು ಆಲಯ ಗಣಪನೆಂದೇ ಪ್ರಸಿದ್ಧಿ ಪಡೆದಿದೆ. ಸೌತಡ್ಕ ಮಹಾಗಣಪತಿ ದೇವಸ್ಥಾನ ಮುಜರಾಯಿ ಇಲಾಖೆಗೆ ಒಳಪಟ್ಟಿದೆ.

ದೇವಸ್ಥಾನದಲ್ಲಿನ ಅವ್ಯವಹಾರಗಳ ಸಮಗ್ರ ತನಿಖೆಗೆ ಒತ್ತಾಯಿಸಿ ನ.11ರಿಂದ ಅನಿರ್ದಿಷ್ಟ ಧರಣಿ ನಡೆಸಲು ಶ್ರೀ ಕ್ಷೇತ್ರ ಸೌತಡ್ಕ ಮಹಾಗಣಪತಿ ದೇವಸ್ಥಾನ ಸಂರಕ್ಷಣಾ ವೇದಿಕೆ ನಿರ್ಧರಿಸಿದೆ. ದೇವಸ್ಥಾನದ ಹೆಸರಿನಲ್ಲಿ ಖರೀದಿಸಿದ ಸ್ಥಿರಾಸ್ತಿ ದೇವಸ್ಥಾನದ ಹೆಸರಿಗೆ ಬರೆಸಬೇಕು. ಖಾಸಗಿಯಾಗಿ ರಚಿಸಿರುವ ಟ್ರಸ್ಟ್ ನ್ನು ರದ್ದುಪಡಿಸಿ ಅದರ ಆಸ್ತಿಯನ್ನು ದೇವಸ್ಥಾನಕ್ಕೆ ಹಸ್ತಾಂತರಿಸಬೇಕು. ಆದಾಯ ನೇರವಾಗಿ ದೇವಸ್ಥಾನದ ಖಜಾನೆಗೆ ಸೇರಬೇಕು. ಜಾಗವನ್ನು ದಾನಪತ್ರದ ಮೂಲಕ ಖಾಸಗಿ ಸಂಸ್ಥೆಗೆ ಹಸ್ತಾಂತರ ಮಾಡುವುದಕ್ಕೆ ತಡೆ ನೀಡಬೇಕು ಎಂದು ಸಂಘಟನೆ ಆಗ್ರಹಿಸಲಿದೆ.

ಭಕ್ತರ ವಾಹನಗಳ ಪಾರ್ಕಿಂಗ್, ಪೂಜಾ ಸಾಮಾಗ್ರಿಗಳ ಅಂಗಡಿ, ವಸತಿಗೃಹ ನಿರ್ಮಾಣಕ್ಕಾಗಿ 2004ರಲ್ಲಿ 3.46 ಎಕರೆ ಜಮೀನು ಖರೀದಿಸಲಾಗಿದೆ. ದೇವಸ್ಥಾನದಲ್ಲಿ ಹಣ ಇಲ್ಲದ ಕಾರಣ ಆಡಳಿತ ಮಂಡಳಿಯವರಿಂದಲೇ ಜಾಗ ಖರೀದಿ ಮಾಡಲಾಗಿದೆ. ತಮ್ಮ ಖಾಸಗಿ ಜಾಗ ಅಡವಿಟ್ಟು, ಈ ಜಾಗವನ್ನು ಮೂವರು ಖರೀದಿ ಮಾಡಿದ್ದರು. ಈ ಜಮೀನು ಮೂವರ ಹೆಸರಿನಲ್ಲೇ ನೋಂದಣಿಯಾಗಿತ್ತು.

ವರ್ಷದ ಬಳಿಕ ಭಕ್ತರ ದೇಣಿಗೆಯಿಂದ ಅವರ ಹಣವನ್ನು ದೇವಸ್ಥಾನ ಹಿಂದುರುಗಿಸಿತ್ತು. ಆದರೆ, ಆ ಬಳಿಕ ಭೂಮಿಯನ್ನು ದೇವಸ್ಥಾನದ ಹೆಸರಿಗೆ ಮಾಡಲು ಕಾನೂನು ತೊಡಕು ಎದುರಾಗಿದೆ. ಕೃಷಿ ಭೂಮಿಯಾದ ಕಾರಣ ದೇವಸ್ಥಾನದ ಹೆಸರಿಗೆ ಮಾಡಲು ಕಾನೂನು ತೊಂದರೆ ಉಂಟಾಗಿದೆ. ಆಗ, ಆಡಳಿತ ಮಂಡಳಿಯಿಂದ ಶ್ರೀ ಮಹಾಗಣಪತಿ ಸೇವಾ ಟ್ರಸ್ಟ್ ಸೌತಡ್ಕ ಎಂಬ ಟ್ರಸ್ಟ್ ಆರಂಭಿಸಿತು. ಸದ್ಯ ವಾಣಿಜ್ಯ ಕಟ್ಟಡದ ಬಾಡಿಗೆ, ವಸತಿಗೃಹದ ಬಾಡಿಗೆ ಸೇರಿ ಕೋಟಿ ಗಟ್ಟಲೆ ಹಣ ಟ್ರಸ್ಟ್ ಗೆ ಬರುತ್ತಿದೆ.

ಆದರೆ, ದೇವಸ್ಥಾನದ ಹೆಸರಿನಲ್ಲಿ ಬರುತ್ತಿರುವ ಆದಾಯ ಖಾಸಗಿಯವರ ಪಾಲಾಗುತ್ತಿದೆ. ಈ ನಡುವೆ ದೇವಸ್ಥಾನದ ಹೆಸರಿನಲ್ಲಿ ಖರೀದಿಸಿದ ಭೂಮಿಯನ್ನು ಖಾಸಗಿ ಶಿಕ್ಷಣ ಸಂಸ್ಥೆಗೆ ಗಿಫ್ಟ್ ಡಿಡಿ ನೀಡಲು ನಿರ್ಧರಿಸಲಾಗಿದೆ. ಜಮೀನು ದೇವಸ್ಥಾನದ ಹೆಸರಿಗೆ ನೋಂದಣಿ ಆಗದ ಕಾರಣ ಖಾಸಗಿ ವ್ಯಕ್ತಿಗಳು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಹೀಗಾಗಿ, ಜಾಗ, ಆದಾಯ ದೇವಸ್ಥಾನದ ಖಜಾನೆಗೆ ಸೇರುವಂತೆ ಮಾಡಲು ಒತ್ತಾಯಿಸಿ ಅನಿರ್ದಿಷ್ಟಾವಧಿ ಧರಣಿ ನಡೆಸಲು ನಿರ್ಧರಿಸಲಾಗಿದೆ.

## ತಹಶೀಲ್ದಾರ್, ಲಕ್ಷ್ಮಿ ಹೆಬ್ಬಾಳ್ಕರ್ ಪಿಎ ವಿರುದ್ಧ ಕೇಸ್ ಆರೋಪಿಗಳು ಪರಾರಿ

**ಬೆಳಗಾವಿ:** ಎಸ್‌ಡಿಎ ರುದ್ರಣ್ಣ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ತಹಶೀಲ್ದಾರ್, ಲಕ್ಷ್ಮಿ ಹೆಬ್ಬಾಳ್ಕರ್ ಪಿಎ ವಿರುದ್ಧ ಪ್ರಕರಣ ದಾಖಲಾಗಿದೆ.



ತಾಯಿ ಮಲ್ಲವ್ವ ನೀಡಿದ ದೂರಿನನ್ವಯ ತಹಶೀಲ್ದಾರ್ ಬಸವರಾಜ ನಾಗರಾಳ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪಿಎ ಸೋಮು ಮತ್ತು ಸಹೋದ್ಯೋಗಿ ಅಶೋಕ ಕಬ್ಬಲಿಗೇರ್ ಮೇಲೆ ಬೆಳಗಾವಿಯ ಖಡೇಬಜಾರ್ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ ಸೆಕ್ಷನ್ ಅಡಿ ಪ್ರಕರಣ ದಾಖಲಾಗಿದೆ.

ಪ್ರಕರಣ ದಾಖಲಾಗ್ತಿದ್ದಂತೆ ಮೂವರು ಆರೋಪಿಗಳು ನಾಪತ್ತೆ ಆಗಿದ್ದು ಆರೋಪಿಗಳ ಬಂಧನಕ್ಕೆ ವಿಶೇಷ ತಂಡವನ್ನ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ರಚಿಸಿದ್ದಾರೆ.

ವಾಟ್ಸಪ್‌ನಲ್ಲಿ ನನ್ನ ಸಾವಿಗೆ ಮೂರು ಜನ ಕಾರಣ ಅಂತಾ ಬರೆದು ತಹಶಿಲ್ದಾರ್ ಕಚೇರಿಯಲ್ಲೇ ರುದ್ರಣ್ಣ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದರು.

# ನ.18ರಂದು ಕನಕ ಜಯಂತಿ ಆಚರಣೆ



**ಕೋಲಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನವೆಂಬರ್ 18 ರಂದು ಕನಕದಾಸರ ಜಯಂತಿ ಕಾರ್ಯಕ್ರಮವನ್ನು ನಗರದ ಎಸ್.ಎನ್.ಆರ್ ಮುಂಭಾಗದಲ್ಲಿ ಅರ್ಥಪೂರ್ಣವಾಗಿ ಮತ್ತು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಂಗಳ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಂಗ ಸಭಾಂಗಣದಲ್ಲಿ ದಾಸ ಶ್ರೇಷ್ಠ ಕನಕದಾಸ ಜಯಂತಿ ಅಂಗವಾಗಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಸಮುದಾಯದ ಮುಖಂಡರ ಸಲಹೆಗಳನ್ನು ಆಲಿಸಿ ಅವರು ಮಾತನಾಡಿದರು. ದಾಸ ಶ್ರೇಷ್ಠ ಕನಕದಾಸರ ಜಯಂತಿಯನ್ನು ಸರ್ಕಾರದ ಮಾರ್ಗಸೂಚಿ ನಿಯಮಗಳನ್ನು ಅನುಸರಿಸಿಕೊಂಡು ಅರ್ಥಪೂರ್ಣವಾಗಿ ಜಿಲ್ಲೆಯಲ್ಲಿ ಆಚರಿಸಬೇಕಿದೆ. ಕಾರ್ಯಕ್ರಮದ ದಿನದಂದು ನಗರದ ಕನಕ ಮಂದಿರದ ಮುಂಭಾಗದಿಂದ ಬೆಳಿಗ್ಗೆ 10:30 ಗಂಟೆಗೆ ಮೆರವಣಿಗೆಗೆ ಚಾಲನೆ ನೀಡಲು ನಿರ್ಣಯ ಕೈಗೊಳ್ಳಲಾಯಿತು. ನಂತರ ವೇದಿಕೆ ಕಾರ್ಯಕ್ರಮ ಎಸ್.ಎನ್.ಆರ್ ಮುಂಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ. ಕಲಾತಂಡಗಳು ಹಾಗೂ ಸ್ಥಬ್ದಚಿತ್ರಗಳ ಪಲ್ಲಕ್ಕಿಗಳೊಂದಿಗೆ ಮೆರವಣಿಗೆ ಜರುಗಲಿದೆ. ಇದಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಯಂತಿ ಆಚರಣೆಯ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಿ ಯಶಸ್ವಿಯಾಗಿಸಲು ಸೂಚನೆಗಳನ್ನು ನೀಡಿದರು.

ವೇದಿಕೆ ಕಾರ್ಯಕ್ರಮದಲ್ಲಿ ದಾಸ ಶ್ರೇಷ್ಠ ಕನಕದಾಸರ ವಿಚಾರಧಾರೆಗಳ ಕುರಿತು ಉಪನ್ಯಾಸ, ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿರುವ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಸಮುದಾಯದಲ್ಲಿ ಸಾಧನೆ ಗೈದ ಸಾಧಕರಿಗೆ ಸನ್ಮಾನ ಮಾಡಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ, ಸಮುದಾಯದ ಮುಖಂಡರುಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತಿತರರು ಹಾಜರಿದ್ದರು.

# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ವಿವಿಧ ಕೋರ್ಸುಗಳ ಪ್ರವೇಶಾತಿ ಪ್ರಾರಂಭ

**ಬೆಂಗಳೂರು:** ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2024-25ನೇ (ಜುಲೈ ಆವೃತ್ತಿ) ಶೈಕ್ಷಣಿಕ ಸಾಲಿಗೆ ಪ್ರವೇಶಾತಿ ಆರಂಭಿಸಿದ್ದು, ಸ್ನಾತಕ / ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ / ಬಿ.ಕಾಂ / ಬಿ.ಬಿ.ಎ / ಬಿ.ಸಿ.ಎ / ಬಿ.ಎಸ್ಸಿ., ಎಂ.ಎ / ಎಂ.ಸಿ.ಜೆ / ಎಂ.ಕಾಂ., ಬಿ.ಎಲ್.ಐ.ಎಸ್ಸಿ., ಎಂ.ಎಲ್.ಐ.ಎಸ್ಸಿ., ಎಂ.ಎಸ್ಸಿ. ಎಂ.ಬಿ.ಎ., ಪಿ.ಜಿ. ಸರ್ಟಿಫಿಕೇಟ್ ಪ್ರೋಗ್ರಾಮ್ಸ್., ಡಿಪ್ಲೋಮಾ ಪ್ರೋಗ್ರಾಮ್ಸ್., ಸರ್ಟಿಫಿಕೇಟ್ ಪ್ರೋಗ್ರಾಮ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮಲ್ಲೇಶ್ವರಂನ ಪ್ರಾದೇಶಿಕ ಕೇಂದ್ರದಲ್ಲಿ ಮಹಿಳಾ ಮತ್ತು ಪುರುಷ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಅವಕಾಶ ಕಲ್ಪಿಸಿದೆ. ಪ್ರವೇಶಾತಿ ಪಡೆಯಲು ನವೆಂಬರ್ 15 ಕೊನೆಯ ದಿನಾಂಕವಾಗಿದೆ. ಅರ್ಜಿಗಳನ್ನು ಅಧಿಕೃತ ವೆಬ್‌ಸೈಟ್ www.ksoumysuru.ac.inನಲ್ಲಿ ಕೆಎಸ್‌ಒಯು ಪ್ರವೇಶ ಪೋರ್ಟಲ್ ಮೂಲಕ ಪದವಿಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶಾತಿ ಪಡೆಯಬಹುದಾಗಿದೆ. ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ, ಡಿಫೆನ್ಸ್ ಹಾಗೂ ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ, ಆಟೋ / ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ, ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಕೆಡಬ್ಲ್ಯೂಕೆಆರ್‌ಟಿಸಿ, ಕೆಕೆಆರ್‌ಟಿಸಿ, ನೌಕರರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡಲಾಗಿದೆ. ಕೋವಿಡ್-19ರ ಸಾಂಕ್ರಾಮಿಕ ರೋಗದಿಂದ ಮೃತರಾದ ಪೋಷಕರ ಮಕ್ಕಳಿಗೆ, ತೃತೀಯ ಲಿಂಗದ ವಿದ್ಯಾರ್ಥಿಗಳಿಗೆ, ದೃಷ್ಟಿಹೀನ ವಿದ್ಯಾಥಿಗಳಿಗೆ (ಬಿ.ಇಡಿ, ಎಂಬಿಎ ಹೊರತುಪಡಿಸಿ) ಎಸ್‌ಸಿ/ಎಸ್‌ಟಿ/ಒಬಿಸಿ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು ಒದಗಿಸಿದಲ್ಲಿ ಎಸ್‌ಎಸ್‌ಪಿ ಮುಖಾಂತರ ವಿದ್ಯಾರ್ಥಿವೇತನವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಶಶಿಕಲಾ ಜೆ, ಪ್ರಾದೇಶಿಕ ನಿರ್ದೇಶಕರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮಹಿಳಾ ಪ್ರಾದೇಶಿಕ ಕೇಂದ್ರ, ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜು, 4ನೇ ಮುಖ್ಯ ರಸ್ತೆ, 13ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03 ಹಾಗೂ ಕಛೇರಿ ದೂರವಾಣಿ ಸಂಖ್ಯೆ - 080 23448811, 9482534897, 7204819172 ನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ಶ್ರೀಮತಿ ಶಶಿಕಲಾ. ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಪೂರ್ವ-1-1, ಪೂರ್ವ-2-1, ಆಗ್ನೇಯ -1, ಆಗ್ನೇಯ -4, ಪಶ್ಚಿಮ -1-1, ಪಶ್ಚಿಮ -2-1, ವಾಯುವ್ಯ - 1, ವಾಯುವ್ಯ 3, ಕೇಂದ್ರ-1-1 ಈಶಾನ್ಯ 1 ಮತ್ತು ಉತ್ತರ-1-1, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನವೆಂಬರ್ 7 ರಂದು ಬೆಳಿಗ್ಗೆ 9.30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಎ.ಇ.ಸಿ.ಎಸ್ 1 ಮತ್ತು 2, ಹೂಡಿ, ಹೆಚ್.ಬಿಆರ್.ಲೇಔಟ್, ಕಾಚರಕನಹಳ್ಳಿ, ಕಲ್ಯಾಣನಗರ, ಜೀವನ್ ಭೀಮಾನಗರ, ಹೆಚ್.ಎ.ಎಲ್ 2ನೇ ಹಂತ, ಇಂದಿರಾನಗರ, ಬೈಯ್ಯಪ್ಪನಹಳ್ಳಿ, ಸಿ.ವಿ.ರಾಮನ್‌ನಗರ, ಸದಾನಂದನಗರ, ಮಾಗಡಿ ರಸ್ತೆ 1,2, ಹೊಸಹಳ್ಳಿ ಪಂಪ್ ಹೌಸ್, ಮೈಸೂರು ರಸ್ತೆ, ಕೆಂಗೇರಿ, ಐಡಿಯಲ್ ಹೋಮ್ಸ್, ಬಿ.ಜಿ.ಎಂ.ಎಲ್ ಲೇಔಟ್, ಆರ್.ಆರ್.ನಗರ, ಕೇತಮಾರನಹಳ್ಳಿ, ಮಹಾಲಕ್ಷ್ಮಿ ಲೇಔಟ್, ರಾಜಾಜಿನಗರ-1, 2, ನಂದಿನಿ ಲೇಔಟ್ 1, ಎಂ.ಇ.ಐ. ಲೇಔಟ್-1 ಮತ್ತು 2 ಬಾಹುಬಲಿನಗರ, ಹೈಗ್ರೌಂಡ್ಸ್ (ಹೆಚ್.ಜಿ.ಆರ್), ಕೋಲ್ಸ್ ಪಾರ್ಕ್, ಮಿಲ್ಲರ್ಸ್ ರಸ್ತೆ, ಮಲ್ಲೇಶ್ವರಂ 1 ಮತ್ತು 2, ಶ್ರೀರಾಂಪುರ, ಯಶವಂತಪುರ- 1 ಮತ್ತು 2, ಭಾಷ್ಯಂಪಾರ್ಕ್, ಸಹಕಾರ ನಗರ, ಜಕ್ಕೂರು, ಕೆಂಪಾಪುರ (ಕಾಫಿ ಬೋರ್ಡ್ ಲೇಔಟ್) ಸೇವಾ ಠಾಣೆಗಳಲ್ಲಿ ಅದಾಲತ್ ನಡೆಯಲಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸಾಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಿಯಾಯಿತಿ ದರದಲ್ಲಿ ಮಾರಾಟ

**ಬೆಂಗಳೂರು:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಕನ್ನಡ ರಾಜ್ಯೋತ್ಸವದ ಪ್ರಯುಕ್ತ ನವೆಂಬರ್ 1 ರಿಂದ 30 ರವರೆಗೆ ಶೇಕಡ 50% ರಿಯಾಯಿತಿಯ ದರದಲ್ಲಿ ಪುಸ್ತಕಗಳನ್ನು ಮಾರಾಟ ಮಾಡಲಾಗುತ್ತದೆ. ಪುಸ್ತಕಗಳು ಆನ್‌ಲೈನ್ www.kuvempubhashabharathi.karnataka.gov.inಮೂಲಕವೂ ಶೇ. 50% ರಿಯಾಯಿತಿ ದರದಲ್ಲಿ ಖರೀದಿಸಬಹುದಾಗಿದ್ದು, ಓದುಗರು ಇದರ ಸದುಪಯೋಗಪಡೆದುಕೊಳ್ಳುವಂತೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ವಸ್ತುಪ್ರದರ್ಶನ ಮಳಿಗೆಗಳ ಕಾಯ್ದಿರಿಸುವ ಅವಧಿ ವಿಸ್ತರಣೆ

**ಬೆಂಗಳೂರು:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವತಿಯಿಂದ ನವೆಂಬರ್ 14 ರಿಂದ 17 ರವರೆಗೆ ನಾಲ್ಕು ದಿನಗಳ ಕೃಷಿಮೇಳ-2024ನ್ನು ಹವಾಮಾನ ಚತುರ ಡಿಜಿಟಲ್ ಕೃಷಿ ಎಂಬ ಘೋ?ವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗುತ್ತಿದೆ. ಈ ಮೇಳದಲ್ಲಿ ಕೃಷಿ ಹಾಗೂ ಸಂಬಂಧಿತ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ. ಪ್ರದರ್ಶಕರ ಒತ್ತಾಯದ ಮೇರೆಗೆ ಕೃಷಿ ವಸ್ತು ಪ್ರದರ್ಶನ ಮಳಿಗೆಗಳ ಕಾಯ್ದಿರಿಸುವಿಕೆಯ ದಿನಾಂಕವನ್ನು ನವೆಂಬರ್ 8 ರ ಸಂಜೆ 5 ಗಂಟೆಯವರೆಗೂ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಾ.ಆರ್. ನಾರಾಯಣರೆಡ್ಡಿ, ಪ್ರಾಧ್ಯಾಪಕರು ಮೊ.ಸಂ:9901488773 ಇವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

# ರೈತ ತರಬೇತಿ ಕಾರ್ಯಕ್ರಮ

**ಬೆಂಗಳೂರು:** ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು ಪೂರ್ವ ತಾಲೂಕು ಕೆ.ಆರ್.ಪುರಂ ನಲ್ಲಿ 2024-25 ನೇ ಸಾಲಿಗೆ ಪಶುಪಾಲನಾ ಇಲಾಖೆಯಿಂದ ರೈತರ ತರಬೇತಿ ಕಾರ್ಯಕ್ರಮವನ್ನು ನವೆಂಬರ್ 20 ಮತ್ತು 21 ರಂದು ಎರಡು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ. ಆಸಕ್ತ ರೈತರು ನವೆಂಬರ್ 16 ರ ಸಂಜೆ 4 ಗಂಟೆಯೊಳಗೆ ಸ್ಥಳೀಯ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಅಥವಾ ವಿಸ್ತರಣಾಧಿಕಾರಿಗಳು, ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು ಪೂರ್ವ ತಾಲೂಕು ಇವರ ಮೊ.ಸಂ. 9620360369 ಗೆ ಕರೆ ಮಾಡಿ ನೋಂದಾಯಿಸಿ .

# 11 ರಂದು ಒನಕೆ ಓಬವ್ವ ಜಯಂತಿ

**ಕೋಲಾರ:** ಜಿಲ್ಲಾದ್ಯಂತ ನವೆಂಬರ್ 11 ರಂದು ಒನಕೆ ಓಬವ್ವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಂಗಳ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ, ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಮುದಾಯದವರು ಸಂಘ-ಸಂಸ್ಥೆಗಳು ಪದಾಧಿಕಾರಿಗಳ ಸಲಹೆಗಳನ್ನು ಆಲಿಸಿ ಒನಕೆ ಓಬವ್ವ ಜೀವನ ಚರಿತ್ರೆಯ ಬಗ್ಗೆ ಪುಸ್ತಕಗಳನ್ನು ಹಂಚಿಕೆ ಮಾಡಬೇಕು ಹಾಗೂ ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ನಡೆಯುವ ಜಯಂತಿಗೆ ಶಾಲಾ ಕಾಲೇಜಿನ ಮಕ್ಕಳನ್ನು ಕರೆತರುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ, ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವಿದ್ಯಾರ್ಥಿನಿಲಯಕ್ಕೆ ಬಾಡಿಗೆ ಕಟ್ಟಡವನ್ನು ನೀಡಲು ಸೂಚನೆ

**ಕೋಲಾರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕೆ.ಜಿ.ಎಫ್ ತಾಲ್ಲೂಕಿನ ಬೇತಮಂಗಲ ಪಟ್ಟಣದಲ್ಲಿ 100 ಸಂಖ್ಯಾ ಬಲದ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ. ಬೇತಮಂಗಲ ಪಟ್ಟಣದಲ್ಲಿ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಬೇಕಾಗಿದ್ದು, ಸದರಿ ವಿದ್ಯಾರ್ಥಿ ನಿಲಯಕ್ಕೆ ಸ್ವಂತ ಕಟ್ಟಡದ ಅವಶ್ಯಕತೆ ಇರುತ್ತದೆ. ಸದರಿ ಕಟ್ಟಡವು 100 ವಿದ್ಯಾರ್ಥಿಗಳಿಗೆ ವಾಸಕ್ಕೆ ಅನುಕೂಲಕರವಾಗಿರಬೇಕು ಸುಸಜ್ಜಿತವಾದ ಸ್ನಾನಗೃಹ ಮತ್ತು ಶೌಚಾಲಯಗಳನ್ನು ಹೊಂದಿರಬೇಕು. ವಿದ್ಯಾರ್ಥಿನಿಲಯಕ್ಕೆ ಬಾಡಿಗೆಗೆ ಕಟ್ಟಡವನ್ನು ನೀಡಲು ಆಸಕ್ತಿವುಳ್ಳ ಕಟ್ಟಡ ಮಾಲೀಕರು ನವೆಂಬರ್ 12 ರೊಳಗೆ ಕಛೇರಿ ವೇಳೆಯಲ್ಲಿ ದೂರವಾಣಿ ಸಂಖ್ಯೆ 08153-255624 ನ್ನು ಸಂಪರ್ಕಿಸಬಹುದು ಎಂದು ಬಂಗಾರಪೇಟೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ತುಮಕೂರಿನಲ್ಲಿ ನಡೆದ ಪ್ರೌಢಶಾಲಾ ಮಟ್ಟದ ಅಥ್ಲೇಟಿಕ್ ಕ್ರೀಡಾಕೂಟದಲ್ಲಿ ತಾಲ್ಲೂಕಿನ ಮಣಕಿಕೆರೆಯ ಭುವನೇಶ್ವರಿ ಪ್ರೌಢಶಾಲೆಯ 10 ನೇ ತರಗತಿ ವಿದ್ಯಾರ್ಥಿ ಕವನ ಹೆಚ್. ಎಸ್ 400 ಮೀ ಹರ್ಡಲ್ಸ್‌ನಲ್ಲಿ ಪ್ರಥಮ ಸ್ಥಾನ ಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಕ್ರೀಡಾಪಟುವಿಗೆ ಶಾಲೆಯ ಅದ್ಯಕ್ಷ ರವಿಕುಮಾರ್, ಕಾರ್ಯದರ್ಶಿ ಅಮರ್‌ಸಿಂಗ್ ಮುಖ್ಯಶಿಕ್ಷಕಿ ಪವಿತ್ರ, ದೈಹಿಕ ಶಿಕ್ಷಕ ಪ್ರಕಾಶ್.ಹೆಚ್.ಎನ್ ಹಾಗೂ ಸಹಶಿಕ್ಷಕರು ಮತ್ತು ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದರು.**

# ಹೊಳಲು ಗ್ರಾಮದಲ್ಲಿ ಶ್ರೀ ಚಿತ್ತಾನಳ್ಳಿ ಪಟ್ಟಲದಮ್ಮ ದೇವಸ್ಥಾನದಲ್ಲಿ ಪೂಜಾ ಮಹೋತ್ಸವ



**ಮಂಡ್ಯ:** ಶ್ರೀ ಚಿತ್ರನಾಳಮ್ಮ ಪಟ್ಟಲದಮ್ಮ ದೇವಸ್ಥಾನ ಹೊಳಲು ನೂತನವಾಗಿ ನಿರ್ಮಿಸಿರುವ ನಾಗರಕಟ್ಟೆ, ಅರಳಿಕಟ್ಟೆ, ರಾಜಗೋಪುರ, 52 ದೇವತೆಗಳ ಶಕ್ತಿಪೀಠ, ಬಲಿಪೀಠ, ಗರುಡಗಂಭ, ಅಮ್ಮನವರ ಪಾದುಕೆ, ಸಿಂಹಾವಾಹನ, ಮಹಾದ್ವಾರ ಕಲ್ಲಿನ ಜೋಡಿ ಆನೆಗಳ ಪ್ರತಿಮೆ ಹಾಗೂ ವಿಮಾನ ಗೋಪುರ ಕಳಸ ಪ್ರತಿಷ್ಠಾಪನೆಯ ಉದ್ಘಾಟನೆ ನ.,6 ರ ಬುಧವಾರ ಬೆಳಿಗ್ಗೆ 6, ರಿಂದ ಪಲಾನ್ಯಾಸ, ದೇವತಾರಾಧನೆ, ಪ್ರಾರ್ಥನೆ, ನಾಗಸನ್ನಿಧಿಯಲ್ಲಿ ಬಿಂಬಸುದ್ದಿ, ಸ್ಥಳಶುದ್ದಿ, ಧಾನ್ಯದಿವಸ, ಸೋಬಾನೆ, ಕಳಸ ಪ್ರತಿಷ್ಠಾಪಿಸುವ ಮೂಲಕ ಗಂಗೆಸಮೇತ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಲಾಗುವುದು.

ನ.7 ರ ಗುರುವಾರದಂದು ಬೆಳಿಗ್ಗೆ ನಾಗಸನ್ನಿಧಿಯಲ್ಲಿ ನಾಗಪ್ರತಿಷ್ಠೆ, ದೇವಾಲಯದಲ್ಲಿ ಗಣಪತಿಹವನ, ಬಿಂಬಸುದ್ದಿ, ಸಂಜೆ ಕಳಸಾ ಪ್ರಸ್ತಾಪನೆ, ಸುಮಂಗಲಿಯರಿಂದ ರಾತ್ರಿ 10ಗಂಟೆಗೆ ಸಾಮೂಹಿಕ ಕುಂಕುಮಾರ್ಚನೆ, ರಾತ್ರಿ 8 ಗಂಟೆಗೆ ದೊಡ್ಡಯ್ಯ-ಬೀರೇಶ್ವರ 8 ಕೂಟಗಳ ಬಸವ ಪೂಜೆ, ಹೂಹೊಂಬಾಳೆ ಮಾಡಲಾಗುವುದು. ನಂತರ ಹೊಳಲು ಗ್ರಾಮದಿಂದ ದೇವಸ್ಥಾನದವರೆಗೆ ದೇವರ ಮೆರವಣಿಗೆ ಮಾಡಲಾಗುವುದು. ನ.8 ರ ಶುಕ್ರವಾರ ಬೆಳಿಗ್ಗೆ 7ಗಂಟೆಗೆ ಕಲಾ ಹೋಮ, ನವಚಂಡಿಕಾಹವನ ಇತರೆ ಹೋಮಗಳನ್ನು ನೆರವೇರಿಸಿದ ನಂತರ ಶ್ರೀಬಲಮುರಿ ಗಣಪತಿ ದೇವಾಲಯದ ಆವರಣದಿಂದ ಕಳಸ ಕಳಸ ಕಳಶ ಪೂಜಿಸಿಕೊಂಡು ನಂತರ 12ದೇವರ ಪೂಜಾ ಕೂಟ, 201 ಮಹಿಳೆಯರಿಂದ ಆದಿಚುಂಚನಗಿರಿ ಪೀಠಾಧ್ಯಕ್ಷರಾದ ಪರಮಪೂಜ್ಯ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಶ್ರೀ ಪುರುಷೋತ್ತಮ ಸ್ವಾಮೀಜಿಯವರನ್ನು ಭವ್ಯ ಮೆರವಣಿಗೆಯೊಂದಿಗೆ ಚಿತ್ತನಳಿಯಮ್ಮ ದೇವಾಲಯಕ್ಕೆ ಕರೆತರಲಾಗುವುದು. ನಂತರ ಉದ್ಘಾಟನಾ ಕಾರ್ಯಕ್ರಮ ನಡೆಯಲಿದ್ದು, ಬೆಳಿಗ್ಗೆ 10ಗಂಟೆಗೆ ಸುಮಾರು 15 ಸಾವಿರ ಭಕ್ತಾಧಿಗಳಿಗೆ ಕಜ್ಜಾಯದೊಂದಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಹೊಳಲು ಗ್ರಾಮದಿಂದ ಪ್ರಮುಖ ರಸ್ತೆಯಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲಾಗಿದ್ದು, ಗ್ರಾಮದಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಿದೆ. ಈ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ದರ್ಶನ್‌ಪುಟ್ಟಣ್ಣಯ್ಯ, ರವಿಕುಮಾರ್ ಗಣಿಗ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಮಾಜಿ ಸಂಸದರಾದ ಸುಮಲತಾ ಅಂಬರೀಷ್, ಕು.ರಮ್ಯಾ, ಹಾಗೂ ಮಂಡ್ಯ ಜಿಲ್ಲೆಯ ಜನಪ್ರಿಯ ನಾಯಕರುಗಳು , ಹಾಗೂ ಅಕ್ಕಪಕ್ಕದ ಗ್ರಾಮಸ್ಥರು ಸಂಘ ಸಂಸ್ಥೆಯ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

**ಕೋಲಾರದ ಜನಸೇವಾ ಸಂಸ್ಥೆ ವತಿಯಿಂದ ಬೆಂಗಳೂರಿನ ಕನ್ನಡ ಭವನದಲ್ಲಿ ದಿನಾಂಕ 04-11-2024 ರಂದು ನಡೆದ ವಿಶ್ವೇಶ್ವರಯ್ಯರ 163ನೇ ಜನ್ಮದಿನಾಚರಣೆಯ ಸಲುವಾಗಿ ಯಲವಾರ ಡಾ.ನಾರಾಯಣಸ್ವಾಮಿಗೆ ಭಾರತರತ್ನ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.**



**ಮಡಿವಾಳ ಅಯೋಧ್ಯಾ ನಗರ ಶಿವಾಚಾರ ವೈಶ್ಯ ನಗರ್ತ ವಿದ್ಯಾವರ್ಧಕ ಸಂಘದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ನಮ್ಮ ಮಾಲೂರು ತಾಲೂಕಿನ ವಿದ್ಯಾರ್ಥಿಗಳಿಗೆ ಮಾತ್ರ ಸಂಸ್ಥೆ ವತಿಯಿಂದ ಅಧ್ಯಕ್ಷರಾದ ಎಸ್. ಪ್ರಕಾಶ್ ಕಾರ್ಯದರ್ಶಿಗಳಾದ ಎಂ.ಎಸ್.ಕೃಷ್ಣಮೂರ್ತಿ ಹಾಗೂ ನಮ್ಮ ನಿರ್ದೇಶಕರಾದ ನಂಜುಂಡಪ್ಪ ಸನ್ಮಾನಿಸಲಾಯಿತು. ಸನ್ಮಾನಿತ ವಿದ್ಯಾರ್ಥಿಗಳು. 1.ಲೇಖನ ಮಣ್ಯಪ್ಪ. ಮಾಲೂರು. 2.ಪೂರ್ಣಿಮ ವಿಶ್ವನಾಥ್. ಚೊಕ್ಕೊಂಡಹಳ್ಳಿ. 3.ಮೌಖಿಕ ರಾಜು. ಅಬ್ಬೇನಹಳ್ಳಿ.**



# ಸೋಮೇಶ್ವರ ಸ್ವಾಮಿಗೆ ಕಾರ್ತಿಕ ಪೂಜೆ



**ತೊರ್ನಹಳ್ಳಿ ಸಮೀಪದ ಮುಗಬಾಳ ಗ್ರಾಮದಲ್ಲಿ ನೆಲೆಸಿರುವ ಶ್ರೀ ಸೋಮೇಶ್ವರ ಸ್ವಾಮಿಗೆ ಕಾರ್ತಿಕ ಮಾಸದ ಸೋಮವಾರ ಹಿನ್ನಲೆಯಲ್ಲಿ ವಿಶೇಷ ಪೂಜೆ ನಡೆಯಿತು.**

**ಮಡಿವಾಳ:** ಶ್ರೀ ಸೋಮೇಶ್ವರ ಸ್ವಾಮಿಯ ದೇವಾಲಯದಲ್ಲಿ ಕಾರ್ತಿಕ ಮಾಸದ ಮೊದಲನೆ ಸೋಮವಾರ ಪ್ರಯುಕ್ತ ಕಾರ್ಯಕ್ರಮವನ್ನು ಅರ್ಚಕರಾದ ಸಿದ್ದಲಿಂಗ ಶಾಸ್ತ್ರಿಗಳು ನೆರವೇರಿಸಿದರು.

ತೊರ್ನಹಳ್ಳಿ ಸಮೀಪದ ಮುಗಬಾಳ ಗ್ರಾಮದಲ್ಲಿ ನೆಲೆಸಿರುವ ಶ್ರೀ ಸೋಮೇಶ್ವರ ಸ್ವಾಮಿಗೆ ಕಾರ್ತಿಕ ಮಾಸದ ಸೋಮವಾರ ಹಿನ್ನಲೆಯಲ್ಲಿ ಬೆಳಿಗ್ಗೆಯಿಂದಲೇ ವಿಶೇಷ ಅಲಂಕಾರ, ಅಭಿಷೇಕ, ಪೂಜೆ, ಹೋಮ, ಹವನ ಸೇರಿದಂತೆ ವಿವಿಧ ದೈವಿಕ ಕೈಂಕರ್ಯಗಳು ನಡೆದವು. ಈ ಸಂದರ್ಭದಲ್ಲಿ ದೇವಾಲಯಕ್ಕೆ ಆಗಮಿಸಿದ ಭಕ್ತಾದಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ಮಾಡಲಾಯಿತು. ಈ ಸಂದರ್ಭದಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಸೋಮಶೇಖರ್, ದೇವಾಲಯದ ಅಧ್ಯಕ್ಷರಾದ ಮಂಜುನಾಥ್ ಶರೀಫ್, ಕಾರ್ಯದರ್ಶಿ ವೀರಸ್ವಾಮಿ ಗೌಡ, ಖಜಾಂಚಿ ಜ್ಞಾನಮೂರ್ತಿಗಳು ಹಾಗೂ ಎಲ್ಲಾ ನಿರ್ದೇಶಕರುಗಳು ಇದ್ದರು.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮಂಡ್ಯ:** ಮೆಟ್ರಿಕ್ ನಂತರದಕೋರ್ಸ್ ಗಳಾದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ - 1 ರಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ



2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯ ಮೂಲಕನೀಡಲಾಗುತ್ತಿರುವಮೆಟ್ರಿಕ್ -ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ(ಊಟ ಮತ್ತು ವಸತಿ ಸಹಾಯಯೋಜನೆ) ಸೌಲಭ್ಯಕ್ಕಾಗಿಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದ್ದು, ಅಕ್ಟೋಬರ್15ಅರ್ಜಿ ಸಲ್ಲಿಸುವಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ವಿದ್ಯಾರ್ಥಿಗಳು ಮತ್ತು ಶಿಕ್ಷಣ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡಿರುತ್ತಾರೆ.ಆದಕಾರಣಅರ್ಜಿ ಸಲ್ಲಿಸಲುಕೊನೆಯ ದಿನಾಂಕವನ್ನುನವೆಂಬರ್10ರವರೆಗೆ ವಿಸ್ತರಿಸಲಾಗಿದೆಎಂದು ಮಂಡ್ಯತಾಲ್ಲೂಕುಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯತಾಲ್ಲೂಕುಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಾರ್ವಜನಿಕ ಆಸ್ಪತ್ರೆ, ಕೆ.ಆರ್. ಪುರ**
ಆಡಳಿತ ವೈದ್ಯಾಧಿಕಾರಿಗಳ ಕಛೇರಿ, ಕೆ.ಆರ್. ಪುರ, ಬೆಂಗಳೂರು-560064
ದೂರವಾಣಿ: 080-25612238, ಇ-ಮೇಲ್: amoghkrpuram@gmail.com
ಸಂ.: ಸಾಆಕೃ/ಕ್ಯಾಂಟೀನ್/ಇ-ಟೆಂ/03/24-25 ದಿನಾಂಕ: 04.11.2024

**ಇ-ಟೆಂಡರ್ ಅಧಿಸೂಚನೆ**

ಸಾರ್ವಜನಿಕ ಆಸ್ಪತ್ರೆ, ಕೆ.ಆರ್. ಪುರ, ಬೆಂಗಳೂರು ಇಲ್ಲಿನ ಆವರಣದಲ್ಲಿ ಉಪಹಾರ ಗೃಹದ ಕಟ್ಟಡವನ್ನು ನಿರ್ಮಾಣ ಮಾಡಲಾಗಿದ್ದು, ಸದರಿ ಉಪಹಾರ ನಿರ್ವಹಣೆಗಾಗಿ (ರಿಯಾಯಿತಿ ದರದಲ್ಲಿ) ಅರ್ಹ ಮತ್ತು ಆಸಕ್ತ ಅರ್ಹ ಮತ್ತು ಆಸಕ್ತ ಸಂಸ್ಥೆಯವರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999 -2000ರ ಪ್ರಕಾರ ದ್ವಿ-ಬಿಡ್ (Technical and Financial) ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಇ-ಟೆಂಡರ್ ಆಹ್ವಾನಿಸಿದ್ದು, ವಿವರಗಳು ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ **https://kppp.karnataka.gov.in** ಟೆಂಡರ್ ಸಂಖ್ಯೆ **DHFWS/2024-25/SE1098** ರಲ್ಲಿ ಲಭ್ಯವಿರುತ್ತದೆ. ಹೆಲ್ಪ್‌ಲೈನ್ ನಂ. 080-2550 1216/227 ಟೆಂಡರ್‌ನ ಎಲ್ಲಾ ನಿಬಂಧನೆಗಳನ್ನು ಟೆಂಡರ್ ಬಿಡ್‌ನಲ್ಲಿ ನೀಡಲಾಗಿದೆ. ಹೆಚ್ಚಿನ ಮಾಹಿತಿಯನ್ನು ಎಲ್ಲಾ ಕೆಲಸದ ದಿನಗಳಲ್ಲಿ ಆಸ್ಪತ್ರೆಯ ಕಛೇರಿಯಿಂದ ಪಡೆದುಕೊಳ್ಳಬಹುದು.

**ವಿಷಯದ ಷೆಡ್ಯೂಲ್‌ಗಳು:** (1) ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: **05.11.2024**ರಂದು ಬೆಳಿಗ್ಗೆ **11:30 ಗಂಟೆ**ಯಿಂದ. (2) ಟೆಂಡರ್ ಸಲ್ಲಿಕೆಗೆ ಕಡೇ ದಿನಾಂಕ ಮತ್ತು ಸಮಯ: **25.11.2024**ರಂದು **ಸಂಜೆ 5:30 ಗಂಟೆ**ಗೆ. (3) ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ ಮತ್ತು ಸಮಯ: **26.11.2024**ರಂದು ಬೆಳಿಗ್ಗೆ **11:00 ಗಂಟೆ**ಗೆ. (4) ಆರ್ಥಿಕ ಬಿಡ್ಡನ್ನು ತೆರೆಯುವ ದಿನಾಂಕ ಮತ್ತು ಸಮಯ: **27.11.2024**ರಂದು ಬೆಳಿಗ್ಗೆ **11:30 ಗಂಟೆ**ಗೆ.

ವಾಸಾಸಂಇ/ವಾಪ್ರ/ಎಲ್‌ಸಿ/2911/2024-25

ಸಹಿ/-, ಟೆಂಡರ್ ಸಮಿತಿ ಅಧ್ಯಕ್ಷರು/ಆಡಳಿತ ವೈದ್ಯಾಧಿಕಾರಿಗಳು
ಸಾರ್ವಜನಿಕ ಆಸ್ಪತ್ರೆ, ಕೆ.ಆರ್.ಪುರ, ಬೆಂಗಳೂರು

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**
ನಂ. 333/1, 1ನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.
ಸಂ: ಬಿಐಎಎಪಿಎ/ಟಿಪಿ/ಭೂಉಬ/97/2024-25/1832 ದಿನಾಂಕ : 05.11.2024

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು ವ್ಯವಸಾಯ ಭೂಉಪಯೋಗ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1. | ಶ್ರೀ ಎಸ್.ಕೆ.ಧ್ರುವ ಯಶವಂತ್ ಬಿನ್ ಎಸ್.ಕೆ.ಕೋದಂಡರಾಮಯ್ಯ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 24/4 | 0-20 | ವ್ಯವಸಾಯ | ವಸತಿ |
| 2. | ಶ್ರೀ ಸಿ.ಪಿಳ್ಳರಾಜು ಬಿನ್ ಚೌಡಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 24/5 | 0-20 | ವ್ಯವಸಾಯ | ವಸತಿ |
| 3. | ಶ್ರೀ ಅಥರ್ವ ಡೆವೆಲಪರ್ಸ್ ಪರವಾಗಿ ಪಾಲುದಾರರಾದ ಶ್ರೀ ರಾಮ್‌ಗೋಪಾಲ್ ವೈ.ಎಂ & ಶ್ರೀ ನಾರಾಯಣಸ್ವಾಮಿ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 24/9 | 0-22 | ವ್ಯವಸಾಯ | ವಸತಿ |
| 4. | ಶ್ರೀ ಮಧುಕುಮಾರ್ ಬಿನ್ ಸಿದ್ದಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 19/2 | 0-31 | ವ್ಯವಸಾಯ | ವಸತಿ |
| 5. | ಶ್ರೀಮತಿ ಚನ್ನಮ್ಮ ಕೋಂ ಆರ್.ರವಿ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 10/3 | 1-0.08 | ವ್ಯವಸಾಯ | ವಸತಿ |
| 6. | ಶ್ರೀ ನಾರಾಯಣಸ್ವಾಮಿ ಬಿನ್ ಆಂಜಿನಪ್ಪ & ಶ್ರೀ ಮುನಿರಾಜು ಬಿನ್ ಆಂಜಿನಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 11/1 | 2-06.08 | ವ್ಯವಸಾಯ | ವಸತಿ |
| 7. | ಶ್ರೀ ಎಂ.ಬೀರಪ್ಪ ಬಿನ್ ಲೇ॥ ಮುನಿಯಪ್ಪ, ಶ್ರೀ ಎಂ.ಚಂದ್ರಪ್ಪ ಬಿನ್ ಲೇ॥ ಮುನಿಯಪ್ಪ & ಶ್ರೀ ಎಂ.ಶಿವಣ್ಣ ಬಿನ್ ಲೇ॥ ಮುನಿಯಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 13/1 | 0-32 | ವ್ಯವಸಾಯ | ವಸತಿ |
| 8. | ಶ್ರೀ ಲಕ್ಕಣ್ಣ ಬಿನ್ ಲೇ॥ ದೊಡ್ಡಸಂಜೀವಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 17/3 | 1-04+ 0-01 ಗು 'ಎ' ಖರಾಬು | ವ್ಯವಸಾಯ | ವಸತಿ |
| 9. | ಶ್ರೀಮತಿ ಗಂಗಮ್ಮ ಕೋಂ ಲೇ॥ ನಂಜುಂಡಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 14/3 | 1-18 | ವ್ಯವಸಾಯ | ವಸತಿ |
| 10. | ಶ್ರೀಮತಿ ಎಲ್.ಶೈಲ ಕೋಂ ಸುರೇಶ್ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 20/7 | 0-13.12 | ವ್ಯವಸಾಯ | ವಸತಿ |
| 11. | ಶ್ರೀಮತಿ ಭಾವನ.ಸಿ ಕೋಂ ಹರೀಶ್ ಹೆಚ್.ಕೆ & ಶ್ರೀಮತಿ ಅರುಂಧತಿ ಬಿ.ಆರ್ ಕೋಂ ಅಜಿತ್ ಕೆ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 13/2 | 0-33 | ವ್ಯವಸಾಯ | ವಸತಿ |
| 12. | ಶ್ರೀಮತಿ ಸಿ.ಮಂಜುನಾಥ್ ಬಿನ್ ಲೇ॥ ಚಿಕ್ಕಬೀರಪ್ಪ, ಶ್ರೀ ಅನುಷ್ ಎಲ್ ಬಿನ್ ಲಕ್ಷ್ಮೀನಾರಾಯಣ ಸಿ, ಶ್ರೀ ಶರತ್ ಪಟೇಲ್ ಎನ್ ಬಿನ್ ಸಿ.ನಾಗೇಶ್ & ಶ್ರೀ ಮನೋಜ್ ಕುಮಾರ್ ಎನ್ ಬಿನ್ ನಾಗೇಶ್ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 19/1 | 0-32 | ವ್ಯವಸಾಯ | ವಸತಿ |
| 13. | ಶ್ರೀ ಎಂ.ಚಂದ್ರಪ್ಪ ಬಿನ್ ಲೇ॥ ಮುನಿಯಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 14/5 | 0-06 | ವ್ಯವಸಾಯ | ವಸತಿ |
| 14. | ಶ್ರೀಮತಿ ಶಕುಂತಲಮ್ಮ - ಲೇ॥ ಸಿ.ಎಂ.ತ್ಯಾಗರಾಜು | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 23 | 1-27+0-01 ಗು 'ಎ' ಖರಾಬು | ವ್ಯವಸಾಯ | ವಸತಿ |
| 15. | ಶ್ರೀಮತಿ ಗಾಯಿತ್ರಿ ಎಂ ಕೋಂ ಮುನಿರಾಜು ಎಂ.ವಿ & ಶ್ರೀಮತಿ ಪಲ್ಲವಿ ಕೋಂ ದೇವರಾಜ್ ಜಿ.ಎಂ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 13/3 | 0-32 | ವ್ಯವಸಾಯ | ವಸತಿ |
| 16. | ಶ್ರೀಮತಿ ಶಕುಂತಲಮ್ಮ ಕೋಂ ಸಿ.ಎಂ.ತ್ಯಾಗರಾಜು | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 20/6 | 0-27 | ವ್ಯವಸಾಯ | ವಸತಿ |
| 17. | ಶ್ರೀ ಮಂಜುನಾಥ - ಲೇ॥ ಚಿಕ್ಕಬೀರಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 20/1 | 0-27.08 | ವ್ಯವಸಾಯ | ವಸತಿ |
| 18. | ಶ್ರೀ ಮೋಹನ್ ಕುಮಾರ್ ಬಿನ್ ಸಿದ್ದಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 20/4 | 0-14 | ವ್ಯವಸಾಯ | ವಸತಿ |
| 19. | ಶ್ರೀಮತಿ ಸತ್ಯಮ್ಮ ಕೋಂ ಮುನಿರಾಜು | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 14/1 | 0-35 | ವ್ಯವಸಾಯ | ವಸತಿ |
| 20. | ಶ್ರೀ ದ್ಯಾವಪ್ಪ ಬಿನ್ ಲೇ॥ ಹನುಮಂತಪ್ಪ | ದೇವನಹಳ್ಳಿ | ಕಸಬಾ | ಚಿಕ್ಕಚೀಮನಹಳ್ಳಿ | 14/2 | 0-35 | ವ್ಯವಸಾಯ | ವಸತಿ |

**ಷರಾ :-** ಪ್ರಸ್ತಾವನೆಯಲ್ಲಿನ ಅರ್ಜಿದಾರರುಗಳು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ, ಹಾಗೂ ಪರಿಸರದಲ್ಲಿ ವಾಸದ ಬೆಳವಣಿಗೆಗೆ ಅತಿ ಹೆಚ್ಚು ಬೇಡಿಕೆ ಇದ್ದು, ಸದರಿ ಜಮೀನುಗಳನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಗೊಂಡ ನಂತರ ವಸತಿ ಉದ್ದೇಶಕ್ಕೆ ಭೂಪರಿವರ್ತಿಸಿ, ಪ್ರಾಧಿಕಾರದಿಂದ ಅನುಮೋದನೆ ಪಡೆದು, ಯೋಜನಾ ಬದ್ಧ ಅಭಿವೃದ್ಧಿ ಕಾರ್ಯಗಳಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಪ್ರದೇಶವನ್ನು **'ವ್ಯವಸಾಯ ಭೂಉಪಯೋಗ ವಲಯ'** ದಿಂದ **'ವಸತಿ ವಲಯ'** ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ವಾ.ಸಾ.ಸಂ.ಇ/ವಾಪ್ರ/2944/2024-25

ಸಹಿ/- ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ

# ಮಕ್ಕಳ ದಿನಾಚರಣೆ: 06 ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ ವಿವಿಧ ಸ್ಪರ್ಧೆ

**ಮಂಡ್ಯ:** 2024-25 ನೇ ಸಾಲಿನ ಮಕ್ಕಳ ದಿನಾಚರಣೆ ಪ್ರಯುಕ್ತ 06 ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ ನವೆಂಬರ್ 09 ರಂದು ಬೆಳಿಗ್ಗೆ 10 ಗಂಟೆಗೆ ಮಂಡ್ಯ ಜಿಲ್ಲಾ ಬಾಲಾಭವನದಲ್ಲಿ ಸೃಜನಾತ್ಮಕ ಪ್ರದರ್ಶನ ಕಲೆ, ವಾದ್ಯ ಸಂಗೀತ, ವಿಜ್ಞಾನದಲ್ಲಿ ನೂತನ ಆವಿಷ್ಕಾರ ಮತ್ತುಚಿತ್ರಕಲಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರಗಳನ್ನು ವಿತರಿಸುವುದರಜೊತೆಗೆ ಬೆಂಗಳೂರಿನಲ್ಲಿ ನಡೆಯುವರಾಜ್ಯಮಟ್ಟದ ಸ್ಪರ್ಧೆಗೆಕರೆದೊಯ್ಯಲಾಗುವುದು. ಹೆಚ್ಚಿನ ಮಾಹಿತಿಗಾಗಿದೂ.ಸಂ:- 9036801065 ಅನ್ನು ಸಂಪರ್ಕಿಸಬಹುದುಎಂದು ಮಂಡ್ಯ ಜಿಲ್ಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮಂಡ್ಯ:** ಮೆಟ್ರಿಕ್ ನಂತರದಕೋರ್ಸ್ ಗಳಾದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ - 1 ರಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ(ಊಟ ಮತ್ತು ವಸತಿ ಸಹಾಯಯೋಜನೆ) ಸೌಲಭ್ಯಕ್ಕಾಗಿಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದ್ದು, ಅಕ್ಟೋಬರ್31ಅರ್ಜಿ ಸಲ್ಲಿಸುವಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ವಿದ್ಯಾರ್ಥಿಗಳು ಮತ್ತು ಶಿಕ್ಷಣ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡಿರುತ್ತಾರೆ.ಆದಕಾರಣಅರ್ಜಿ ಸಲ್ಲಿಸಲುಕೊನೆಯ ದಿನಾಂಕವನ್ನುನವೆಂಬರ್10ರವರೆಗೆ ವಿಸ್ತರಿಸಲಾಗಿದೆ.ಹೆಚ್ಚಿನ ಮಾಹಿತಿಗಾಗಿ ದೂ. ಸಂ.8050770005 ನ್ನು ಸಂಪರ್ಕಿಸಬಹುದಾಗಿದೆಎಂದು ಮಂಡ್ಯಜಿಲ್ಲೆಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಜಿಲ್ಲಾಅಧಿಕಾರಿಅವರುಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಿವು ಶೈಕ್ಷಣಿಕ ಸಾಲ ಯೋಜನೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ದಿ ನಿಗಮದ ವತಿಯಿಂದ 2024-25 ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ ಈ ಯೋಜನೆಯಡಿ ಸಾಲ-ಸೌಲಭ್ಯವನ್ನು ಪಡೆಯಲು ಇಚ್ಚಿಸುವವರು ಕಡ್ಡಾಯವಾಗಿ ಆನ್ ಲೈನ್ kacdc.karnataka.gov.in ಮೂಲಕ ಅರ್ಜಿಗಳನ್ನು ಡಿಸೆಂಬರ್ 15 ರವರೆಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ 9448451111 ಗೆ ಸಂಪರ್ಕಿಸಬಹುದೆಂದು ಚಿಕ್ಕಬಳ್ಳಾಪುರ ಜಿಲ್ಲೆಯ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಖಾಸಗಿ, ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್-ನಂತರದ ಕೋರ್ಸುಗಳಾದ ಪಿ.ಯು.ಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ,ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ಸದರಿ ಅರ್ಜಿ ಸಲ್ಲಿಸುವ ಅವಧಿಯನ್ನು ನವೆಂಬರ್ 10 ರವರೆಗೆ ವಿಸ್ತರಿಸಲಾಗಿದೆ. ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ ವಿಳಾಸ https://ssp.postmatric.karnataka.gov.in/ ಅನ್ನು ಸಂಪರ್ಕಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್ ಸೈಟ್ ವಿಳಾಸ: https://bcwd.karnataka.gov.in, , ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ 8050770005, ಇಮೇಲ್: bcwdhelpline@gmail.com, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಇ-ಮೇಲ್: postmatrichelp@karnataka.gov.in, ಸಹಾಯವಾಣಿ ಸಂಖ್ಯೆ: 1902 ಗೆ ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಅಧಿಕಾರಿ ಕೆ.ವಿ ಮುನಿರತ್ನಮ್ಮ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ಜಾನಪದ ಅಕಾಡೆಮಿ ಪ್ರಶಸ್ತಿ ಲಭಿದ ಗೌರಮ್ಮಗೆ ಕಸಾಪದಿಂದ ಸನ್ಮಾನ



**ಯಳಂದೂರು:** ಕಣ್ಣು ಕಾಣದಿದ್ದರೂ ಸೋಬಾನೆ, ತತ್ವ ಹಾಗೂ ಜಾನಪದ ಗೀತೆಗಳನ್ನು ಹಾಡುವ ಜಾನಪದ ಹಾಡುಗಾರ್ತಿ ಹೊನ್ನೂರು ಬೀಚಹಳ್ಳಿ ಗ್ರಾಮದ ಗೌರಮ್ಮರವರಿಗೆ ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ ಮಂಗಳವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಅವರ ಮನೆಗೆ ತೆರಳಿ ಸನ್ಮಾನವನ್ನು ಮಾಡಲಾಯಿತು.

ಈ ಸಂದರ್ಭದಲ್ಲಿ ಗೌರವ ಸ್ವೀಕರಿಸಿದ ಗೌರಮ್ಮ ಮಾತನಾಡಿ, ನಾನು ಚಿಕ್ಕಂದಿನಿಂದಲೂ ಜಾನಪದ ಗೀತೆಗಳ ಕಡೆ ಹೆಚ್ಚು ಆಕರ್ಷಿತಳಾಗಿ ಇದನ್ನು ಕಲಿತೆ, ನಮ್ಮ ಗ್ರಾಮದವರು ನನಗೆ ಹೆಚ್ಚು ಪ್ರೀತಿಸುತ್ತಾರೆ. ಪ್ರತಿ ಮನೆಯ ಶುಭ ಕಾರ್ಯಗಳಿಗೂ ನನಗೆ ಸೋಬಾನೆ ಪದ ಹಾಡಲು ಕರೆಯುತ್ತಾರೆ. ಇದಕ್ಕೆ ನಾನು ಚಿರಋಣಿಯಾಗಿದ್ದೇನೆ. ನನಗೆ ಈಗ ಪ್ರಶಸ್ತಿ ಸಂದಿರುವುದು ಅತೀವ ಸಂತಸ ತಂದಿದೆ ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಯರಿಯೂರು ನಾಗೇಂದ್ರ, ಮಾತನಾಡಿ, ಕುರುಡು ಇದ್ದರೂ ಗೌರಮ್ಮ ಜಾನಪದ ಗೀತೆಗಳನ್ನೇ ತಮ್ಮ ಜೀವನದ ಅವಿಭಾಜ್ಯ ಅಂಗವಾಗಿ ಮಾಡಿಕೊಂಡು ಇದರಲ್ಲೇ ದೊಡ್ಡ ಹೆಸರು ಮಾಡಿರುವುದು ಇವರ ಸಾಧನೆಯಾಗಿದೆ. ಹಲವು ದಶಕಗಳಿಂದ ಸೋಬಾನೆ ಹಾಗೂ ಜಾನಪದ ಗೀತೆಗಳಿಗೆ ಇವರು ಜೀವ ತುಂಬಿ ಹಾಡಿದ್ದಾರೆ. ಇವರ ಈ ಸಾಧನೆಗೆ ರಾಜ್ಯಮಟ್ಟದ ಜಾನಪದ ಅಕಾಡೆಮಿ ಪ್ರಶಸ್ತಿ ದೊರೆತಿರುವುದು ನಮ್ಮ ಜಿಲ್ಲೆ, ತಾಲೂಕು ಹಾಗೂ ಈ ಗ್ರಾಮಕ್ಕೆ ಸಂದ ದೊಡ್ಡ ಗೌರವವಾಗಿದೆ. ಇವರು ಈ ರಂಗದಲ್ಲಿ ಇನ್ನಷ್ಟು ಸಾಧನೆಯನ್ನು ಮಾಡಲಿ ಎಂದು ಆಶಿಸಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಇವರನ್ನು ಸನ್ಮಾನಿಸಲಾಗುತ್ತಿದೆ ಎಂದರು.

ತಾಪಂ ಮಾಜಿ ಅಧ್ಯಕ್ಷ ಹೊನ್ನೂರು ನಿರಂಜನ್ ಮಾತನಾಡಿ, ಗೌರಮ್ಮ ನಮ್ಮ ಗ್ರಾಮದ ಹೆಮ್ಮೆಯಾಗಿದ್ದಾರೆ. ಇವರು ಹಾಡುವ ಸೋಬಾನೆ ಪದ ನಮ್ಮ ಜಿಲ್ಲೆ ಹಾಗೂ ತಾಲೂಕಿನಲ್ಲಿ ಪ್ರಸಿದ್ಧಿಯನ್ನು ಪಡೆದಿದೆ. ಮದುವೆಯಾಗದೆ ಒಂಟಿ ಜೀವನ ನಡೆಸುತ್ತಿರುವ ಇವರಿಗೆ ಸ್ವಂತ ಸೂರಿಲ್ಲ, ಈ ನಿಟ್ಟಿನಲ್ಲಿ ಪಂಚಾಯಿತಿ ವತಿಯಿಂದ ಇವರಿಗೆ ನಿವೇಶನ ಹಾಗೂ ಸೂರು ಕೊಡಿಸಲು ಸಂಬಂಧಪಟ್ಟವರು ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಗ್ರಾಪಂ ಮಾಜಿ ಸದಸ್ಯ ರಘು ಮಾತನಾಡಿ, ಗೌರಮ್ಮ ಸೋಬಾನೆ, ಮಲೆ ಮಹದೇಶ್ವರ, ಬಿಳಿಗಿರಿರಂಗಸ್ವಾಮಿ, ಮಂಟೇಸ್ವಾಮಿ, ರಾಚಪ್ಪಾಜಿ, ಸಿದ್ದಪ್ಪಾಜಿ ಸೇರಿದಂತೆ ಅನೇಕ ಜಾನಪದ ಗೀತೆಗಳನ್ನು ತಮ್ಮ ಸ್ಮೃತಿಪಟದಲ್ಲಿ ಇಟ್ಟುಕೊಂಡಿರುತ್ತಾರೆ. ಇಲ್ಲಿನ ಪ್ರತಿ ಮನೆಗಳಲ್ಲೂ ಇವರಿಗೆ ವಿಶೇಷ ಸ್ಥಾನವನ್ನು ನೀಡಲಾಗಿದೆ. ಎಲ್ಲರೂ ಇಷ್ಟಪಡುವ ಇವರನ್ನು ಗ್ರಾಮದವರು ಹೆಚ್ಚು ಪ್ರೀತಿಸುತ್ತಾರೆ. ಇಂತಹ ಪ್ರತಿಭೆಗೆ ಸಂದಿರುವ ಪ್ರಶಸ್ತಿ ನಮ್ಮ ಗ್ರಾಮ ಹೆಮ್ಮೆಪಡುವ ವಿಷಯವಾಗಿದೆ ಎಂದರು.

ಗ್ರಾಪಂ ಅಧ್ಯಕ್ಷ ಆರ್. ಪುಟ್ಟಬಸವಯ್ಯ, ಪಪಂ ನಾಮ ನಿರ್ದೇಶಿತ ಸದಸ್ಯ ಲಿಂಗರಾಜಮೂರ್ತಿ, ಕುಮಾರ್, ಕಸಾಪ ಕಾರ್ಯದರ್ಶಿ ಡಿ.ಪಿ. ಮಹೇಶ್, ಕೋಶಾಧ್ಯಕ್ಷ ಫೈರೋಜ್ ಖಾನ್, ವೈ.ಎಂ. ಭಾನುಪ್ರಕಾಶ್, ಮಹದೇವಸ್ವಾಮಿ ಸೇರಿದಂತೆ ಅನೇಕರು ಹಾಜರಿದ್ದರು.

# ಷಟ್ಸ್ಥಲ ಸಿದ್ಧಾಂತಕ್ಕೆ ತಳಹದಿ ಹಾಕಿದ ಚನ್ನಬಸವಣ್ಣ

**ವಿಜಯಪುರ:** ಭಕ್ತಿಗೆ ಬಸವಣ್ಣ ಜ್ಞಾನಕ್ಕೆ ಅಲ್ಲಮಪ್ರಭು ಪ್ರಸಿದ್ಧಿಯಾಗಿರುವಂತೆ ಶೈವಾಚಾರ ನಿರೂಪಣೆಗೆ ಹೆಸರಾದ ಚನ್ನಬಸವಣ್ಣ, ಷಟ್ಸ್ಥಲ ಸಿದ್ಧಾಂತಕ್ಕೆ ಸೂಕ್ತ ತಳಹದಿ ಹಾಕಿ ಸೃಷ್ಟಿಶಾಸ್ತ್ರ ಮತ್ತು ಮನಃಶಾಸ್ತ್ರಗಳನ್ನು ಬಹುವಿಸ್ತಾರವಾಗಿ ವರ್ಣಿಸಿದ್ದಾರೆ. ಅವರ ವಚನಗಳಲ್ಲಿ ಆತ್ಮಪ್ರತ್ಯಯ, ಸ್ಪಷ್ಟೋಕ್ತಿಗಳಿದ್ದು ಪ್ರಶಂಸಾರ್ಹವಾದುವು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಎಚ್.ಎಸ್. ರುದ್ರೇಶಮೂರ್ತಿ ತಿಳಿಸಿದರು.

ಪಟ್ಟಣದ ಜಯಚಾಮರಾಜೇಂದ್ರ ಬಡಾವಣೆಯಲ್ಲಿರುವ ಜೆ.ಸಿ ಉದ್ಯಾನವನದಲ್ಲಿ ಮಾತೃಮಡಿಲು ಸೇವಾ ಸಂಸ್ಥೆ, ವಚನಬಳಗ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಕ್ಷಮ(ಸಮದೃಷ್ಟಿ ಕ್ಷಮತಾವಿಕಾಸ ಅನುಸಂಧಾನ ಮಂಡಳಿ) ವತಿಯಿಂದ ವಿಶೇಷ ಚೇತನರೊಂದಿಗೆ ಹಮ್ಮಿಕೊಂಡಿದ್ದ ಚನ್ನಬಸವಣ್ಣ ಜಯಂತಿ, ಕನ್ನಡ ರಾಜ್ಯೋತ್ಸವ, ದೀಪಾವಳಿ ಸಾಂಪ್ರದಾಯಿಕ ಆಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಚನ್ನಬಸವಣ್ಣನವರ ವಚನಗಳಲ್ಲಿ ಕಾರ್ಯಕಾರಣ ಸಂಬಂಧವಾದ ಶಾಸ್ತ್ರ ವಿಚಾರ ಚರ್ಚೆಯು ಉತ್ತಮವಾಗಿದೆ. ಅವರ ಪ್ರತಿಭೆಯು ಪಾದರಸ ಮತ್ತು ಮಿಂಚಿನಂತೆ. ಕರಣ ಹಸುಗೆ, ಮಿಶ್ರಾರ್ಪಣ, ಮಂತ್ರಗೋಪ್ಯ, ಕಾಲಜ್ಞಾನ ಕೃತಿಗಳಲ್ಲದೇ ಷಟ್ಸ್ಥಲ ವಚನಗಳು, ಇತರೆ ವಚನಗಳು ಅವರು ಕನ್ನಡ ಸಾಹಿತ್ಯಕ್ಕೆ ನೀಡಿರುವ ಅದ್ಭುತ ಕೊಡುಗೆಗಳಾಗಿವೆ ಎಂದರು.

ಧಾರ್ಮಿಕ ಚಿಂತಕ ಬಾಬುರಾಜೇಂದ್ರಪ್ರಸಾದ್ ಅವರು ಉದ್ಘಾಟಿಸಿ ಮಾತನಾಡಿ, ಗಡಿಭಾಗದ ಜಿಲ್ಲೆಗಳಲ್ಲಿ ಕನ್ನಡಭಾಷೆಯು ಮಾಯವಾಗುತ್ತಿದ್ದು, ಎಚ್ಚೆತ್ತುಕೊಳ್ಳದಿದ್ದರೆ ಭಾಷಾ ವಿಷಯದಲ್ಲಿ ಅಪಾರ ತೆರಿಗೆ ಕಟ್ಟಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಅನ್ಯಭಾಷಿಕರಿಗೆ ಕನ್ನಡವನ್ನು ಕಲಿತು ಇಲ್ಲಿನ ನೆಲ, ಜಲವನ್ನು ಸೇವಿಸಿ ಬದುಕಲು ತಿಳಿಹೇಳಬೇಕಿದೆ. ರಾಜ್ಯವನ್ನು ಆಳಿದ ರಾಜಮನೆತನಗಳು ಕಲೆ, ಸಂಸ್ಕೃತಿ, ಸಾಹಿತ್ಯದ ಉಳಿವಿಗೆ ಸಾಕಷ್ಟು ಕೊಡುಗೆ ನೀಡಿವೆ. ಸಾಂಸ್ಕೃತಿಕ ಮತ್ತು ಸಾಮಾಜಿಕ ನೆಲೆಗಟ್ಟಿನಲ್ಲಿ ಕನ್ನಡ ನೆಲವು ಅನೇಕ ಸಿಡಿಲಮರಿಗಳಿಗೆ ಜನ್ಮನೀಡಿದೆ. ಭಾಷಾ ಸಮಸ್ಯೆ, ಗಡಿ ಸಮಸ್ಯೆ, ಮಾಧ್ಯಮ ಸಮಸ್ಯೆಗಳು ಅಖಂಡ ಕರ್ನಾಟಕದ ಭಾವನೆಗೆ ಧಕ್ಕೆ ತರುತ್ತಿವೆ ಎಂದರು.

ಶಿಡ್ಲಘಟ್ಟ ತಾಲ್ಲೂಕು ಅಕ್ಷರದಾಸೋಹ ಸಹಾಯಕ ನಿರ್ದೇಶಕ ಆಂಜನೇಯ ಅವರು ಕನ್ನಡ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ರಾಜ್ಯದ ಪ್ರತಿ ಕನ್ನಡಿಗರಲ್ಲಿ ಭಾಷಾ ಸ್ವಾಭಿಮಾನ ಹುಟ್ಟುಹಾಕಬೇಕಿದೆ. ಕನ್ನಡದ ಸ್ಥಿತಿಗತಿಯನ್ನು ಅರಿತು ಅವನತಿಯತ್ತ ಸಾಗುತ್ತಿರುವ ಭಾಷೆಯನ್ನು ಉಳಿಸಿಕೊಳ್ಳುವ ಜವಾಬ್ದಾರಿಯು ಪ್ರತಿಯೊಬ್ಬ ಕನ್ನಡಿಗರ ಮೇಲಿದೆ ಎಂದರು.

ಗ್ರಾಮಾಂತರ ಟ್ರಸ್ಟ್‌ನ ಉಷಾಶೆಟ್ಟಿ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ, ನ್ಯಾಯಾಲಯ ನೌಕರ ಶ್ರೀನಿವಾಸ್, ಜಿಲ್ಲಾ ಸಕ್ಷಮ ಕಾರ್ಯದರ್ಶಿ ಬಿ.ಎಂ. ಜಗದೀಶ್‌ಕುಮಾರ್ ಮಾತನಾಡಿದರು. ಕಾರವಾರ ಜಿಲ್ಲೆಯ ಯಲ್ಲಾಪುರದ ಅಂಗವಿಕಲ ಮಗುವಿಗೆ ವೀಲ್‌ಚೇರ್ ಮತ್ತು ಅಗತ್ಯ ಪರಿಕರಗಳನ್ನು ವಿತರಿಸಲಾಯಿತು. ಶಾಲಾಮಕ್ಕಳಿಗೆ ಉಚಿತ ಲೇಖನಸಾಮಗ್ರಿಗಳನ್ನು ವಿತರಿಸಲಾಯಿತು. ವಿಶೇಷಚೇತನ ವಿದ್ಯಾರ್ಥಿ ಧನುಷ್ ಮತ್ತು ಸಂಗಡಿಗರಿಂದ ಏಕಪಾತ್ರಾಭಿನಯ, ನೃತ್ಯ ಮತ್ತಿತರ ಮನರಂಜನಾ ಕಾರ್ಯಕ್ರಮಗಳು ಜರುಗಿದವು. ಬೆಂಗಳೂರಿನ ಹೆಸರಾಂತ ಕಲಾವಿದ ಮೂರ್ತಿ ಅವರಿಂದ ಜಂಬೆ ವಾದ್ಯವಾದನ ಎಲ್ಲರ ಆಕರ್ಷಣೆಯಾಗಿತ್ತು. ಪುರಸಭಾ ಮಾಜಿಸದಸ್ಯ ಎಸ್.ಭಾಸ್ಕರ್, ಮಾತೃಮಡಿಲು ಸಂಸ್ಥೆಯ ಎಸ್.ಶಂಕರ್, ವಂದನಾಜಗದೀಶ್, ಮದನ್, ರವಿ, ಹಾರೋಹಳ್ಳಿ ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷ ಚಂದ್ರಪ್ಪ, ಶಶಿಕುಮಾರ್, ಶಿಕ್ಷಕ ವಿಜಯಕುಮಾರ್, ಗಾಯಕಿ ಭಾನು, ಪತಂಜಲಿ ಯೋಗಶಿಕ್ಷಣ ಸಮಿತಿಯ ದೀಪಾರಮೇಶ್ ಇತರರು ಇದ್ದರು.



# ಆಧುನಿಕ ತಲ್ಲಣಗಳಿಗೆ ಸಾಂತ್ವನ ನೀಡುವ ಸಾಹಿತ್ಯ ಕನ್ನಡದಲ್ಲಿದೆ

**ವಿಜಯಪುರ:** ಕನ್ನಡದ ಎಲ್ಲಾ ಸಾಹಿತ್ಯ ಪ್ರಕಾರಗಳಲ್ಲಿ ಸಂದರ್ಭ, ಸಮಸ್ಯೆಗೆ ಅನುಗುಣವಾಗಿ ಎಲ್ಲಾ ಆಧುನಿಕ ತಲ್ಲಣಗಳಿಗೆ ಸಾಂತ್ವನ ನೀಡುವ ಸದಭಿರುಚಿ ಸಾಹಿತ್ಯ ಕನ್ನಡದಲ್ಲಿದೆ, ಎಂದು ಶರಣ ಸಾಹಿತ್ಯ ಪರಿಷತ್ತಿನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಚಂದ್ರಶೇಖರ್ ಹಡಪದ ತಿಳಿಸಿದರು.

ಅವರು ಇಲ್ಲಿನ ಗಂಗಾತಾಯಿ ದೇವಾಲಯದ ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಬರಹಗಾರರ ಬಳಗ, ಜೆಸಿಐ ಸಂಸ್ಥೆ, ಕನ್ನಡ ಸಾಹಿತ್ಯ ಪರಿಷತ್ ರವರುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟೌನ್ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಜೆಎನ್ ಶ್ರೀನಿವಾಸ್ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಅಖಿಲ ಕರ್ನಾಟಕ ಮಿತ್ರ ಸಂಘದ ಅಧ್ಯಕ್ಷರಾದ ಚಿ.ಮಾ ಸುಧಾಕರ್, ಜೆ ಸಿ ಐ ಅಧ್ಯಕ್ಷರಾದ ಬೈರೇಗೌಡ, ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕ ಎಂ ಶಿವಕುಮಾರ್, ಕೃಷಿ ತಜ್ಞರಾದ ಸಂತೆ ನಾರಾಯಣಸ್ವಾಮಿ, ದೇವನಹಳ್ಳಿ ತಾಲೂಕು ಶರಣ ಸಾಹಿತ್ಯ ,ಪರಿಷತ್ತಿನ ಅಧ್ಯಕ್ಷರಾದ ಮ. ಸುರೇಶ್ ಬಾಬು, ಜೆಆರ್ ಮುನಿ ವೀರಣ್ಣ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಬರಹಗಾರರ ಬಳಗದ ಇಂದಿರಾ ಶರಣ ಜಮ್ಮಲದಿನ್ನಿ, ಅನಿತಾ ನಾಡಿಗೋ ರವರುಗಳು ಕವಿಗೋಷ್ಠಿಯಲ್ಲಿ ಭಾಗವಹಿಸಿ ಸ್ವರಚಿತ ಕವನಗಳನ್ನು ವಾಚಿಸಿದರು.

ಶರಣ ಸಾಹಿತ್ಯ ಪರಿಷತ್ತಿನ ತಾಲೂಕು ಕಾರ್ಯದರ್ಶಿ ಚಿದಾನಂದ ಬಿರಾದಾರ್. ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಘಟಕದ ವೆಂಕಟೇಶ್, ಕಾರ್ಯದರ್ಶಿ ಚಿದಾನಂದಮೂರ್ತಿ, ಕರ್ನಾಟಕ ಮಿತ್ರ ಸಂಘದ ಕಾರ್ಯದರ್ಶಿ ಆರ್ ಮುನಿರಾಜು, ಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.

ಸಂಗೀತ ನಿರ್ದೇಶಕರಾದ ಎಂ ವಿ ನಾಯ್ಡು ಮತ್ತು ಸಂಗಡಿಗರಿಂದ ಕನ್ನಡ ಭಾವಗೀತೆಗಳ ಕಾರ್ಯಕ್ರಮ ಏರ್ಪಡಿಸಲಾಗಿತ್ತು.



# ಆಚಾರ್ಯರಿಗೆ ಭೀಮರಥ ಶಾಂತಿ ಗೌರವ ಸಮರ್ಪಣೆ

**ಮೈಸೂರು:** ಮೈಸೂರಿನ ಶಾರದಾದೇವಿನಗರದ ರಾಯರ ಆರಾಧಕ ಹಾಗೂ ಆಚಾರ್ಯರಾದ ಶ್ರೀನಿವಾಸ ಮೂರ್ತಿ ಹಾಗೂ ಶ್ರೀಮತಿ ಅನುರಾಧ ಶ್ರೀನಿವಾಸ ಮೂರ್ತಿಯವರನ್ನು ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರದಲ್ಲಿ ಸಾಧನೆಗೈದು ಸೇವೆ ಸಲ್ಲಿಸಿ, 70 ವರ್ಷಗಳು ಪೂರೈಸಿದ ಹಿನ್ನೆಲೆಯಲ್ಲಿ ಭೀಮರಥ ಶಾಂತಿಯನ್ನು ಅವರ ಅಭಿಮಾನಿಗಳು ಇಂದು ತೊಣಚಿಕೊಪ್ಪಲಿನ ರಾಯರ ಮಠದಲ್ಲಿ ಏರ್ಪಡಿಸಿ, ಸನ್ಮಾನಿಸಿ, ಗೌರವಿಸಿದರು. ಸ್ನೇಹ ಬಳಗದ ಗೌರವ ಅಧ್ಯಕ್ಷರಾದ ನಿವೃತ್ತ ಮುಖ್ಯ ಶಿಕ್ಷಕ ಡಿ.ಎಸ್.ವೆಂಕಟೇಶಮೂರ್ತಿ, ಪದ್ಮಾ ವೆಂಕಟೇಶ್, ಯಲಹಂಕ ಸತ್ಯನಾರಾಯಣರಾವ್, ಎನ್. ಕೃಷ್ಣಮೂರ್ತಿ, ಸುಖನ್ಯ, ಬಿಂದು ಎಸ್.ಮೂರ್ತಿ, ವಿಭಾ ಎಸ್.ಮೂರ್ತಿ, ನಾಗವೇಣಿ ಭಾಗನೂರು, ಉಷಾರಾಣಿ, ಭಾಗ್ಯಮ್ಮ, ಮಂಡ್ಯ ಗುಂಡುರಾವ್, ಬೇಬಿ, ಶ್ರೀಹರಿ, ಸರ್ವೋತ್ತಮ್ ಉಪಸ್ಥಿತರಿದ್ದರು.



# ಈಶ್ವರಿ ಸೋಷಿಯಲ್ ಟ್ರಸ್ಟ್‌ನಿಂದ ಗೌರವ

**ಚಾಮರಾಜನಗರ:** ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಹಾಗೂ ಚಾಮರಾಜನಗರ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕರರಾದ ಜೆ.ಮೂರ್ತಿ ಮುಡಿಗುಂಡ ಅವರಿಗೆ ಈಶ್ವರಿ ಸೋಷಿಯಲ್ ಟ್ರಸ್ಟ್ ವತಿಯಿಂದ ಗೌರವ ಸಮರ್ಪಣೆಯನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಮಂಜುನಾಥ ಪ್ರಸನ್ನ ನೆರವೇರಿಸಿದರು.

ನಗರದ ಸಂಪಿಗೆ ರಸ್ತೆಯಲ್ಲಿ ಇರುವ ಈಶ್ವರಿ ಸೋಷಿಯಲ್ ಟ್ರಸ್ಟ್ ಕಛೇರಿಯಲ್ಲಿ ಸೋಮವಾರ ಸಂಜೆ ನಡೆದ ಗೌರವ ಸಮರ್ಪಣೆ ಕಾರ್ಯಕ್ರಮದಲ್ಲಿ ಗೌರವಿಸಿ ಮಾತನಾಡಿದ ಅವರು ಜೆ.ಮೂರ್ತಿ ಮುಡಿಗುಂಡ ಚಿತ್ರಕಲೆಗಾರರು,, ಗಾಯಕರು, ಸಾಂಸ್ಕೃತಿಕ ಕಾರ್ಯಕ್ರಮಗಳ ಸಂಘಟಕರು ಆಗಿದ್ದಾರೆ. ಇವರು ಮಕ್ಕಳಿಗಾಗಿ ಅನೇಕ ಚಿತ್ರಕಲಾ ಶಿಬಿರಗಳನ್ನು ಆಯೋಜನೆ ಮಾಡಿದ್ದಾರೆ. ಅದರ ಜೊತೆಗೆ ಪರಿಸರ ಸಂರಕ್ಷಣೆ ಮಾಡುವುದರಲ್ಲು ಮುಂದಾಗಿದ್ದಾರೆ ಎಂದು ಹೇಳಿದರು. ಇವರಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಹಾಗೂ ಚಾಮರಾಜನಗರ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ದೊರೆತಿರುವುದು ಸಂತೋಷದ ವಿಷಯ, ಮುಂದೆ ಇವರಿಗೆ ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಗೌರವಿಸುವಂತಾಗಲಿ ಎಂದು ಹಾರೈಸಿದರು.



ಈಶ್ವರಿ ಸೋಷಿಯಲ್ ಟ್ರಸ್ಟ್ ಸಂಸ್ಥಾಪಕರಾದ ಸಿ.ಎಂ.ವೆಂಕಟೇಶ್ ಮಾತನಾಡಿ ಚಾಮರಾಜನಗರ ಜಿಲ್ಲೆಯು ಜಾನಪದ ಕಲೆಗಳ ತವರೂರು ಆಗಿದ್ದು ಇಲ್ಲಿ ಅನೇಕ ಪ್ರತಿಭಾವಂತ ಹಿರಿಯ ಗಾಯಕರು, ರಂಗಭೂಮಿ ಕಲಾವಿದರು, ಸಂಗೀತಗಾರರು, ಹಿರಿಯ ಚಿತ್ರನಟರು, ಕಿರುತೆರೆ ಕಲಾವಿದರು, ರಾಷ್ಟ್ರಮಟ್ಟದಲ್ಲಿ ಖ್ಯಾತಿ ಪಡೆದ ಸಂಕಲನಕಾರರು, ಚರ್ಮವಾದಕರು ಇದ್ದಾರೆ. ಅವರಿಗೆ ಸಲ್ಲಬೇಕಾದ ಪ್ರಶಸ್ತಿ ಗೌರವಗಳು ಸಂದಿಲ್ಲ ಹಾಗಾಗಿ ಅವರನ್ನು ಗುರುತಿಸಿ ಸೂಕ್ತವಾದ ಪ್ರಶಸ್ತಿ ಪುರಸ್ಕಾರಗಳನ್ನು ಮುಂದಿನ ದಿನಗಳಲ್ಲಿ ನೀಡಬೇಕಾಗಿ ಸರ್ಕಾರಕ್ಕೆ ಮನವಿ ಮಾಡಿದರು

ಈ ಸಂದರ್ಭದಲ್ಲಿ ಈಶ್ವರಿ ಸೋಷಿಯಲ್ ಟ್ರಸ್ಟ್‌ನ ಪದಾದಿಕಾರಿಗಳಾದ ಜಯಲಕ್ಷ್ಮಿ, ರಾಜೇಶ್, ಮಹೇಂದ್ರ, ದೀಪಿಕಾ, ಸಿ.ಎಂ. ಬಂಗಾರು ಇದ್ದರು.

# ಅನುದಾನವನ್ನು ಪಾರದರ್ಶಕವಾಗಿಯಾವುದೇ ಲೋಪವಾಗದಂತೆ ವೆಚ್ಚಮಾಡಿ: ಡಾಕುಮಾರ

**ಮಂಡ್ಯ:** ಜಿಲ್ಲೆಯಲ್ಲಿಡಿಸೆಂಬರ್ 20, 21, 22 ರಂದುಒಟ್ಟು 3 ದಿನಗಳ ಕಾಲ ನಡೆಯಲಿರುವ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನದ ವಿವಿಧ ಸಮಿತಿಗಳಿಗೆ ಬಿಡುಗಡೆಯಾಗುವ ಅನುದಾನವನ್ನು ಯಾವುದೇ ಲೋಪವಾಗದಂತೆ ಪಾರದರ್ಶಕವಾಗಿ ವೆಚ್ಚ ಮಾಡಬೇಕುಎಂದುಜಿಲ್ಲಾಧಿಕಾರಿಡಾಕುಮಾರಅವರು ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರುಗಳಿಗೆ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ 87 ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನ ಕುರಿತುಸಭೆ ನಡೆಸಿ ಮಾತನಾಡಿದರು.

ಸಮಿತಿಗಳ ಸಂಚಾಲಕರು ಹಾಗೂ ಸದಸ್ಯ ಕಾರ್ಯದರ್ಶಿಗಳು ತಮ್ಮ ಸಮಿತಿಗೆ ಬಿಡುಗಡೆಯಾಗುವಅನುದಾನಕ್ಕೆಕ್ರಿಯಾಯೋಜನೆ ಸಿದ್ಧಪಡಿಸಿ ಸಮಿತಿಯಲ್ಲಿ ಮಂಡಿಸಿ ಸಾಹಿತ್ಯ ಸಮ್ಮೇಳನದ ವಿಶೇಷಾ ಧಿಕಾರಿಗಳ ಕಚೇರಿಗೆ ಸಲ್ಲಿಸಬೇಕುಎಂದರು.

ಕ್ರಿಯಾಯೋಜನೆಐಟಂವಾರು ವಿಸ್ತೃತವಾಗಿರಬೇಕು. ಕ್ರಿಯಾಯೋಜನೆಗೆ ಸಂಬಂಧಿಸಿದಂತೆ ಕಾರ್ಯಕಾರಿ ಸಮಿತಿಯಲ್ಲಿ ಪರಿಶೀಲಿಸಿ ಅನುಮೋದನೆ ನೀಡಿದ ನಂತರ ಕೆಲಸಗಳನ್ನು ಪ್ರಾರಂಭಿಸಬೇಕು. ಸಮಿತಿಯಿಂದ ಭರಿಸಲ್ಪಡುವ ವೆಚ್ಚಕ್ಕೆ ಸಂಬಂಧಿಸಿದ ದಾಖಲೆಗಳನ್ನು ಧೃಡೀಕರಣ ಪಡಿಸಿ ಹಣಕಾಸು ಸಮಿತಿಗೆ ಸಲ್ಲಿಸಬೇಕುಎಂದರು

ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನವು ಮಂಡ್ಯಜಿಲ್ಲೆಯಲ್ಲಿ ನಡೆಯುತ್ತಿರುವುದುಗೌರವತಂದು ಕೊಡುವ ವಿಷಾ 'ಯವಾಗಿದೆ.ಸಮ್ಮೇಳನವನ್ನು ಅತ್ಯಂತ ಯಶಸ್ವಿಗೊಳಿಸುವ ನಿಟ್ಟಿನಲ್ಲಿಪ್ರತಿಯೊಬ್ಬರೂಕಾರ್ಯ ನಿರ್ವಹಿಸಿ.ಜಿಲ್ಲೆಯಎಲ್ಲಾ ಸಾರ್ವಜನಿಕರ, ಸಂಘ ಸಂಸ್ಥೆಗಳ ವಿಶ್ವಾಸ ಪಡೆದು ಸಭೆ ನಡೆಸಿ ಎಂದರು.



ಸಮ್ಮೇಳನಕ್ಕೆ ಸಂಬಂಧಿಸಿದಂತೆ ಈಗಾಗಲೇ 28 ಸಮಿತಿಗಳು ರಚನೆಯಾಗಿದ್ದು, ಪ್ರತಿ ಸಮಿತಿಗೆ ಸರ್ಕಾರಿ ಅಧಿಕಾರಿಗಳನ್ನು ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರುಗಳನ್ನಾಗಿ ನೇಮಕ ಮಾಡಲಾಗಿದೆಎಂದರು.

ಸಮ್ಮೇಳನವು ನಮ್ಮ ಸಂಸ್ಕೃತಿಯನ್ನು ಬಿಂಬಿಸುವ ಹಬ್ಬವಾಗಿದೆ.ಕಾರ್ಯಕ್ರಮದಲ್ಲಿಯಾವುದೇ ಸಣ್ಣಪುಟ್ಟ ತೊಂದರೆಗಳು ಬಾರದಂತೆ ಸರಿದೂಗಿಸಿಕೊಂಡು ಎಲ್ಲರ ಸಹಕಾರದಿಂದ ಸಮ್ಮೇಳನದ ಕೀರ್ತಿಎಲ್ಲೆಡೆ ಪಸರಿಸಬೇಕುಎಂದರು.

ಸಭೆಯಲ್ಲಿಜಿಲ್ಲಾ ಪೊಲೀಸ್ ವರಿಷಾ ್ಠಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರಜಿಲ್ಲಾಧಿಕಾರಿಡಾ ಹೆಚ್‌ಎಲ್ ನಾಗರಾಜು, ಹೆಚ್ಚುವರಿ ಪೊಲೀಸ್ಅಧೀಕ್ಷಕತಿಮ್ಮಯ್ಯ, ಉಪ ವಿಭಾಗಾಧಿಕಾರಿ ಶಿವಮೂರ್ತಿ, ಕಸಾಪ ಸಮ್ಮೇಳನದ ಸಂಚಾಲಕಿ ಡಾ ಮೀರಾ ಶಿವಲಿಂಗಯ್ಯ ಸೇರಿದಂತೆಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯಮಟ್ಟದ ಕಲಾಶ್ರೀ ಪ್ರಶಸ್ತಿಗಾಗಿ ಸ್ಥಳೀಯಮಟ್ಟದ ಆಯ್ಕೆ ಶಿಬಿರ

**ಬೆಂಗಳೂರು:** ಬೆಂಗಳೂರಿನ ಬಾಲ ಭವನ ಸೊಸೈಟಿಯು ಮಕ್ಕಳಿಗಾಗಿ ವಿವಿಧ ಚಟುವಟಿಕೆಗಳನ್ನು ನಡೆಸುತ್ತಿದ್ದು, ಮಕ್ಕಳ ದಿನಾಚರಣೆ -2024 ರ ಅಂಗವಾಗಿ ಬೆಂಗಳೂರು ನಗರ ಜಿಲ್ಲೆಯ 9 ರಿಂದ 16 ವರ್ಷದೊಳಗಿನ ಮಕ್ಕಳಿಗೆ ನವೆಂಬರ್ 7 ರಂದು ಬೆಳಿಗ್ಗೆ 11 ಗಂಟೆಗೆ ರಾಜ್ಯ ಮಟ್ಟದ ಕಲಾಶ್ರೀ ಪ್ರಶಸ್ತಿಗಾಗಿ ಆಯ್ಕೆ ಶಿಬಿರವನ್ನು ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಸೃಜನಾತ್ಮಕ ಕಲೆ, ಸೃಜನಾತ್ಮಕ ಬರವಣಿಗೆ, ಸೃಜನಾತ್ಮಕ ಪ್ರದರ್ಶನ ಕಲೆ ವಿಜ್ಞಾನದಲ್ಲಿ ನೂತನ ಆವಿಷ್ಕಾರ, ಈ ಪ್ರಕಾರಗಳಲ್ಲಿ ಏರ್ಪಡಿಸಲಾಗಿದೆ.

ಸೃಜನಾತ್ಮಕ ಪ್ರದರ್ಶನ ಕಲೆ - ಶಾಸ್ತ್ರೀಯ ನೃತ್ಯ ಜಾನಪದ ನೃತ್ಯ, ಕರ್ನಾಟಕ ಅಥವಾ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ, ಸುಗಮ ಸಂಗೀತ, ಯಕ್ಷಗಾನ, ಯಕ್ಷಿಣಿ ಪ್ರದರ್ಶನ, ಏಕಪಾತ್ರಾಭಿನಯ, ಯೋಗದೊಂದಿಗೆ ನೃತ್ಯ ಇತ್ಯಾದಿ ಯಾವುದಾದರೊಂದು ಕಲೆಯನ್ನು ಮಾತ್ರ ಪ್ರದರ್ಶಿಸಲು ಅವಕಾಶವಿರುತ್ತದೆ.

ಸೃಜನಾತ್ಮಕ ಕಲೆ - ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ ಈ ಮೂರರಲ್ಲೂ ಕಡ್ಡಾಯವಾಗಿ ಭಾಗವಹಿಸಬೇಕು. ಹಾಳೆ ಮತ್ತು ಜೇಡಿಮಣ್ಣು ನೀಡಲಾಗುವುದು, ಕರಕುಶಲ ಸಾಮಗ್ರಿಗಳನ್ನು ತಂದು ಸ್ಥಳದಲ್ಲೇ ತಯಾರಿಸಬೇಕು.

ಸೃಜನಾತ್ಮಕ ಬರವಣಿಗೆ - ಕಥೆ, ಕವನ, ಪ್ರಬಂಧ ಬರೆಯುವುದು ಈ ಮೂರರಲ್ಲೂ ಕಡ್ಡಾಯವಾಗಿ ಭಾಗವಹಿಸಬೇಕು

ವಿಜ್ಞಾನದಲ್ಲಿ ನೂತನ ಅವಿಷಾ ್ಕರ - ವಿಜ್ಞಾನಕ್ಕೆ ಸಂಬಂಧಪಟ್ಟಂತೆ ಒಂದು ವಿ?ಯದ ಬಗ್ಗೆ, ಮಾದರಿ ಪ್ರದರ್ಶನ ಹಾಗೂ ವಿವರಣೆ ಮತ್ತು ವಿಜ್ಞಾನ ಕ್ಷೇತ್ರಕ್ಕೆ ಸಂಬಂಧಿಸಿದಂತೆ ತೀರ್ಪುಗಾರರ ಇನ್ನಿತರ ಪ್ರಶ್ನೆಗಳಿಗೆ ಉತ್ತರ ನೀಡುವುದು.

ಈ ಪ್ರಕಾರಗಳಲ್ಲಿ ಪ್ರಾವೀಣ್ಯತೆ ಹೊಂದಿರುವ 09-16 ವ?ದ ಮಕ್ಕಳು ಸ್ಥಳೀಯ ಮಟ್ಟದ ಆಯ್ಕೆಯಲ್ಲಿ ಪಾಲ್ಗೊಂಡು, ಆಯ್ಕೆಯಾದಲ್ಲಿ ನವಂಬರ್-2024ರ ಮಾಹೆಯಲ್ಲಿ ಹಮ್ಮಿಕೊಂಡಿರುವ ರಾಜ್ಯ ಮಟ್ಟದ ಕಲಾಶ್ರೀ ಶಿಬಿರದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗುವುದು.

ಹೆಚ್ಚಿನ ವಿವರಗಳಿಗೆ ಹಾಗೂ ನೊಂದಣಿಗಾಗಿ ಕಾರ್ಯದರ್ಶಿಗಳ ಕಛೇರಿ, ಬಾಲ ಭವನ ಸೊಸೈಟಿ, ಬೆಂಗಳೂರು-560001, ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: 080-22864189 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಬಾಲ ಭವನ ಸೊಸೈಟಿಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆಯಾದವರ ಪತ್ತೆಗಾಗಿ ಮನವಿ

**ಮಂಡ್ಯ:** ಮಂಡ್ಯತಾಲ್ಲೂಕು ಹೊನಗಾನಹಳ್ಳಿ ಮಠಗ್ರಾಮದ ಕೃಪಾ ಹೆಚ್.ವಿ (18) ಎಂಬುವವರು ಕಾಣೆಯಾಗಿದ್ದರೆಎಂದು ಮಂಡ್ಯಗ್ರಾಮಾಂತರ ಪೊಲೀಸ್‌ಠಾಣೆಯಲ್ಲಿದೂರುದಾಖಲಾಗಿರುತ್ತದೆ. ಕಾಣೆಯಾದ ಮಹಿಳೆಯು 4 ಅಡಿ ಎತ್ತರ, ಕೋಲುಮುಖ, ಕಪ್ಪುಗುಂಗುರುಕೂದಲು, ಎಣ್ಣೆಗೆಂಪು ಮೈ ಬಣ್ಣ ಹೊಂದಿದ್ದು, ಕಾಣೆಯಾದ ದಿನ ಪಾಚಿ ಬಣ್ಣದಚೂಡಿದಾರ್‌ಟಾಪ್, ನೀಲಿ ಬಣ್ಣದ ಲೆಗ್ಗಿನ್ಸ್ ಪ್ಯಾಂಟ್, ಹಲವು ಬಣ್ಣಗಳಿಂದ ಕೂಡಿದ ಶಾಲು ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ. ಸಂ: 08232-224200/ 9480804800 ನ್ನು ಸಂಪರ್ಕಿಸಬಹುದುಎಂದು ಮಂಡ್ಯಗ್ರಾಮಾಂತರ ಪೊಲೀಸ್‌ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್‌ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ

**ಚಿಕ್ಕಬಳ್ಳಾಪುರ:** ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ?2024ರ ಅಂಗವಾಗಿ ರಾಜ್ಯ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಸಿರಿಧಾನ್ಯ ಪಾಕ ಸ್ಪರ್ಧೆಯನ್ನು ಕೃಷಿ ಇಲಾಖೆಯಿಂದ ಏರ್ಪಡಿಸಲಾಗಿದೆ.

ಈ ಸ್ಪರ್ಧೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು,ಸಿಬ್ಬಂದಿ ಮತ್ತು ವಿದ್ಯಾರ್ಥಿಗಳನ್ನು ಹೊರತು ಪಡಿಸಿ, ಜಿಲ್ಲೆಯ ಎಲ್ಲಾ ಸಾರ್ವಜನಿಕರೂ ಭಾಗವಹಿಸಲು ಅವಕಾಶವಿರುತ್ತದೆ. ಅಭ್ಯರ್ಥಿಗಳು ತಮ್ಮ ಭಾವಚಿತ್ರದೊಂದಿಗೆ ಹೆಸರು, ವಿಳಾಸ ಮತ್ತು ತಯಾರಿಸುವ ಖಾದ್ಯ, ಬೇಕಾಗುವ ಸಾಮಗ್ರಿಗಳು, ತಯಾರಿಸಲು ಬೇಕಾದ ಸಮಯ ಹಾಗೂ ತಯಾರಿಸುವ ವಿಧಾನದ ಸಂಕ್ಷಿಪ್ತ ಮಾಹಿತಿಯೊಂದಿಗೆ ಅರ್ಜಿಯನ್ನು 2024ರ ನವೆಂಬರ್ 14 ರೊಳಗೆ ಇ-ಮೇಲ್ ವಿಳಾಸ: jdacbp@yahoo.com/ jdacbp@gmail.com ಅಥವಾ ಖುದ್ದಾಗಿ ಅಥವಾ ಪೋಸ್ಟ್ ಮುಖಾಂತರ ಜಂಟಿ ಕೃಷಿ ನಿರ್ದೇಶಕರು, ಜಂಟಿ ಕೃಷಿ ನಿರ್ದೇಶಕರ ಕಚೇರಿ, ಕೆ.ಎಸ್.ಎಸ್.ಸಿ ಕಚೇರಿ ಆವರಣ, ಬಿ.ಬಿ ರಸ್ತೆ, ಚಿಕ್ಕಬಳ್ಳಾಪುರ 562101 ವಿಳಾಸಕ್ಕೆ ಕಳುಹಿಸಲು ತಿಳಿಸಲಾಗಿದೆ.

**ಪಾಲಿಸಬೇಕಾದ ಸೂಚನೆಗಳು:** ಪ್ರತಿ ಸ್ಪರ್ಧೆಗೆ ಒಂದೇ ತಿನಿಸು (ಅಡುಗೆ) ಸಿಹಿ, ಖಾರ ಮತ್ತು ಅಳಿವಿನಂಚಿನ ಖಾದ್ಯಗಳ ತಿನಿಸು ಮಾಡಲು ಅವಕಾಶವಿರುತ್ತದೆ. 2023-24ನೇ (ಹಿಂದಿನ) ಸಾಲಿನಲ್ಲಿ ಸಿರಿಧಾನ್ಯ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯ ಮಟ್ಟದಲ್ಲಿ ಮೊದಲನೇ, ದ್ವಿತೀಯ ಮತ್ತು ತೃತೀಯ ಬಹುಮಾನ ಪಡೆದ ಸ್ಪರ್ಧಿಗಳಿಗೆ ಪ್ರಸ್ತುತ ವರ್ಷದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಮನೆಯಲ್ಲಿಯೇ ತಯಾರಿಸಿದ ಸಿರಿಧಾನ್ಯ,ಅಳಿವಿನಂಚಿನ ಖಾದ್ಯಗಳ ತಿನಿಸು (ಅಡುಗೆ) ಪ್ರದರ್ಶಿಸಲು ಅವಕಾಶವಿರುತ್ತದೆ. ತೀರ್ಪುದಾರರ ನಿರ್ಧಾರವೇ ಅಂತಿಮವಾಗಿರುತ್ತದೆ.

ತಯಾರಿಸಿದ ತಿನಿಸುಗಳ ಪ್ರದರ್ಶನ, ತಯಾರಿಕೆಗೆ ಬಳಸಿದ ಪದಾರ್ಥಗಳು , ತೋರಿಕೆ, ರುಚಿ (ಖಿಚಿಣಜ), ಸುವಾಸನೆಗಳ ಮೇಲೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮ ಒಂದು ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಅಳಿವಿನಂಚಿನ (ಮರೆತು ಹೋದ) ಖಾದ್ಯದ ತಿನಿಸನ್ನು ಆಯ್ಕೆ ಮಾಡುವುದು. ಜಿಲ್ಲಾ ಮಟ್ಟಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಅಳಿವಿನಂಚಿನ (ಮರೆತು ಹೋದ) ಖಾದ್ಯಗಳ ತಿನಿಸಿಗೆ ತಲಾ ರೂ. 5000/-, 3000/- ಹಾಗೂ 2000/- ಗಳ ಬಹುಮಾನವನ್ನು ನೀಡಲಾಗುವುದು. ತಮ್ಮ ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು, ಮನೆಯಲ್ಲಿಯೇ ತಯಾರಿಸಿ, ನವೆಂಬರ್ 20 ರಂದು 11:00 ಗಂಟೆಗೆ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಕಾಗತಿ, ಚಿಂತಾಮಣಿ ಕಚೇರಿಯಲ್ಲಿ ಪ್ರದರ್ಶಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಾದ ಜಾವೀದಾ ನಸೀಮಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನಕ ಗೌರವ ಮತ್ತು ಕನಕ ಯುವ ಪುರಸ್ಕಾರಕ್ಕೆ ಆಯ್ಕೆ

**ಬೆಂಗಳೂರು:** ಸಂತಕವಿ ಕನಕದಾಸ ಮತ್ತು ತತ್ವಪದ ಅಧ್ಯಯನ ಕೇಂದ್ರದಿಂದ ವಾರ್ಷಿಕವಾಗಿ ಕೊಡಮಾಡುವ ಕನಕ ಗೌರವ ಮತ್ತು ಕನಕ ಯುವ ಪುರಸ್ಕಾರಕ್ಕೆ ನಾಲ್ಕು ವರ್ಷಗಳ ಅವಧಿಗೆ ಪರಿಣಿತರ ಆಯ್ಕೆ ಸಮಿತಿಯು ಆಯ್ಕೆ ಮಾಡಿದೆ. 2021-22 ನೇ ಸಾಲಿನ ಕನಕಗೌರವ ಪುರಸ್ಕಾರಕ್ಕೆ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಪ್ರೊ. ತಾಳ್ತಜೆ ವಸಂತಕುಮಾರ್, 2022-23 ನೇ ಸಾಲಿಗೆ ಹಾವೇರಿಯ ಡಾ.ನೀಲಪ್ಪ ಮೈಲಾರಪ್ಪ ಅಂಬಲಿಯವರ, 2023-24 ನೇ ಸಾಲಿಗೆ ಬೆಂಗಳೂರಿನ ಡಾ.ಎಚ್.ಎನ್. ಮುರಳೀಧರ, 2024-25 ನೇ ಸಾಲಿಗೆ ತುಮಕೂರಿನ ಡಾ. ಜಿ.ವಿ. ಆನಂದಮೂರ್ತಿ ಅವರನ್ನು ಆಯ್ಕೆ ಮಾಡಲಾಗಿದೆ. 2021-22 ನೇ ಸಾಲಿನ ಕನಕ ಯುವ ಪುರಸ್ಕಾರಕ್ಕೆ ಮೈಸೂರಿನ ಡಾ.ಅನಿಲ್‌ಕುಮಾರ್, 2022-23 ನೇ ಸಾಲಿಗೆ ಚಿಕ್ಕಮಗಳೂರಿನ ಡಾ.ಚಿಕ್ಕಮಗಳೂರು ಗಣೇಶ್, 2023-24 ನೇ ಸಾಲಿಗೆ ವಿಜಯನಗರ ಜಿಲ್ಲೆಯ ಡಾ.ಉಮೇಶ .ಎಂ (ಉಬಾಮ), 2024-25 ನೇ ಸಾಲಿಗೆ ಅರ್ಹ ಯುವ ಪುರಸ್ಕೃತರು ಅಲಭ್ಯವಾಗಿರುವುದರಿಂದ ಆಯ್ಕೆ ಮಾಡಿರುವುದಿಲ್ಲ. ಕನಕ ಗೌರವ ಪುರಸ್ಕಾರವನ್ನು 50 ವರ್?ಕ್ಕೂ ಮೇಲ್ಪಟ್ಟ ಹಿರಿಯ ವಿದ್ವಾಂಸರಿಗೆ ಕನಕ ಗೌರವ ಪುರಸ್ಕಾರವನ್ನು ನೀಡಲಾಗುತ್ತದೆ. ಈ ಪುರಸ್ಕಾರದ ಮೊತ್ತ ರೂ.75,000/-ಗಳು. ಇದರೊಂದಿಗೆ ಪ್ರಶಸ್ತಿ ಪುತ್ಥಳಿ, ಪ್ರಶಸ್ತಿ ಫಲಕ, ಶಾಲು, ಫಲತಾಂಬೂಲವನ್ನು ನೀಡಲಾಗುತ್ತದೆ. ಈಗಾಗಲೇ ಕನಕದಾಸರ ಬಗ್ಗೆ ಆಳವಾದ ಅಧ್ಯಯನ ಮಾಡಿ ಪ್ರಕಟಣೆಗಳನ್ನು ಹೊರತಂದಿರುವ ಹಿರಿಯ ವಿದ್ವಾಂಸರನ್ನು ಪುರಸ್ಕಾರಕ್ಕೆ ಪರಿಗಣಿಸಲಾಗುತ್ತದೆ. ಕನಕ ಯುವ ಪುರಸ್ಕಾರವನ್ನು 40 ವರ್?ದೊಳಗಿನ ಕಿರಿಯ ವಿದ್ವಾಂಸರಿಗೆ ಕನಕ ಯುವ ಪುರಸ್ಕಾರವನ್ನು ನೀಡಲಾಗುತ್ತದೆ. ಈ ಪ್ರಶಸ್ತಿಯ ಮೊತ್ತ ರೂ.50,000/-ಗಳು. ಇದರೊಂದಿಗೆ ಪ್ರಶಸ್ತಿ ಪುತ್ಥಳಿ, ಪ್ರಶಸ್ತಿ ಫಲಕ, ಶಾಲು, ಫಲತಾಂಬೂಲವನ್ನು ನೀಡಲಾಗುತ್ತದೆ. ಕನಕದಾಸರ ಬಗ್ಗೆ ಅಧ್ಯಯನ ಪೂರ್ಣ ಅಭ್ಯಾಸ ಮಾಡುತ್ತಿರುವ ಪ್ರಕಟಣೆಗಳನ್ನು ಹೊರತರುತ್ತಿರುವ, ಕನಕದಾಸರ ಸಾಹಿತ್ಯ - ಸಂದೇಶಗಳನ್ನು ಪ್ರಚಾರ ಮಾಡುತ್ತಿರುವ ಯುವ ವಿದ್ವಾಂಸರನ್ನು 'ಕನಕ ಯುವ ಪುರಸ್ಕಾರ'ಕ್ಕೆ ಪರಿಗಣಿಸಲಾಗುತ್ತದೆ ಎಂದು ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷರಾದ ಕಾ.ತ. ಚಿಕ್ಕಣ್ಣ ತಿಳಿಸಿದ್ದಾರೆ.

# ಗಾಯನ ಪ್ರತಿಭಾ ಶೋಧನೆಗೆ ಸುವರ್ಣಾವಕಾಶ




**ಪಿರಿಯಾಪಟ್ಟಣ:** ಗ್ರಾಮೀಣ ಭಾಗದ ಯುವಕ ಯುವತಿಯರಲ್ಲಿ ಅಡಗಿರುವ ಗಾಯನ ಸೂಪ್ತ ಪ್ರತಿಭೆಯ ಅನಾವರಣಕ್ಕೆ ಉತ್ತಮ ವೇದಿಕೆಯನ್ನು ಕರ್ನಾಟಕ ಕುಹೂ ಕುಹೂ ಕರೋಕೆ ಸಂಸ್ಥೆಯು ಒದಗಿಸುತ್ತದೆ ಎಂದು ಸಂಸ್ಥೆಯ ನಿರ್ದೇಶಕ ಸುರೇಶ್ ಬಾಬು ತಿಳಿಸಿದರು.

ಪಟ್ಟಣದ ತಾಲ್ಲೂಕು ಕಾರ್ಯನಿರತ ಪತ್ರಕರ್ತ ಸಂಘದ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಇದೇ ತಿಂಗಳ 17 ರ ಭಾನುವಾರದಂದು ಮದ್ಯಾಹ್ನ 3:30 ಕ್ಕೆ ಪಟ್ಟಣದ ಡಿ.ದೇವರಾಜು ಅರಸು ಕಲಾ ಭವನದಲ್ಲಿ ಕುಹೂ ಕುಹೂ ಮೈಸೂರು ಕೋಗಿಲೆ ಡಾ. ಪುನೀತ್ ರಾಜಕುಮಾರ್ ಅವಾರ್ಡ್ ಶೀರ್ಷಿಕೆ ಅಡಿಯಲ್ಲಿ ಸ್ಥಳೀಯ ಶಾಸಕರು ಹಾಗೂ ಸನ್ಮಾನ್ಯ ಸಚಿವರಾದ ಶ್ರೀ ಕೆ.ವೆಂಕಟೇಶ್ ರವರ ಮಾರ್ಗದರ್ಶನ, ಸ್ಥಳೀಯ ಸಮಾಜ ಸೇವಕರು ಹಾಗೂ ಉದ್ಯಮಿಗಳ ಸಹಕಾರದಿಂದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಒಂದು ಗಾಯನ ಕರೋಕೆ ಸ್ಪರ್ಧೆಯನ್ನು ತಾಲೂಕಿನ ಎಲ್ಲಾ ಯುವಕ ಯುವತಿಯರು ಸದ್ಬಳಕೆ ಮಾಡಿಕೊಂಡು ತಮ್ಮಲ್ಲಿ ಅಡಗಿರುವ ಪ್ರತಿಭೆಯನ್ನು ಹೊರಹಾಕಲು ಉತ್ತಮ ವೇದಿಕೆಯನ್ನು ನಮ್ಮ ಸಂಸ್ಥೆ ಕಲ್ಪಿಸಿಕೊಡಲಿದ್ದು,

ನಮ್ಮ ಸಂಸ್ಥೆಯು ಸುಮಾರು 25 ವರ್ಷಗಳ ಹಿಂದೆ ಪ್ರಥಮವಾಗಿ ಕರೋಕೆಯನ್ನು ಗ್ರಾಮೀಣ, ನಗರ, ಹಳ್ಳಿಯ ಗಾಯನ ಕಲಿಕಾಸಕ್ತರಿಗೆ ಕ್ಯಾಸೆಟ್ ಸಿಡಿ ಮುಖಾಂತರ ಪ್ರವರ್ಧಮಾನಕ್ಕೆ ತರುವ ಮೂಲಕ ಕರ್ನಾಟಕದಾದ್ಯಂತ ಕುಹೂ ಕುಹೂ ಕರೋಕೆ ಗಾಯನ ಸ್ಪರ್ಧೆ ಏರ್ಪಡಿಸಿ ಸುಪ್ತ ಪ್ರತಿಭೆಗಳ ಅನಾವರಣಕ್ಕೆ ವೇದಿಕೆ ಕಲ್ಪಿಸುತ್ತಿದೆ ಎಂದು ತಿಳಿಸಿದರು

ಗಾಯನಕ್ಕೆ ಭಾಗವಹಿಸುವ ಸ್ಪರ್ಧಾರ್ಥಿಗಳಿಗೆ ಕರೋಕೆ ಕಿಟ್ ನೀಡಲಾಗುವುದು ಹೆಚ್ಚಿನ ಮಾಹಿತಿಗಾಗಿ ನಮ್ಮ ಮೊಬೈಲ್ ನಂಬರ್ 9448436388 ಸಂಪರ್ಕಿಸುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಟೌನ್ ಘಟಕದ ಅಧ್ಯಕ್ಷ ಅಶೋಕ್ ಕುಮಾರ್ , ಬೆಣಗಾಲು ಮಂಜು, ಕಿರನಹಳ್ಳಿ ಸುಬ್ರಮಣ್ಯ , ರಘು , ಸುಂಡವಾಳು ಶಿವರಾಜ್ ಹಾಜರಿದ್ದರು.

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎನ್. ಮಂಜುಳ ಸಲಹೆ

# ಬೆಳೆ ವಿಮೆ ಯೋಜನೆಗೆ ಪ್ರೇರೆಪಿಸಿ



**ಚಿಕ್ಕಬಳ್ಳಾಪುರ:** ಎಲ್ಲ ರೈತರಿಗೂ ಬೆಳೆ ವಿಮೆಯ ಅನುಕೂಲವನ್ನು ತಿಳಿಸಿ ಕೊಟ್ಟು ಹೆಚ್ಚು ರೈತರನ್ನು ಈ ಯೋಜನೆಯಡಿ ನೋಂದಾಯಿಸಲು ಪ್ರೇರೆಪಿಸುವಂತೆ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎನ್. ಮಂಜುಳ ರವರು ಕೃಷಿ ಮತ್ತು ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಂಗಳವಾರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2023-24ನೇ ಸಾಲಿನಲ್ಲಿ ಬೆಳೆ ವಿಮೆ ಮಾಡಿಸಿಕೊಂಡಿದ್ದ ಸಂತ್ರಸ್ತ ರೈತರ ಖಾತೆಗಳಿಗೆ ರೂ. 4442.46 ಲಕ್ಷ ವಿಮಾ ಮೊತ್ತ ಜಮೆ ಆಗಿತ್ತು. 2024-25ನೇ ಸಾಲಿನಲ್ಲಿ 64162 ರೈತರು ಬೆಳೆ ವಿಮೆಗೆ ಜಿಲ್ಲೆಯಲ್ಲಿ ನೋಂದಣಿ ಮಾಡಿಸಿಕೊಂಡಿದ್ದಾರೆ. ಪ್ರಸ್ತುತ ಬೆಳೆ ವಿಮೆಗೆ ಕಾಲಾವಕಾಶವಿರುವ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಬೆಳೆ ವಿಮೆ ಮಾಡಿಸುವಂತೆ ಉಸ್ತುವಾರಿ ಕಾರ್ಯದರ್ಶಿಗಳು ರೈತರಲ್ಲಿ ಈ ವೇಳೆ ಮನವಿ ಮಾಡಿದರು.

ಈ ವರ್ಷ ಉತ್ತಮವಾಗಿ ಮಳೆಯಾಗಿದೆ, ಜೂನ್ ಮಾಹೆಯಿಂದ ಅಕ್ಟೋಬರ್ ಮಾಹೆಯ ವರೆಗೆ ಜಿಲ್ಲೆಗೆ 145 ಮಿ.ಮೀ ವಾಡಿಕೆ ಮಳೆ ಇದ್ದು, ಪ್ರಸ್ತುತ 208 ಮಿ.ಮೀ ಮಳೆಯಾಗಿ ಶೇ 44 ರಷ್ಟು ಹೆಚ್ಚುವರಿಯಾಗಿ ಮಳೆಯಾಗಿರುತ್ತದೆ. ಮಳೆ ಪ್ರಮಾಣ ಹೆಚ್ಚಾಗಿದ್ದರೂ ಕೂಡ ಜಿಲ್ಲೆಯ 23 ಗ್ರಾಮಗಳಲ್ಲಿ, 26 ವಾರ್ಡ್‌ಗಳಲ್ಲಿ ಪ್ರಸ್ತುತ ಕುಡಿಯುವ ನೀರಿನ ಕೊರತೆ ಇದ್ದು, ಖಾಸಗಿ ಕೊಳವೆ ಬಾವಿ ಮಾಲಿಕರಿಂದ ನೀರನ್ನು ಪಡೆದು ಪೂರೈಸಲಾಗುತ್ತಿದೆ. ಮುಂದಿನ 33 ವಾರಗಳಿಗೆ ಆಗುವಷ್ಟು ಜಾನುವಾರು ಮೇವು ಜಿಲ್ಲೆಯಲ್ಲಿ ಲಭ್ಯವಿರುತ್ತದೆ. ಪ್ರಸ್ತುತ ರೈತರ ಬಳಿ 420793 ಮೆ. ಟನ್ ಮೇವು ಲಭ್ಯವಿದೆ ಎಂದು ತಿಳಿಸಿದರು.

ಈ ವರ್ಷ ಅಧಿಕ ಮಳೆಗೆ 43 ಮನೆಗಳು ಪೂರ್ಣವಾಗಿ ಹಾನಿಗೆ ಒಳಗಾಗಿದ್ದು, ಈ ಪೈಕಿ 38 ಸಂತ್ರಸ್ತರಿಗೆ 45.6 ಲಕ್ಷ ಪರಿಹಾರವನ್ನು ನೀಡಲಾಗಿದೆ. 92 ಮನೆಗಳು ಭಾಗಶಃ ಹಾನಿಯಾಗಿದ್ದು, ಈ ಪೈಕಿ 87 ಸಂತ್ರಸ್ತರಿಗೆ 5.6 ಲಕ್ಷ ಪರಿಹಾರವನ್ನು ಪಾವತಿಸಲಾಗಿದೆ. 31.46 ಹೆಕ್ಟೇರ್ ಪ್ರದೇಶದ ಕೃಷಿ ಬೆಳೆಗಳು ಹಾಗೂ 73.9 ಹೆಕ್ಟೇರ್ ಪ್ರದೇಶದ ತೋಟಗಾರಿಕಾ ಬೆಳೆಗಳು ಮಳೆ ಹಾನಿಗೆ ಒಳಗಾಗಿದ್ದು, 64 ವಿದ್ಯುತ್ ಕಂಬಗಳು, 7 ಪರಿವರ್ತಕ ಸ್ಥಾವರಗಳು ಮಳೆ ಹಾನಿಗೆ ಹಾಳಾಗಿವೆ.

ಜಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ 1640 ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, ಈ ಪೈಕಿ 91 ಕಾಮಗಾರಿಗಳು ಪೂರ್ಣಗೊಂಡಿವೆ. ಉಳಿಕೆ ಕಾಮಗಾರಿಗಳು ಪ್ರಗತಿಯಲ್ಲಿವೆ. ಮುಂಬರುವ ದಿನಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ ತಲೆದೋರಬಹುದಾದ 17 ಗ್ರಾಮಗಳ ಪೈಕಿ 13 ಗ್ರಾಮಗಳಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ನೀರು ಪೂರೈಸಲು ಕ್ರಮವಹಿಸಲಾಗುವುದು. ಉಳಿದ ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿಗಳ ಮಾಲಿಕರೊಂದಿಗೆ ಒಪ್ಪಂದದ ಮೇರೆಗೆ ನೀರು ಪಡೆದು ಪೂರೈಸಲಾಗುವುದು ಎಂದು ತಿಳಿಸಿದರು.

**ಶೇ. 94.24 ರಷ್ಟು ಬಿತ್ತನೆ ಕಾರ್ಯ ಪೂರ್ಣ:** ಮುಂಗಾರು ಹಂಗಾಮಿನಲ್ಲಿ 12,817 ಹೆಕ್ಟೇರ್ ಪ್ರದೇಶಗಳಲ್ಲಿ ಕೃಷಿ ಬೆಳೆಗಳ ಬಿತ್ತನೆಯ ಗುರಿ ಹೊಂದಲಾಗಿದ್ದು, ಈ ವರೆಗೆ 1,20,621 ಹೆಕ್ಟೇರ್ ಪ್ರದೇಶಗಳಲ್ಲಿ ಬಿತ್ತನೆ ಕಾರ್ಯ ಆಗಿದ್ದು, ಶೇ. 94.24 ರಷ್ಟು ಬಿತ್ತನೆ ಕಾರ್ಯವಾಗಿರುತ್ತದೆ. ಬಿತ್ತನೆ ಕಾರ್ಯಕ್ಕೆ ಪೂರಕವಾಗಿ 14,826 ಮೆಟ್ರಿಕ್ ಟನ್ ರಸಗೊಬ್ಬರವನ್ನು ಸಮರ್ಪಕವಾಗಿ ಸರಬರಾಜು ಮಾಡಲಾಗಿದೆ. ಪ್ರಸ್ತುತ 12,569.21 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದೆ ಎಂದು ತಿಳಿಸಿದರು.

**ಶೇ. 99.17 ರಷ್ಟು ಬೆಳೆ ಸಮೀಕ್ಷೆ:** ಈ ಬಾರಿಯ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಯ ಶೇ. 99.17 ರಷ್ಟು ಪ್ರಗತಿ ಸಾಧಿಸಲಾಗಿದೆ. ಈ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ 672 ಜನರನ್ನು ನಿಯೋಜಿಸಿ 5,99,849 ರೈತರ ತಾಕುಗಳ ವಿವರವನ್ನು ಬೆಳೆ ಸಮೀಕ್ಷೆ ತಂತ್ರಾಂಶಕ್ಕೆ ನಮೂದಿಸಲಾಗಿದೆ. 1514 ತಾಕುಗಳ ರೈತರು ತಮ್ಮ ಮೊಬೈಲ್ ಮೂಲಕವೇ ವಿವರವನ್ನು ತಂತ್ರಾಂಶದಲ್ಲಿ ದಾಖಲಿಸಿ ಬೆಳೆ ಸಮೀಕ್ಷೆಯನ್ನು ಕೈಗೊಂಡಿದ್ದಾರೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ಹಾಜರಿದ್ದರು.

# ಪಿಇಟಿ ಒಳ ಕ್ರೀಡಾಂಗಣ: ಬ್ಯಾಡ್ಮಿಂಟನ್ ಸಮಾರೋಪ




**ಮಂಡ್ಯ:** ಪಿಇಟಿ ಒಳಾಂಗಣ ಕ್ರೀಡಾಂಗಣದಲ್ಲಿ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ಹಾಗೂ ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ ರಾಜ್ಯಮಟ್ಟದ ಚಾಂಪಿಯನ್ ಶಿಪ್ ಶಟಲ್ ಬ್ಯಾಡ್ಮಿಂಟನ್ ಸಮಾರೋಪ ಸಮಾರಂಭ ನಡೆಯಿತು.

ಸಮಾರಂಭದಲ್ಲಿ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ಕಾರ್ಯದರ್ಶಿ ಮನೋಹರ್ ಹಾಜರೆ ಮಾತನಾಡಿ 19 ವರ್ಷದ ಒಳಗಿನ ಹಾಗೂ ಸೀನಿಯರ್ ವಿಭಾಗದ ಹುಡುಗ ಹುಡುಗಿಯರು ಮತ್ತು ಪುರುಷ ಹಾಗೂ ಮಹಿಳೆಯರ ಪಂದ್ಯಾವಳಿ ಏಳು ದಿನಗಳ ಕಾಲ ನಡೆದಿದೆ.

ಒಟ್ಟು 496 ಸ್ಪರ್ಧಾಳುಗಳು ಈ ಆಟದಲ್ಲಿ ಭಾಗವಹಿಸಿ 328 ಪಂದ್ಯಾವಳಿ ನಡೆದಿದ್ದು ಆಟದಲ್ಲಿ ವಿಜೇತರಾದವರಿಗೆ ಒಟ್ಟು 2.25 ಲಕ್ಷ ರೂ ಬಹುಮಾನ ವಿತರಿಸಿದ್ದೇವೆ ಎಂದರು.

ಸಮಾರಂಭದಲ್ಲಿ ಡಾ.ಶಿವಕುಮಾರ್ ಬಹುಮಾನ ವಿತರಿಸಿದರು ಜಿಲ್ಲಾ ಟ್ರಸ್ಟ್ ನ ಅನಿಲ್ ಕುಮಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ವಿದ್ಯಾರ್ಥಿಗಳಿಗೆ ಫುಟ್ಬಾಲ್ ಆಸಕ್ತಿ ಇರಲಿ

**ಮಂಡ್ಯ:** ವಿದ್ಯಾರ್ಥಿಗಳು ಫುಟ್ಬಾಲ್ ಕ್ರೀಡೆಯಲ್ಲಿ ಭಾಗವಹಿಸುವಂತೆ ಹೆಚ್ಚು ಪ್ರೋತ್ಸಾಹ ನೀಡುವುದು ಮುಖ್ಯವಾಗಬೇಕು ಎಂದು ಬಿಜೆಪಿ ಜಿಲ್ಲಾ ನಗರ ಘಟಕದ ಅಧ್ಯಕ್ಷ ವಸಂತ್ ಕುಮಾರ್ ಸಲಹೆ ನೀಡಿದರು.

ನಗರದ ಬಿ.ಜಿ.ದಾಸೇಗೌಡ ಕ್ರೀಡಾಂಗಣದಲ್ಲಿ ಯುವಸಬಲೀಕರಣ ಕ್ರೀಡಾ ಇಲಾಖೆ, ಸ್ವರ್ಣ ಫುಟ್ಬಾಲ್ ಅಭಿವೃದ್ಧಿ ಸಂಸ್ಥೆ, ಜಿಲ್ಲಾ ಫುಟ್ಬಾಲ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ರಾಜ್ಯ ಮಟ್ಟದ 5ಎಸ್ ಫುಟ್ಬಾಲ್ ಪಂದ್ಯಾವಳಿ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಫುಟ್ಬಾಲ್ನಲ್ಲಿ ಎರಡೂ ಪಂದ್ಯಗಳ ನಡುವೆ ನಡೆದ ಕಾಳಗ ಪ್ರೇಕ್ಷಕರಿಗೆ ಸಂತಸ ನೀಡಿದೆ, ಇದರಲ್ಲಿ ಎರಡೂ ತಂಡಗಳು ಸಮಬಲ ಹೋರಾಟದಲ್ಲಿ ನಿರತರಾಗಿ ಅದನ್ನು ಕೊನೆವರೆಗೂ ಉಳಿಸಿಕೊಂಡು ಹೋಗಿದ್ದು ಕುತೂಹಲಕಾರಿ ಬೆಳವಣಿಗೆಯಂತೆ ಕಂಡಿತು, ಇಂತಹ ಆಸಕ್ತಿದಾಯಕ ಆಟಗಳು ಗ್ರಾಮೀಣ ಭಾಗದಲ್ಲಿಯೂ ನಡೆಯಬೇಕು ಎಂದು ತಿಳಿಸಿದರು. ಮಂಡ್ಯದ ನೇತಾಜಿ ಫುಟ್ಬಾಲ್ ತಂಡವು ಪ್ರಥಮ ಬಹುಮಾನ ಗಳಿಸಿದರೆ ಮೈಸೂರಿನ ವೀನಸ್ ಫುಟ್ಬಾಲ್ ತಂಡವು ದ್ವಿತೀಯ ಬಹುಮಾನ ಗಳಿಸಿತು. ಕಾರ್ಯಕ್ರಮದಲ್ಲಿ ಬಿಜೆಪಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಪ್ರವೀಣ್, ಫುಟ್ಬಾಲ್ ಮಾಜಿ ಆಟಗಾರರಾದ ಆಟೋ ನಾಗರಾಜ್, ವೆಂಕಟ್, ವೇಣುಗೋಪಾಲ್, ಮುಖಂಡರಾದ ಕೃಷ್ಣಪ್ಪ, ನಟರಾಜು, ರವಿಚಂದ್ರ ಭಾಗವಹಿಸಿದ್ದರು.



# ಕಾಣೆಯಾದವರ ಪತ್ತೆಗೆ ಮನವಿ

**ಕೋಲಾರ:** ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ಪ್ರಮೋದ್.ಇ, ತಂದೆಯ ಹೆಸರು: ಎಳಿಲ್ ಅಸರನ್, 21 ವರ್ಷ, ಎಸ್.ಎಸ್.ಎಲ್.ಸಿ ಅನುತ್ತೀರ್ಣ, ಕೋಲು ಮುಖ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, 04 ಅಡಿ ಎತ್ತರ, ಕನ್ನಡ, ತಮಿಳು ಭಾಷೆ ಮಾತನಾಡುತ್ತಾರೆ. ದೈಹಿಕ ವಿಕಲಚೇತರಾಗಿದ್ದರಿಂದ ಎಡಗಾಲು ಚಿಕ್ಕದಾಗಿರುತ್ತದೆ. ಕ್ರೀಂ ಬಣ್ಣದ ಶರ್ಟ್ ಮತ್ತು ಗ್ರೇ ಬಣ್ಣದ ಪ್ಯಾಂಟ್ ಕ್ಯಾನವಸ್ ಶೂ, ಒಂದು ಬಿಳಿ ಬಣ್ಣದ ಕ್ಯಾಪ್ ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ಪ್ರೇಮ, ತಂದೆಯ ಹೆಸರು: ದಯಾಳನ್, 68 ವರ್ಷ, ಬಿ.ಎಡ್ ವಿದ್ಯಾಭ್ಯಾಸ, ಗುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, 5.0 ಅಡಿ ಎತ್ತರ, ಆಂಗ್ಲ, ತಮಿಳು ಭಾಷೆ ಮಾತನಾಡುತ್ತಾರೆ. ಎಡಗೈ ಚಿಕ್ಕ ಬೆರಳಿನ ಮೇಲೆ ಹಳೇ ಗಾಯದ ಗುರುತು ಇರುತ್ತದೆ. ಕೆಂಪು ಬಣ್ಣದ ಸೀರೆ, ಜಾಕೇಟ್ ಧರಿಸಿರುತ್ತಾಳೆ. ಈ ವ್ಯಕ್ತಿಗಳ ಮಾಹಿತಿ ತಿಳಿದು ಬಂದಲ್ಲಿ ಆಂಡ್ರಸನ್‌ಪೇಟೆ ಠಾಣೆಗೆ ದೂರು ನೀಡಬಹುದು ಎಂದು ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

# ಯಳಂದೂರು, ಹನೂರು ಪಟ್ಟಣ ಪಂಚಾಯಿತಿಯ ತಲಾ ಒಂದು ಸದಸ್ಯ ಸ್ಥಾನಕ್ಕೆ ಉಪಚುನಾವಣೆ

**ಚಾಮರಾಜನಗರ:** ವಿವಿಧ ಕಾರಣಗಳಿಂದ ತೆರವಾಗಿರುವ ಜಿಲ್ಲೆಯ ಯಳಂದೂರು ಪಟ್ಟಣ ಪಂಚಾಯಿತಿಯ 5ನೇ ವಾರ್ಡ್ (ಪರಿಶಿಷ್ಟ ಜಾತಿ) ಹಾಗೂ ಹನೂರು ಪಟ್ಟಣ ಪಂಚಾಯಿತಿಯ 12ನೇ ವಾರ್ಡ್ (ಸಾಮಾನ್ಯ ಮಹಿಳೆ) ತಲಾ ಒಂದು ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಸಲು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಸೂಚನೆ ಹೊರಡಿಸಿದ್ದಾರೆ. ನಾಮಪತ್ರ ಸಲ್ಲಿಸಲು ನವೆಂಬರ್ 11 ಕೊನೆಯ ದಿನವಾಗಿದೆ. 12ರಂದು ನಾಮಪತ್ರಗಳನ್ನು ಪರಿಶೀಲಿಸಲಾಗುತ್ತದೆ. ಉಮೇದುವಾರಿಕೆ ಹಿಂತೆಗೆದುಕೊಳ್ಳಲು ನವೆಂಬರ್ 14 ಕಡೆಯ ದಿನವಾಗಿದೆ. ಮತದಾನ ಅವಶ್ಯವಿದ್ದರೆ ನವೆಂಬರ್ 23ರಂದು ಬೆಳಿಗ್ಗೆ 7ರಿಂದ ಸಂಜೆ 5 ಗಂಟೆಯವರೆಗೆ ಮತದಾನ ನಡೆಯಲಿದೆ. ಮರು ಮತದಾನ ಅವಶ್ಯವಿದ್ದರೆ ನವೆಂಬರ್ 25ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆಯವರೆಗೆ ಮತದಾನ ನಡೆಯಲಿದೆ. ಮತಗಳ ಎಣಿಕೆ ಕಾರ್ಯವು ಆಯಾ ತಾಲೂಕು ಕೇಂದ್ರ ಸ್ಥಳದಲ್ಲಿ ನವೆಂಬರ್ 26ರಂದು ಬೆಳಿಗ್ಗೆ 8 ಗಂಟೆಯಿಂದ ನಡೆಯಲಿದೆ. ನವೆಂಬರ್ 26ರಂದು ಚುನಾವಣೆ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ ಎಂದು ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಚಾಮರಾಜನಗರ:** ಜಿಲ್ಲೆಯ ಹೊಂಡರಬಾಳುವಿನಲ್ಲಿರುವ ಜವಾಹಾರ ನವೋದಯ ವಿದ್ಯಾಲಯದಲ್ಲಿ 2025-26ನೇ ಸಾಲಿನ 9 ಮತ್ತು 11ನೇ ತರಗತಿ ದಾಖಲಾತಿಗಾಗಿ 2025ರ ಫೆಬ್ರವರಿ 8ರಂದು ನಡೆಯುವ ಪ್ರವೇಶ ಪರೀಕ್ಷೆಗೆ (ಲೀಸ್ಟ್) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ನವೆಂಬರ್ 9ರವರೆಗೆ ವಿಸ್ತರಿಸಲಾಗಿದೆ. ಮೀಸಲಾತಿಯು ಕೇಂದ್ರ ಸರ್ಕಾರದ ನಿಯಮದಂತೆ ಅನ್ವಯವಾಗುತ್ತದೆ. 9ನೇ ತರಗತಿಗೆ ವೆಬ್‌ಸೈಟ್https://cbseitms.nic.in/2024/nvsix ಹಾಗೂ 11ನೇ ತರಗತಿಗೆ https://cbseitms.nic.in/2024/nvsxi_11 ಮೂಲಕ ನವೆಂಬರ್ 9ರೊಳಗೆ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್https://navodaya.gov.in ಗೆ ಭೇಟಿ ನೀಡಬಹುದು ಅಥವಾ ಸಹಾಯವಾಣಿ ಮೊ.ಸಂ 9742476738, 9008259934, 9964932482 ಅನ್ನು ಸಂಪರ್ಕಿಸಬಹುದು ಎಂದು ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಯಿಯ ಹೆಸರಿನಲ್ಲಿ ಗಿಡ ನೆಡುವ ಕಾರ್ಯಕ್ರಮ

**ಚಾಮರಾಜನಗರ:** ನೆಹರು ಯುವ ಕೇಂದ್ರ, ಸರ್ಕಾರಿ ಪದವಿ ಪೂರ್ವ ಬಾಲಕರ ಕಾಲೇಜು ಹಾಗೂ ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಸಂಯುಕ್ತಾಶ್ರಯದಲ್ಲಿ 'ತಾಯಿಯ ಹೆಸರಿನಲ್ಲಿ ಗಿಡ ನೆಡುವ ಕಾರ್ಯಕ್ರಮ'ವನ್ನು ನವೆಂಬರ್ 7ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸರ್ಕಾರಿ ಪದವಿ ಪೂರ್ವ ಬಾಲಕರ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಮಂಜುನಾಥ ಪ್ರಸನ್ನ ಅವರು ಕಾರ್ಯಕ್ರಮ ಉದ್ಘಾಟಿಸುವರು. ಉಪ ಅರಣ್ಯ ಸಂರಕ್ಷಣಾಧಿಕಾರಿ ಸಭ್ಯಶ್ರೀ ಅವರು ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಸರ್ಕಾರಿ ಪದವಿ ಪೂರ್ವ ಬಾಲಕರ ಕಾಲೇಜಿನ ಪ್ರಾಂಶುಪಾಲರಾದ ಎಂ. ಸೋಮಣ್ಣ ಅವರು ಅಧ್ಯಕ್ಷತೆ ವಹಿಸುವರು. ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ, ನಗರಸಭೆ ಸದಸ್ಯರಾದ ಎಂ. ಮಹೇಶ್, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಅಧ್ಯಕ್ಷರಾದ ಜಿ ಬಂಗಾರು, ನೆಹರು ಯುವ ಕೇಂದ್ರದ ಜಿಲ್ಲಾ ಯುವಜನ ಅಧಿಕಾರಿ ಅಭಿಷೇಕ್ ಚವರೆ, ಲೆಕ್ಕಾಧಿಕಾರಿ ಸತೀಶ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ನ.14 ರಿಂದ 17 ಕೃಷಿ ಮೇಳ

**ಮೈಸೂರು:** ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರು, ಇವರ ವತಿಯಿಂದ ವಿವಿಧ ಅಭಿವೃದ್ಧಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನವೆಂಬರ್ 14 ರಿಂದ 17 ರವರೆಗೆ ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ) ಕೃಷಿ ವಿಶ್ವವಿದ್ಯಾನಿಲಯದಲ್ಲಿ ಕೃಷಿ ಮೇಳವನ್ನು ಹಮ್ಮಿಕೊಳ್ಳಲಾಗಿದೆ.ಈ ಕೃಷಿ ಮೇಳದಲ್ಲಿ ರೈತರ ಸಮಸ್ಯೆಗಳಿಗೆ ತಜ್ಞರಿಂದ ಸಲಹೆ ಹಾಗೂ ರೈತರಿಂದ ರೈತರಿಗಾಗಿ ಚರ್ಚಾಗೋಷ್ಠಿ, ಕೃಷಿ ಪರಿಕರಗಳ ಹಾಗೂ ಪ್ರಕಟಣೆಗಳ ಮಾರಾಟ ವ್ಯವಸ್ಥೆ ಮಾಡಲಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಮೈಸೂರು ಜಿಲ್ಲೆಯ ರೈತರಿಗೆ ನವೆಂಬರ್ 15 ರಂದು ನಿಗಧಿಪಡಿಸಲಾಗಿದೆ ಎಂದು ನಾಗನಹಳ್ಳಿ ವಿಸ್ತರಣಾ ಶಿಕ್ಷಣ ಘಟಕದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೀವನ ಪ್ರಮಾಣಪತ್ರ ಸೇವೆಯಲ್ಲಿ ಈ ಬಾರಿ ಮುಖಚಹರೆ ಆಧಾರಿತ ಪ್ರಕ್ರಿಯೆಗೆ ಒತ್ತು




**ಬೆಂಗಳೂರು:** ನವೆಂಬರ್ 1, 2024 ರಿಂದ 30 ನವೆಂಬರ್ 2024 ರವರೆಗೆ ಪಿಂಚಣಿದಾರರಿಗೆ ರಾಷ್ಟ್ರವ್ಯಾಪಿ ಡಿಜಿಟಲ್ ಲೈಫ್ ಸರ್ಟಿಫಿಕೇಟ್ (ಡಿಎಲ್‌ಸಿ) ಅಭಿಯಾನ 3.0 ನಡೆಯಲಿದ್ದು ಇದರಲ್ಲಿ ಕರ್ನಾಟಕ ಅಂಚೆ ವೃತ್ತವು ನಾಗರಿಕರಿಗೆ ಜೀವನ ಪ್ರಮಾಣಪತ್ರ ಸೇವೆಯನ್ನು ಸಕ್ರಿಯವಾಗಿ ಒದಗಿಸಲಿದೆ.

ಪಿಂಚಣಿದಾರರು ವೈಯಕ್ತಿಕವಾಗಿ ಜೀವನ ಪ್ರಮಾಣಪತ್ರವನ್ನು ಸಲ್ಲಿಸುವ ಸಮಯದಲ್ಲಿ ಎದುರಿಸುತ್ತಿರುವ ತೊಂದರೆಗಳನ್ನು ತಪ್ಪಿಸಲು, ಭಾರತೀಯ ಅಂಚೆ ಇಲಾಖೆ ಪಿಂಚಣಿದಾರರ ಮನೆ ಬಾಗಿಲಿನಲ್ಲಿ, ಜೀವನ ಪ್ರಮಾಣಪತ್ರವನ್ನು ಸಲ್ಲಿಸಲು ವ್ಯವಸ್ಥೆ ಮಾಡಿದೆ.

ಪಿಂಚಣಿದಾರರು ತಮ್ಮ ಜೀವನ ಪ್ರಮಾಣಪತ್ರವನ್ನು ಕೆಲವೇ ನಿಮಿ?ಗಳಲ್ಲಿ ಪೋಸ್ಟ್‌ಮ್ಯಾನ್ ಮೂಲಕ ಆಧಾರ್ ಸಂಖ್ಯೆ ಮೊಬೈಲ್ ಸಂಖ್ಯೆ ಪಿಪಿಒ ಸಂಖ್ಯೆ ಮತ್ತು ಪಿಂಚಣಿದಾರರ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ತಮ್ಮ ಮುಖಚಹರೆ ಆಧಾರಿತ ಪ್ರಕ್ರಿಯೆ ಮುಖಾಂತರ ಸಲ್ಲಿಸಬಹುದು. ಈ ತಂತ್ರಜ್ಞಾನದ ಮೂಲಕ ಜೀವನ ಪ್ರಮಾಣಪತ್ರವನ್ನು ಸಲ್ಲಿಸುವ ವಿಧಾನವು ಬಹಳ ಸುಲಭವಾಗಿದ್ದು, ಇದು ಹಿರಿಯ ಪಿಂಚಣಿದಾರರ ಬೆರಳಚ್ಚು ಗುರುತಿಸುವಲ್ಲಿನ ಹಾಗೂ ಇತರ ಬೆರಳಚ್ಚು ಸಂಬಂಧಿತ ದೃಢೀಕರಣದ ಸಮಸ್ಯೆಗಳನ್ನು ಎದುರಿಸುತ್ತಿರುವ ಗ್ರಾಹಕರಿಗೆ ಪ್ರಯೋಜನವನ್ನು ನೀಡುತ್ತದೆ.

ಕೇಂದ್ರ ಸರ್ಕಾರದ ನಿವೃತ್ತ ಪಿಂಚಣಿದಾರರು/ ಕುಟುಂಬ ಪಿಂಚಣಿದಾರರು, ಇಪಿಎಫ್‌ಓ ನ ಪಿಂಚಣಿದಾರರು ಹಾಗೂ ರಾಜ್ಯ ಸರ್ಕಾರದ ವಿವಿಧ ಇಲಾಖೆಯ ಪಿಂಚಣಿದಾರರು/ ಕುಟುಂಬ ಪಿಂಚಣಿದಾರರು ಈ ಸೇವೆಯನ್ನು ಪಡೆಯಬಹುದಾಗಿದೆ. ಮತ್ತು ರಾಜ್ಯ ಸರ್ಕಾರದ ಸಾಮಾಜಿಕ ಭದ್ರತಾ ಪಿಂಚಣಿದಾರರಿಗೆ ಅನ್ವಯವಾಗುವುದಿಲ್ಲ. ಈ ಸೇವೆಯನ್ನು ಪಡೆಯಲು ರೂ.70/- (ಜಿಎಸ್‌ಟಿ ಸೇರಿದಂತೆ) ಸೇವಾ ಶುಲ್ಕ ನಿಗದಿಪಡಿಸಲಾಗಿದೆ. ಪಿಂಚಣಿದಾರರು ಜೀವನ ಪ್ರಮಾಣಪತ್ರ ಸೇವೆಯನ್ನು ಪಡೆಯಲು ತಮ್ಮ ಹತ್ತಿರದ ಅಂಚೆ ಕಚೇರಿಗೆ ಭೇಟಿ ನೀಡಬಹುದು ಎಂದು ಪ್ರಕಟಣೆ ತಿಳಿಸಿದೆ.

# 110 ಕ್ಕೂ ಹೆಚ್ಚು ವಿಷಯಗಳ ಸ್ಮರಣ ಸಂಚಿಕೆಗೆ ಲೇಖನಗಳು



**ಮಂಡ್ಯ:** 87 ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆಗೆ ಸುಮಾರು 110 ವಿಷಾ 'ಯಗಳನ್ನು ನೀಡಿ ಲೇಖನಗಳನ್ನು ಬರೆಯುವಂತೆ ಲೇಖಕರಿಗೆ ಮನವಿ ಸಲ್ಲಿಸಲಾಗಿತ್ತು, ಈಗಾಗಲೇ ಸುಮಾರು 40 ಲೇಖನಗಳು ಬಂದಿರುತ್ತದೆಎಂದುಅಪರಜಿಲ್ಲಾಧಿಕಾರಿಡಾ: ಹೆಚ್.ಎಲ್ ನಾಗರಾಜ್‌ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸ್ಮರಣ ಸಂಚಿಕೆ ಸಭೆ ನಡೆಸಿ ಮಾತನಾಡಿದರು.ಮಂಡ್ಯಜಿಲ್ಲೆಯ ಭೌಗೋಳಿಕತೆ, ನೈಸರ್ಗಿಕತೆ, ಪ್ರದೇಶಿಕತೆ, ಮಂಡ್ಯಜಿಲ್ಲೆಯ ಪುರಾತತ್ವ ನೆಲೆಗಳು, ಮಂಡ್ಯಜಿಲ್ಲೆಯ ಜನಸಮುದಾಯಗಳು, ಮಂಡ್ಯದಲ್ಲಿರೈತ ಸಂಘಟನೆ ಸ್ವರೂಪ ಹೋರಾಟ ವ್ಯಾಪ್ತಿ ಸೇರಿದಂತೆ 110 ಕ್ಕೂ ಹೆಚ್ಚು ವಿಷಾ 'ಯಗಳನ್ನು ರಚಿಸಲಾಗಿದೆಎಂದರು. ಸ್ಮರಣ ಸಂಚಿಕೆಯನ್ನು 5 ಭಾಗವಾಗಿ ವಿಂಗಡಿಸಿ ಸಂಚಿಕೆಯಆಯಾ ಭಾಗದ ಲೇಖನಗಳನ್ನು ಪಡೆದು ಚರ್ಚಿಸಿ ಅಂತಿಮಗೊಳಿಸುವ ಜವಾಬ್ದಾರಿ ಹೊಂದಿರುತ್ತಾರೆ.ಉತ್ತಮವಾಗಿ ಕೆಲಸ ನಿರ್ವಹಿಸಿ ಮೌಲ್ಯಯುತವಾಗಿ ಸ್ಮರಣ ಸಂಚಿಕೆ ಮೂಡಿ ಬರಲಿ ಎಂದರು.

ಛಾಯಚಿತ್ರಆಹ್ವಾನ ಸ್ಮರಣ ಸಂಚಿಕೆಯಲ್ಲಿ ಮಂಡ್ಯಜಿಲ್ಲೆಗೆ ಮಹಾತ್ಮಗಾಂಧೀಜಿ, ಕುವೆಂಪು ಅವರ ಭೇಟಿ, ಕೆ.ಆರ್.ಎಸ್. ನಿರ್ಮಾಣ, ಶಿವಪುರ ಸತ್ಯಾಗ್ರಹದಲ್ಲಿ ಹೋರಾಟಗಾರರು ಸೇರಿದಂತೆಇನ್ನಿತರೆಅಪರೂಪದ ಛಾಯಾಚಿತ್ರಗಳನ್ನು ಸ್ಮರಣ ಸಂಚಿಕೆಗೆ ಕಳುಹಿಸಿಕೊಡಬಹುದು. ಸಮಿತಿಯು ಪರಿಶೀಲಿಸಿ ಛಾಯಾಚಿತ್ರಗಳನ್ನು ಆಯ್ಕೆ ಮಾಡಲಿದೆ.ಆಸಕ್ತರುಜಿಲ್ಲಾಗ್ರಂಥಾಲಯದ ಸ್ಮರಣ ಸಂಚಿಕೆಕಚೇರಿಗೆ ಸಲ್ಲಿಸುವುದುಎಂದರು. ಶೀರ್ಷಿಕೆ ಆಹ್ವಾನ ಸ್ಮರಣ ಸಂಚಿಕೆಗೆ ಸೂಕ್ತ ಶೀರ್ಷಿಕೆ ನೀಡಲು ಶೀರ್ಷಿಕೆಯನ್ನು ಆಹ್ವಾನಿಸಲಾಗಿದೆ.ಮುಚ್ಚಿದ ಲಕೋಟೆಯಲ್ಲಿಆಸಕ್ತರು ಶೀರ್ಷಿಕೆಯನ್ನು ನವೆಂಬರ್ 20 ರೊಳಗಾಗಿ ಜಿಲ್ಲಾಕೇಂದ್ರಗ್ರಂಥಾಲಯ ಮಂಡ್ಯಇಲ್ಲಿಗೆ ಸಲ್ಲಿಸುವುದು.ಆಯ್ಕೆಯಾದ ಶೀರ್ಷಿಕೆ ಗೆ ನಗದು ಬಹುಮಾನ ನೀಡಿಗೌರವಿಸಲಾಗುವುದುಎಂದರು. ನೆನಪಿನ ಸಂಪುಟಕ್ಕೆಗಣ್ಯರು ಹಾಗೂ ಜನಪ್ರತಿನಿಧಿಗಳಿಂದ ಸಂದೇಶ ಪಡೆಯಲು ಪತ್ರ ಮೂಲಕ ಮನವಿ ಮಾಡುವ ಬಗ್ಗೆ, ಸಂಪುಟದ ಮುಖಪುಟ ವಿನ್ಯಾಸ ಮಾಡುವ ಬಗ್ಗೆ ಸಮಿತಿಯ ಸದಸ್ಯರಿಂದಅಭಿಪ್ರಾಯ ಪಡೆಯಲಾಯಿತು ಮಧುರ ಮಂಡ್ಯಉಪಸಮಿತಿಗೆ- ದಕೋ ಹಳ್ಳಿ ಚಂದ್ರಶೇಖರ್, ಮಂಡ್ಯ- ಕರ್ನಾಟಕ ಭಾರತಉಪಸಮಿತಿಗೆ- ಡಾ: ಎಂ.ಬಿ ಸುರೇಶ್, ವಿಶ್ವಕರ್ನಾಟಕಉಪಸಮಿತಿ- ಪ್ರೊ ಹಲ್ಕೆರೆ ಮಹದೇವು, ಅಭಿವೃದ್ಧಿ ಭಾರತಉಪಸಮಿತಿಗೆ- ಕೆ.ಪಿಮೃತ್ಯುಂಜಯ, ಚಿತ್ರಸಂಚಿಕೆ ಮಂಡ್ಯದರ್ಶನಉಪಸಮಿತಿಗೆ- ಡಾ: ಎಸ್.ಬಿ ಶಂಕರೇಗೌಡರನ್ನು ಉಪಸಮಿತಿಗಳಿಗೆ ಸಂಚಾಲಕರಾಗಿ ನೇಮಕ ಮಾಡಲು ಸಮಿತಿ ತೀರ್ಮಾನಿಸಿತು. ಸಭೆಯಲ್ಲಿ ಸಭೆಯಲ್ಲಿ ಹಿರಿಯ ಸಾಹಿತಿತೈಲೂರು ವೆಂಕಟಕೃಷಾ ್ಣ, ಕನ್ನಡ ಸಾಹಿತ್ಯ ಸಮ್ಮೇಳನದ ಸಂಚಾಲಕರಾದ ಮೀರಾ ಶಿವಲಿಂಗಯ್ಯ, ಗ್ರಂಥಾಲಯಅಧಿಕಾರಿಕೃಷಾ ್ಣಮೂರ್ತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ ಎಸ್. ಹೆಚ್, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಡಾ.ಕೃಷ್ಣೇಗೌಡ ಹುಸ್ಕೂರು, ಪತ್ರಕರ್ತ ದ.ಕೋ.ಹಳ್ಳಿ ಚಂದ್ರಶೇಖರ್, ಪುಸ್ತಕ ಸಮಿತಿಅಧ್ಯಕ್ಷಡಾ: ಮುದ್ದೇಗೌಡ, ಸ್ಮರಣ ಸಂಚಿಕೆ ಸಮಿತಿ ಸಂಚಾಲಕ ಡಾ. ಮ ರಾಮಕೃಷಾ ್ಣ. ಸಮಿತಿ ಸದಸ್ಯರಾದ ಎಂ.ವಿ.ಧರಣೇಂದ್ರಯ್ಯ, ಹುಲ್ಲುಕೆರೆ ಮಹದೇವ, ಕೆ.ಪಿ.ಮೃತ್ಯುಂಜಯ, ಕನ್ನಡ ಸಾಹಿತ್ಯ ಸಮ್ಮೇಳನ ವಿಶೇಷಾ 'ಧಿಕಾರಿಡಾ. ಚಂದ್ರಶೇಖರ್‌ಜಿ.ಆರ್ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ವಿವೋದ ಈ ಸ್ಟೈಲಿಶ್ ಫೋನ್ ಬೆಲೆ ಇಳಿಕೆ ನೇಮಕ



ಲೀಡಿಂಗ್ ಇ ಕಾಮರ್ಸ್ ತಾಣ ಎನಿಸಿರುವ ಫ್ಲಿಪ್‌ಕಾರ್ಟ್ ಒಂದಿಲ್ಲೊಂದು ಆಫರ್ ಮೇಳಗಳನ್ನು ಮೂಲಕ ಗ್ರಾಹಕರನ್ನು ತನ್ನತ್ತ ಸೆಳೆಯುತ್ತಿದ್ದು, ಇದೀಗ ಮೊಬೈಲ್ ಫೆಸ್ಟಿವಲ್ ಸೇಲ್ ಆಯೋಜಿಸಿದ್ದು ಸಖತ್ ಕೊಡುಗೆಗಳ ಘೋಷಣೆ ಮಾಡಿದೆ. ಅದರಲ್ಲಿಯೂ ಪ್ರಮುಖವಾಗಿ ಆಯ್ದ ಮೊಬೈಲ್‌ಗಳಿಗೆ ಭೊಂಬಾಟ್ ರಿಯಾಯಿತಿ ಲಭ್ಯ ಮಾಡಿದೆ. ಆ ಪೈಕಿ ವಿವೋ ಸಂಸ್ಥೆಯು ವಿವೋ V30 ಪ್ರೊ ಮೊಬೈಲ್ (Vivo V30 Pro 5G ) ಗ್ರಾಹಕರು ಹುಬ್ಬೇರಿಸುವಂತಹ ಡಿಸ್ಕೌಂಟ್ ನಲ್ಲಿ ಕಾಣಿಸಿಕೊಂಡಿದೆ. ಹೌದು, ಫ್ಲಿಪ್‌ಕಾರ್ಟ್ ಆಯೋಜಿಸಿರುವ ಸ್ಮಾರ್ಟ್‌ಫೋನ್ ಫೆಸ್ಟಿವಲ್ ಸೇಲ್‌ನಲ್ಲಿ ವಿವೋ V30 ಪ್ರೊ ಮೊಬೈಲ್ (Vivo V30 Pro 5G ) ಮೊಬೈಲ್ ಶೇ. 17% ರಷ್ಟು ನೇರ ಡಿಸ್ಕೌಂಟ್ ಬೆಲೆಯಲ್ಲಿ ಕಾಣಿಸಿಕೊಂಡಿದೆ. ಈ ಮೊಬೈಲ್‌ನ 8 GB RAM + 256 GB ಸ್ಟೋರೇಜ್ ವೇರಿಯಂಟ್ ಆಫರ್‌ನಲ್ಲಿ 38,999ರೂ. ಗಳ ಬೆಲೆಯಲ್ಲಿ ಖರೀದಿಗೆ ಲಭ್ಯ ಇದೆ. ಅಲ್ಲದೇ ಹೆಚ್ಚುವರಿಯಾಗಿ ಕೆಲವು ಆಯ್ದ ಬ್ಯಾಂಕ್‌ಗಳಿಂದ ಡಿಸ್ಕೌಂಟ್ ಸಹ ಪಡೆಯಬಹುದಾಗಿದೆ. ವಿವೋ V30 ಪ್ರೊ ಮೊಬೈಲ್ (Vivo V30 Pro 5G )ಡ್ಯುಯಲ್ ರಿಯರ್ ಕ್ಯಾಮೆರಾ ರಚನೆ ಪಡೆದಿದ್ದು, ಇದರ ಮೊದಲ ಕ್ಯಾಮೆರಾವು 50 ಮೆಗಾ ಪಿಕ್ಸಲ್ ಸೆನ್ಸಾರ್ ಆಗಿದೆ. ಅಲ್ಲದೇ ಇದು ಬ್ಲೂ ಹಾಗೂ ಬ್ಲ್ಯಾಕ್ ಕಲರ್ ಆಯ್ಕೆಗಳನ್ನು ಪಡೆದಿದ್ದು, ಮೀಡಿಯಾ ಟೆಕ್ ಡೈಮೆನ್ಸಿಟಿ 8200 ಕೆಲಸ ಮಾಡಲಿದೆ. ಹಾಗಾದರೇ ವಿವೋ V30 ಪ್ರೊ ಮೊಬೈಲ್ ನ ಇತರೆ ಫೀಚರ್ಸ್‌ಗಳ ಬಗ್ಗೆ ಮುಂದೆ ತಿಳಿಯೋಣ ಬನ್ನಿರಿ. ವಿವೋ V30 ಪ್ರೊ ಮೊಬೈಲ್ (Vivo V30 Pro 5G )ಸ್ಮಾರ್ಟ್‌ಫೋನ್ 6.78 ಇಂಚಿನ ಫುಲ್ ಹೆಚ್‌ಡಿ ಪ್ಲಸ್ ಕರ್ವ್ಡ್ ಡಿಸ್‌ಪ್ಲೇ ಅನ್ನು ಹೊಂದಿದೆ. ಇದು 120Hz ರಿಫ್ರೆಶ್ ರೇಟ್, 100% DCI-P3 ಬಣ್ಣದ ಹರವು, ಅಲ್ಲದೇ 2800 nits ವರೆಗೆ ಗರಿಷ್ಠ ಬ್ರೈಟ್‌ನೆಸ್ ಲೆವೆಲ್ ಸಹ ಹೊಂದಿದೆ. ವಿವೋ V30 ಪ್ರೊ ಸ್ಮಾರ್ಟ್‌ಫೋನ್ ಮೀಡಿಯಾ ಟೆಕ್ ಡೈಮೆನ್ಸಿಟಿ 8200 4nm ಪ್ರೊಸೆಸರ್ ಪವರ್ ಅನ್ನು ಹೊಂದಿದ್ದು, ಇದಕ್ಕೆ ಪೂರಕವಾಗಿ ಆಂಡ್ರಾಯ್ಡ್ 14 ಬೆಂಬಲದೊಂದಿಗೆ ಕಾರ್ಯ ನಿರ್ವಹಿಸಲಿದೆ. ಹಾಗೆಯೇ 8GB RAMಮತ್ತು 256 GBಹಾಗೂ 12GB RAM ಮತ್ತು 512 GBಇಂಟರ್ ಸ್ಟೋರೇಜ್ ಸಾಮರ್ಥ್ಯವನ್ನು ಹೊಂದಿದೆ.

## ಬೇಬಿ ಕಾರ್ನ್ 'ಪಕೋಡ'

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

5 ಬೇಬಿ ಕಾರ್ನ್, ಕಡಲೇ ಹಿಟ್ಟು-2 ಟೇಬಲ್ ಸ್ಪೂನ್, ಅಕ್ಕಿಹಿಟ್ಟು-1 ಟೇಬಲ್ ಸ್ಪೂನ್, ಕೆಂಪು ಮೆಣಸು ಪುಡಿ-1/2 ಟೀ ಸ್ಪೂನ್, ಪುದೀನಾ ಸೊಪ್ಪು-ಸಣ್ಣಗೆ ಹೆಚ್ಚಿದ್ದು. ರುಚಿಗೆ ತಕ್ಕಷ್ಟು ಉಪ್ಪು, ಎಣ್ಣೆ-ಕರಿಯಲು.

### ಮಾಡುವ ವಿಧಾನ

ಮೊದಲು ಬೇಬಿ ಕಾರ್ನ್ ಅನ್ನು ಉದ್ದಕ್ಕೆ ನಾಲ್ಕು ಭಾಗವಾಗಿ ಸೀಳಿಕೊಳ್ಳಿ. ನಂತರ ಅದನ್ನು ಹದ ಗಾತ್ರದ ಚಿಕ್ಕ ತುಂಡುಗಳಾಗಿ ಕತ್ತರಿಸಿಕೊಳ್ಳಿ. ಒಂದು ಬೌಲ್ ಗೆ ಕಡಲೆ ಹಿಟ್ಟು, ಅಕ್ಕಿ ಹಿಟ್ಟು, ಸಣ್ಣಗೆ ಕತ್ತರಿಸಿದ ಪುದೀನಾ ಸೊಪ್ಪು, ಕೆಂಪು ಮೆಣಸಿನ ಪುಡಿ, ಉಪ್ಪು ಹಾಕಿ ನಂತರ ಅದಕ್ಕೆ ಬೇಬಿ ಕಾರ್ನ್ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ನಂತರ ಸ್ವಲ್ಪ ನೀರು ಚಿಮುಕಿಸಿ ಚೆನ್ನಾಗಿ ಮಿಶ್ರಣ ಮಾಡಿ. ಇದು ತುಂಬಾ ನೀರಾಗಬಾರದು. ನಂತರ ಕುದಿವ ಎಣ್ಣೆಗೆ ಇದನ್ನು ಹಾಕಿ ಡೀಪ್ ಫ್ರೈ ಮಾಡಿದರೆ ರುಚಿಕರವಾದ ಬೇಬಿ ಕಾರ್ನ್ ಪಕೋಡ ಸವಿಯಲು ಸಿದ್ಧ.

## ಆರೋಗ್ಯಕರ ಖರ್ಜೂರ



### ಹೆಲ್ತ್ ಟಿಪ್ಸ್

ಖರ್ಜೂರ ಎಲ್ಲರೂ ಇಷ್ಟಪಡುವ ಹಣ್ಣು. ರುಚಿಗೂ ಸೈ ಆರೋಗ್ಯಕ್ಕೂ ಜೈ. ಪುರಾತನ ಕಾಲದಲ್ಲಿ ಇಜಿಪ್ತಿಯನ್ನರು ಖರ್ಜೂರದಿಂದ ವೈನ್ ತಯಾರಿಸುತ್ತಿದ್ದರಂತೆ. 30 ವೆರೈಟಿ ಖರ್ಜೂರ ಮಾರುಕಟ್ಟೆಯಲ್ಲಿ ಸಿಗುತ್ತದೆ.

ಮಧ್ಯಪ್ರಾಚ್ಯ ರಾಷ್ಟ್ರಗಳ ಪ್ರಮುಖ ಆಹಾರಗಳಲ್ಲಿ ಖರ್ಜೂರವೂ ಒಂದು.

ಸೌದಿ ಅರೇಬಿಯಾ ಹಾಗೂ ಈಜಿಪ್ತ್ ನಲ್ಲಿ ವಿಶಿಷ್ಟ ಬಗೆಯ ಖರ್ಜೂರಗಳು ಸಿಗುತ್ತವೆ. ಪೋಷಕಾಂಶ, ಖನಿಜಾಂಶ, ಎನರ್ಜಿ, ಸಕ್ಕರೆ ಹಾಗೂ ಫೈಬರ್ ಖರ್ಜೂರದಲ್ಲಿ ಹೇರಳವಾಗಿದೆ. ಕ್ಯಾಲ್ಷಿಯಂ, ಕಬ್ಬಿಣ, ರಂಜಕ, ಪೊಟ್ಯಾಶಿಯಂ, ಮ್ಯಾಗ್ನಿಶಿಯಂ ಮತ್ತು ಸತುವಿನ ಅಂಶವಿರೋದ್ರಿಂದ ಖರ್ಜೂರ ಆರೋಗ್ಯಕ್ಕೆ ಒಳ್ಳೆಯದು.

ಸಲೆನಿಯಂ, ಮ್ಯಾಂಗನೀಸ್, ತಾಮ್ರ ಮತ್ತು ಮ್ಯಾಗ್ನಿಶಿಯಂ ಅಂಶಗಳು ಇರುವುದರಿಂದ ಖರ್ಜೂರ ನಿಮ್ಮ ಎಲುಬಿಗೆ ಅತ್ಯಂತ ಅವಶ್ಯಕ. ನಿಮ್ಮ ಎಲುಬಿನ ಆರೋಗ್ಯವನ್ನು ಕಾಪಾಡುತ್ತದೆ.

ಖರ್ಜೂರದಲ್ಲಿ ವಿಟಮಿನ್ ಸಿ ಮತ್ತು ವಿಟಮಿನ್ ಡಿ ಇದೆ. ಖರ್ಜೂರ ತಿಂದ್ರೆ ನಿಮ್ಮ ಚರ್ಮದಲ್ಲಿನ ಪುನಶ್ಚೈತನ್ಯ ಶಕ್ತಿಯನ್ನು ಕಾಪಾಡಿಕೊಳ್ಳಬಹುದು, ನಿಮ್ಮ ಚರ್ಮವನ್ನು ಮೃದುವಾಗಿಡಲು ಕೂಡ ಅದು ಸಹಕಾರಿ. ಚರ್ಮದ ಸಮಸ್ಯೆಗಳು ಬರದಂತೆ ತಡೆಗಟ್ಟುತ್ತದೆ. ಆಯಂಟಿ ಏಜಿಂಗ್ ಕೂಡ ಹೌದು.

ರಾತ್ರಿ ಖರ್ಜೂರವನ್ನು ನೀರಿನಲ್ಲಿ ನೆನೆಸಿ ಬೆಳಗ್ಗೆ ತಿನ್ನಿ. ಅದರಿಂದ ನಿಮ್ಮ ಜೀರ್ಣಕ್ರಿಯೆ ಸುಲಲಿತವಾಗುತ್ತದೆ. ಮಲಬದ್ಧತೆ ಸಮಸ್ಯೆ ನಿವಾರಣೆಯಾಗುತ್ತದೆ.

ಖರ್ಜೂರ ನಿಮ್ಮ ನರಗಳನ್ನು ಸುವ್ಯವಸ್ಥೆಯಲ್ಲಿಡಲು ಸಹಾಯ ಮಾಡುತ್ತದೆ. ಖರ್ಜೂರದಲ್ಲಿರುವ ಪೋಷಕಾಂಶಗಳು ಆರೋಗ್ಯ ವೃದ್ಧಿಸುವುದಲ್ಲದೆ ನರಗಳ ಕಾರ್ಯನಿರ್ವಹಣೆಯನ್ನೂ ಸರಿ ಮಾಡುತ್ತವೆ. ಅಷ್ಟೇ ಅಲ್ಲ ಅದರಲ್ಲಿರುವ ಪೊಟ್ಯಾಶಿಯಂ ಮೆದುಳಿನ ಚುರುಕುತನವನ್ನು ಹೆಚ್ಚಿಸುತ್ತದೆ. ರಕ್ತದೊತ್ತಡವನ್ನು ನಿಯಂತ್ರಣದಲ್ಲಿಡುತ್ತದೆ.ಖರ್ಜೂರದಲ್ಲಿ ಕಬ್ಬಿಣದ ಅಂಶ ಹೇರಳವಾಗಿರುವುದರಿಂದ ಅದನ್ನು ಸೇವಿಸಿದ್ರೆ ಗರ್ಭಿಣಿಯರು ಅನಿಮಿಕ್ ಆಗುವುದಿಲ್ಲ. ಗರ್ಭಕೋಶದ ಸ್ನಾಯುಗಳು ಮೃದುವಾದ ರೀತಿಯಲ್ಲಿ ದೊಡ್ಡದಾಗಲು ಸಹಕರಿಸುತ್ತದೆ. ಹೆರಿಗೆಯ ಸಂದರ್ಭದಲ್ಲಿ ಹೆಚ್ಚು ರಕ್ತಸ್ರಾವ ಆಗದಂತೆ ತಡೆಗಟ್ಟುತ್ತದೆ

## ನೆರಿಗೆ ಹೋಗಲಾಡಿಸಲು ಮನೆ ಮದ್ದು

### ಬ್ಯೂಟಿ ಟಿಪ್ಸ್



ವಯಸ್ಸು ನಲ್ವತ್ತರ ಗಡಿ ದಾಟುತ್ತಿದ್ದಂತೆ ಮುಖದ ಮೇಲೆ ನೆರಿಗೆಗಳು ಕಾಣಿಸಿಕೊಳ್ಳುವುದು ಸಹಜ. ಕೆಲವೊಮ್ಮೆ ಅದು 20-30ರ ಹರೆಯದಲ್ಲೇ ಮೂಡುವುದುಂಟು. ಇದಕ್ಕೆ ಮುಖ್ಯ ಕಾರಣ ಅನುವಂಶೀಯತೆ, ವಿಪರೀತ ಧೂಮಪಾನ ಹಾಗೂ ದೇಹದಲ್ಲಿ ಉಷ್ಣತೆಯ ಪ್ರಮಾಣ ಹೆಚ್ಚುವುದು ಆಗಿರಬಹುದು.

ಒಂದು ತಟ್ಟೆಗೆ ಒಂದು ಚಮಚ ಜೇನು ಹಾಗೂ ಒಂದು ಚಮಚ ಕ್ಯಾರೆಟ್ ರಸ ಬೆರೆಸಿ. ಈ ಮಿಶ್ರಣವನ್ನು ನೆರಿಗೆ ಮೂಡಿರುವ ಭಾಗಕ್ಕೆ ಹಚ್ಚಿ. ಇಪ್ಪತ್ತು ನಿಮಿಷದ ಬಳಿಕ ಮುಖವನ್ನು ತೊಳೆಯಿರಿ.

ಬೆಚ್ಚಗಿನ ನೀರಿಗೆ ಅಡುಗೆ ಸೋಡಾವನ್ನು ಬೆರೆಸಿ. ಕಾಟನ್ ಬಟ್ಟೆಯಿಂದ ಅದನ್ನು ಮುಖಕ್ಕೆ ಲೇಪಿಸಿ. ಐದಾರು ಬಾರಿ ಹೀಗೆ ಮಾಡಿದ ಬಳಿಕ ನಿಮ್ಮ ಮುಖವನ್ನು ಚೆನ್ನಾಗಿ ಒರೆಸಿ ಕ್ಲೀನ್ ಮಾಡಿ. ಇದರಿಂದಲೂ ಮುಖದ ನೆರಿಗೆ ದೂರವಾಗುತ್ತದೆ.

ಜೇನುತುಪ್ಪಕ್ಕೆ ಕಾಲು ಚಮಚ ಗ್ಲಿಸರಿನ್ ಹಾಕಿಯೂ ಇದನ್ನು ಪ್ರಯತ್ನಿಸಬಹುದು. ಈ ಪೇಸ್ಟ್ ಅನ್ನು ರಾತ್ರಿ ಮಲಗುವ ಮುನ್ನ ಹಚ್ಚಿಕೊಂಡು ಮಲಗಿ ಬೆಳಗ್ಗೆದ್ದು ಮುಖ ತೊಳೆದರೆ ಸಾಕು, ಯಾವುದೇ ನೆರಿಗೆ ಮುಖದಲ್ಲಿ ಮೂಡಲು ಇದು ಬಿಡುವುದಿಲ್ಲ. ಇದನ್ನು ವಾರಕ್ಕೊಮ್ಮೆ ಪ್ರಯತ್ನಿಸಿ ನೋಡಿ. ನಿಮ್ಮ ನೆರಿಗೆ ಸಮಸ್ಯೆ ದೂರವಾಗಿ ಮುಖ ಕಾಂತಿ ಪಡೆದುಕೊಳ್ಳುತ್ತದೆ.







## ಟಾಕ್ಸಿಕ್ ಸಿನಿಮಾ ನೋಡುವ ನಿರೀಕ್ಷೆ ವ್ಯಕ್ತಪಡಿಸಿದ ಶಾರುಖ್ ಖಾನ್

ಕೆಜಿಎಫ್, ಕೆಜಿಎಫ್ 2 ಸಿನಿಮಾಗಳ ಯಶಸ್ವಿ ಬಳಿಕ ಟಾಕ್ಸಿಕ್ ಸಿನಿಮಾದಲ್ಲಿ ಬ್ಯುಸಿಯಾಗಿರುವ ನಟ ರಾಕಿಂಗ್ ಸ್ಟಾರ್ ಯಶ್ಗೆ ಬಾಲಿವುಡ್ ನಟ ಶಾರುಖ್ ಖಾನ್ ಸಲಹೆಯನ್ನು ನೀಡಿದ್ದು, ಸಾಮಾಜಿಕ ಜಾಲತಾಣದಲ್ಲಿ ಈ ವಿಡಿಯೋ ವೈರಲ್ ಆಗಿದೆ.

ಆ ವಿಡಿಯೋದಲ್ಲಿ ಖಾನ್ ಅವರು ಕನ್ನಡದ ಸೂಪರ್‌ಸ್ಟಾರ್ಗೆ ಒಂದು ಸಲಹೆಯನ್ನು ನೀಡಿದ್ದಾರೆ.ಯಶ್ ಅವರು ಆದಷ್ಟು ಬೇಗ ತಮ್ಮ ಚಲನಚಿತ್ರಗಳನ್ನು ವೇಗವಾಗಿ ಪೂರ್ಣಗೊಳಿಸುವಂತೆ ಕೇಳಿಕೊಂಡಿದ್ದಾರೆ.

ಅವರು ತಮ್ಮ ಮುಂದಿನ ಸಿನಿಮಾ 'ಟಾಕ್ಸಿಕ್' ನೋಡಲು ಕಾಯುತ್ತಿರುವುದಾಗಿ ಈ ಮೂಲಕ ಪರೋಕ್ಷವಾಗಿ ಹೇಳಿದ್ದಾರೆ.

ಯಶ್ ಬೇಗ ಬೇಗ ಸಿನಿಮಾ ಮಾಡಿ. ಬೆಂಗಳೂರಿನಿಂದ ಬರುವ ಆ ಸಿನಿಮಾಗಾಗಿ ನಾವು ಕಾಯುತ್ತಿದ್ದೇವೆ ಎಂದು ಶಾರುಖ್ ಖಾನ್ ಹೇಳಿದ್ದಾರೆ. ಈ ಮೂಲಕ ಯಶ್ ಸಿನಿಮಾಗಳ ಮೇಲೆ ಶಾರುಖ್ ಖಾನ್ಗೂ ನಿರೀಕ್ಷೆ ಇದೆ ಅನ್ನೋದು ಸ್ಪಷ್ಟವಾಗಿದೆ.

ಕಳೆದ ವರ್ಷ ಶಾರುಖ್ ಖಾನ್ ಅಭಿನಯದ ಮೂರು ಸಿನಿಮಾಗಳು ಬಿಡುಗಡೆ ಕಂಡಿತು. ಮತ್ತೊಂದೆಡೆ, ಯಶ್ ಕಳೆದ ಆರು ವರ್ಷಗಳಲ್ಲಿ ಕೆಜಿಎಫ್ 1 ಮತ್ತು 2 - ಕೇವಲ 2 ಸಿನಿಮಾಗಳನ್ನು ಮಾಡಿದ್ದಾರೆ. ಪ್ರಸ್ತುತ, ಕನ್ನಡ ನಟ ತನ್ನ ಮುಂಬರುವ ಟಾಕ್ಸಿಕ್ ಚಿತ್ರದಲ್ಲಿ ನಿರತರಾಗಿದ್ದಾರೆ.

ಆಗಸ್ಟ್‌ನಲ್ಲಿ ಪೂಜಾ ಸಮಾರಂಭದೊಂದಿಗೆ 'ಟಾಕ್ಸಿಕ್' ಅನ್ನು ಔಪಚಾರಿಕವಾಗಿ ಪ್ರಾರಂಭಿಸಲಾಯಿತು. 'ಕೆಜಿಎಫ್' ಸರಣಿಯ ದೈತ್ಯಾಕಾರದ ಯಶಸ್ಸಿನ ನಂತರ, ಯಶ್ ರಾಷ್ಟ್ರೀಯ ಪ್ರಶಸ್ತಿ ವಿಜೇತ ಮಲಯಾಳಂ ಚಲನಚಿತ್ರ ನಿರ್ಮಾಪಕಿ ಗೀತು ಮೋಹನ್ದಾಸ್ ಅವರೊಂದಿಗೆ ಕೈಜೋಡಿಸುತ್ತಿದ್ದಾರೆ. ಚಿತ್ರದಲ್ಲಿ ನಯನತಾರಾ, ಹುಮಾ ಖುರೇಷಿ, ಕಿಯಾರಾ ಅಡ್ವಾಣಿ ಮತ್ತು ಮಲಯಾಳಂ ನಟ ಶೈನ್ ಟಾಮ್ ಚಾಕೊ ಪ್ರಮುಖ ಪಾತ್ರಗಳಲ್ಲಿದ್ದಾರೆ.

ಚಿತ್ರಕ್ಕೆ ಕೆವಿಎನ್ ಪ್ರೊಡಕ್ಷನ್ಸ್ ಮತ್ತು ಯಶ್ ಅವರ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ಸ್ ಬಂಡವಾಳ ಹೂಡುತ್ತಿವೆ.ಈ ಸಿನಿಮಾ ಅಲ್ಲದೆ ಯಶ್ ರಾಮಾಯಣದಲ್ಲಿ ರಾವಣನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ರಣಬೀರ್ ಕಪೂರ್ ಮತ್ತು ಸಾಯಿ ಪಲ್ಲವಿ ಭಗವಾನ್ ರಾಮ ಮತ್ತು ಸೀತೆಯ ಪಾತ್ರದಲ್ಲಿ ನಟಿಸಿರುವ ಚಿತ್ರಕ್ಕೆ ಅವರು ಸಹ-ನಿರ್ಮಾಣ ಮಾಡುತ್ತಿದ್ದಾರೆ.

## ಕರ್ನಾಟಕದಲ್ಲಿರುವ ತನ್ನ ಕ್ಲಿನಿಕ್‌ಗಳಿಗೆ ಎರಡನೇ ಬಾರಿಗೆ, ಎನ್‌ಎಬಿಎಚ್ ಮಾನ್ಯತೆ ಪಡೆದ ಅಪೊಲೊ ಕ್ಲಿನಿಕ್

ಅಪೋಲೋ ಕ್ಲಿನಿಕ್, ಭಾರತದ ಬಹು-ಪರಿಣತಿಗಳ ಪ್ರಮುಖ ಚಿಕಿತ್ಸಾಲಯಗಳ ಸರಪಳಿಗಳಲ್ಲಿ ಒಂದಾಗಿದೆ. ಅಪೋಲೋ ಕ್ಲಿನಿಕ್ ಈಗ ಅಲೋಪತಿಕ್ ಕ್ಲಿನಿಕ್ ಸ್ಟ್ಯಾಂಡರ್ಡ್ಗಾಗಿ ಎನ್ ಎಬಿಎಚ್ (ಹಾಸ್ಪಿಟಲ್ಸ್ ಮತ್ತು ಹೆಲ್ತ್-ಕೇರ್ ಒದಗಿಸುವವರಿಗೆ ರಾಷ್ಟ್ರೀಯ ಮಾನ್ಯತೆ ನೀಡುವ ಮಂಡಳಿ) ಮರು-ಪ್ರಮಾಣೀಕರಣವನ್ನು ಪಡೆಯುವ ಮೂಲಕ ಹೊಸ ಮಾನದಂಡವನ್ನೆ ಸೃಷ್ಟಿಸಿದೆ. ಕೋರಮಂಗಲದಲ್ಲಿ ಕೇಂದ್ರ ಕಛೇರಿಯನ್ನು ಹೊಂದಿರುವ ಈ ಸಂಸ್ಥೆ, ಈ ಮನ್ನಣೆಯನ್ನು ಪಡೆದ ಕರ್ನಾಟಕದ ಪ್ರಪ್ರಥಮ ಕ್ಲಿನಿಕ್ ಆಗಿದೆ. ಈ ವಿಶಿಷ್ಟ ಸಾಧನೆಯ ಕುರಿತು ಮಾತನಾಡಿದ ಅಪೊಲೊ ಆರೋಗ್ಯ ಮತ್ತು ಜೀವನಶೈಲಿಯ ಗುಣಮಟ್ಟ ಮುಖ್ಯಸ್ಥ ಗೌರವ್ ಲೋರಿಯಾ, ''ನಮ್ಮ ಅಪೊಲೊ ಕ್ಲಿನಿಕ್ ಕೋರಮಂಗಲ ಕೇಂದ್ರಕ್ಕೆ ಎನ್‌ಎಬಿಎಚ್ ಮರು-ಮಾನ್ಯತೆ ದೊರೆತಿರುವುದು ನಮ್ಮನ್ನು ಇನ್ನಷ್ಟು ವಿನಮ್ರರನ್ನಾಗಿಸಿದೆ. ಈ ಮನ್ನಣೆಯು ನಮ್ಮ ರೋಗಿಗಳಿಗೆ ಅತ್ಯುನ್ನತ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುವ ನಮ್ಮ ಅಚಲ ಬದ್ಧತೆಗೆ ಸಾಕ್ಷಿಯಾಗಿದೆ. ಎನ್‌ಎಬಿಎಚ್ ಮಾನ್ಯತೆ ಒಂದು ಕಠಿಣ ಪ್ರಕ್ರಿಯೆಯಾಗಿದ್ದು, ರೋಗಿಗಳ ಸುರಕ್ಷತೆ, ಆರೈಕೆಯ ಗುಣಮಟ್ಟ ಮತ್ತು ಕ್ಲಿನಿಕಲ್ ಫಲಿತಾಂಶಗಳ ಕಟ್ಟುನಿಟ್ಟಾದ ಮಾನದಂಡಗಳನ್ನು ಅನುಸರಿಸುವ ಅಗತ್ಯವಿರುತ್ತದೆ. ಈ ಮಾನ್ಯತೆಯನ್ನು ಸಾಧಿಸುವುದು ನಿರಂತರ ಸುಧಾರಣೆಗೆ ನಮಗಿರುವ ಸಮರ್ಪಣೆ ಮತ್ತು ನಮ್ಮ ಕಾರ್ಯಾಚರಣೆಗಳ ಪ್ರತಿಯೊಂದು ಅಂಶದಲ್ಲೂ ಶ್ರೇಷ್ಠತೆಯನ್ನು ಸಾಧಿಸುವುದಕ್ಕಾಗಿ ನಮಗಿರುವ ತುಡಿತವನ್ನು ತೋರಿಸುತ್ತದೆ. ಅಪೊಲೊ ಹೆಲ್ತ್ ಮತ್ತು ಲೈಫ್‌ಸ್ಟೈಲ್ ಪರವಾಗಿ ನಾನು ಇಡೀ ತಂಡಕ್ಕೆ, ಅವರ ಕಠಿಣ ಪರಿಶ್ರಮ ಮತ್ತು ಸಮರ್ಪಣೆಗಾಗಿ, ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸಲು ಬಯಸುತ್ತೇನೆ. ಫೆಬ್ರವರಿ 2024 ರಲ್ಲಿ, ಕೋರಮಂಗಲ ಕ್ಲಿನಿಕ್ ತನ್ನ 2 ನೇ ಆವೃತ್ತಿಯ ಮಾನ್ಯತೆಯ ಭಾಗವಾಗಿ ಎನ್‌ಎಬಿಎಚ್ ನವೀಕರಣ ಮೌಲ್ಯಮಾಪನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿತು. ಅಲೋಪತಿಕ್ ಕ್ಲಿನಿಕ್ ಸ್ಟ್ಯಾಂಡರ್ಡ್ಸ್, ಆವೃತ್ತಿ-1 ರ ಅಡಿಯಲ್ಲಿ ಮರು-ಮಾನ್ಯತೆಯನ್ನು ಪಡೆದುಕೊಂಡಿತು. ಎನ್ ಎಬಿಎಚ್ ಮಾನ್ಯತೆಯನ್ನು ಹೊಂದಿರುವುದಷ್ಟೇ ಅಲ್ಲದೆ ಅಪೊಲೊ ಕ್ಲಿನಿಕ್ಗಳು ಹಲವಾರು ಪ್ರಮುಖ ಉಪಕ್ರಮಗಳ ಮೂಲಕ ನಿರಂತರ ಗುಣಮಟ್ಟದ ಸುಧಾರಣೆ ಮತ್ತು ರೋಗಿಗಳ ಸುರಕ್ಷತೆಗೆ ಬದ್ಧವಾಗಿವೆ, ಅವುಗಳಲ್ಲಿ ಮುಖ್ಯವಾದವು:

ಕ್ವಾಲಿಟಿ ಫಾರ್ ಎಕ್ಸಲೆನ್ಸ್ (ಕಿ4ಇ) ಕಾರ್ಯಕ್ರಮ: ನಿರಂತರ ಮೇಲ್ವಿಚಾರಣೆ ಮತ್ತು ಕ್ಲಿನಿಕಲ್ ಮತ್ತು ಕ್ಲಿನಿಕಲ್-ಅಲ್ಲದ ಪ್ರಕ್ರಿಯೆಗಳ ವರ್ಧನೆ ಮತ್ತು ಕ್ಲಿನಿಕಲ್ ಫಲಿತಾಂಶಗಳ ಸುಧಾರಣೆಯ ಬಗ್ಗೆ? ಸುರಕ್ಷಿತ ಪರಿಸರವನ್ನು ಖಚಿತಪಡಿಸಿಕೊಳ್ಳಲು ಮತ್ತು ಸಂಭಾವ್ಯ ಅಪಾಯಗಳನ್ನು ಪೂರ್ವಭಾವಿಯಾಗಿ ಪರಿಹರಿಸಲು ವಾಡಿಕೆಯ ಸುರಕ್ಷತೆ ಮತ್ತು ಸೌಲಭ್ಯಗಳ ಲೆಕ್ಕಪರಿಶೋಧನೆಗಳ ಅಳವಡಿಕೆ.? ನಮ್ಮ ರೋಗಿಗಳಿಗೆ ಅಪಾಯಗಳನ್ನು ಕಡಿಮೆ ಮಾಡಲು ಬಲವಾದ, ಸೋಂಕು ತಡೆಗಟ್ಟುವಿಕೆ ಮತ್ತು ನಿಯಂತ್ರಣ ಮತ್ತು ಔಷಧಿ ಸುರಕ್ಷತೆ ಪ್ರೋಟೋಕಾಲ್ಗಳ ಅನುಷ್ಠಾನ ಮತ್ತು ಮೇಲ್ವಿಚಾರಣೆ ಈ ಅರ್ಹತೆ ಬರುವುದಕ್ಕೆ ಕ್ಲಿನಿಕ್ ತೆಗೆದುಕೊಂಡ ಇತರ ಕೆಲವು ಪ್ರಮುಖ ಉಪಕ್ರಮಗಳು ಎಂದರೆ,ಕಿಒಖ (ಇನ್ನೋವೇಟಿವ್ ಕ್ಯೂ ಮ್ಯಾನೇಜ್ಮೆಂಟ್ ಸಿಸ್ಟಮ್ಸ್). ಇದರ ಗುರಿ, ರೋಗಿಗಳಿಗೆ ಪ್ರಕ್ರಿಯೆಗಳನ್ನು ಸುಗಮಗೊಳಿಸುವುದು ಮತ್ತು ಸುಲಭವಾಗಿ ಗೋಚರಿಸುವಂತೆ ಮಾಡುವುದು. ಅಪೊಲೊ ಕ್ಲಿನಿಕ್, ಪಡೆದ ಎರಡನೇ ರಾಷ್ಟ್ರವ್ಯಾಪಿ ಎನ್‌ಎಬಿಎಚ್ ಮಾನ್ಯತೆ. ಚೆನ್ನೈನಲ್ಲಿರುವಅಣ್ಣಾನಗರ ಕೇಂದ್ರಕ್ಕೆ ಮೊದಲ ಮನ್ನಣೆ ಸಿಕ್ಕಿತ್ತು. ಅಪೊಲೊ ಕ್ಲಿನಿಕ್ ಉತ್ತಮ ಗುಣಮಟ್ಟದಆರೋಗ್ಯ ಸೇವೆಗಳನ್ನು ಒದಗಿಸುತ್ತದೆ ಮತ್ತು ಇಡೀ ಕುಟುಂಬದ ದಿನನಿತ್ಯದ ಆರೋಗ್ಯ ಅಗತ್ಯತೆಗಳನ್ನು ಪೂರೈಸುತ್ತದೆ. ರೋಗಿಗಳ ಆರೈಕೆ, ಮೂಲಸೌಕರ್ಯ ಮತ್ತು ಕಾರ್ಯಾಚರಣೆಪ್ರಕ್ರಿಯೆಗಳಂತಹ ವಿವಿಧ ಅಂಶಗಳನ್ನು ಮೌಲ್ಯಮಾಪನ ಮಾಡುವ ಮೂಲಕ ಆರೋಗ್ಯ ಸೌಲಭ್ಯಗಳಕಠಿಣ ಮೌಲ್ಯಮಾಪನ ಮಾಡಿದ ನಂತರವೇ ಎನ್‌ಎಬಿಎಚ್ ಮಾನ್ಯತೆಯನ್ನು ನೀಡಲಾಗುತ್ತದೆ.






ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ದ್ರವ್ಯ ಲಾಭ, ಬಂಧು ಮಿತ್ರರ ಸಮಾಗಮ, ವ್ಯಾಪಾರ ಉದ್ಯೋಗದಲ್ಲಿ ಲಾಭ, ಮನಸ್ಸಿನಲ್ಲಿ ಭಯ ಭೀತಿ.

**ವೃಷಭ:** ಸ್ಥಳ ಬದಲಾವಣೆ, ಮಂಗಳ ಕಾರ್ಯ ಜರಗುವಿಕೆ, ಅಮೂಲ್ಯ ವಸ್ತುಗಳನ್ನು ಕಳೆದುಕೊಳ್ಳುವಿರಿ, ಯಾರನ್ನು ಹೆಚ್ಚಾಗಿ ನಂಬಬೇಡಿ.

**ಮಿಥುನ:** ನಾನಾ ರೀತಿಯ ಸಂಪಾದನೆ, ಉನ್ನತ ಸ್ಥಾನಮಾನ, ಭಾಗ್ಯ ವೃದ್ಧಿ, ಮನಃಶಾಂತಿ, ಅನ್ಯರಲ್ಲಿ ದ್ವೇಷ, ಅನಾರೋಗ್ಯ.

**ಕಟಕ:** ಕುಟುಂಬ ಸೌಖ್ಯ, ಸ್ತ್ರೀಯರಿಗೆ ಶುಭ, ಸುಖ ಭೋಜನ, ವಿವಾಹ ಯೋಗ, ಸಲ್ಲದ ಅಪವಾದ ಎಚ್ಚರ.

**ಸಿಂಹ:** ವಿಪರೀತ ಹಣ ವ್ಯಯ, ಕಾರ್ಯವಿಕಲ್ಪ, ದುಃಖದಾಯಕ ಪ್ರಸಂಗಗಳು, ಗುಪ್ತ ವಿದ್ಯೆಗಳಲ್ಲಿ ಆಸಕ್ತಿ.

**ಕನ್ಯಾ:** ದ್ರವ್ಯ ನಾಶ, ಪರರಿಗೆ ವಂಚಿಸುವುದು, ಋಣ ಭಾದೆ, ಪ್ರಿಯ ಜನರ ಭೇಟಿ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ತುಲಾ:** ಅಲ್ಪ ಲಾಭ, ಧನ ಹಾನಿ, ಕುಟುಂಬದಲ್ಲಿ ಕಲಹ, ಶತ್ರುಗಳಿಂದ ತೊಂದರೆ, ಆರ್ಥಿಕ ಪರಿಸ್ಥಿತಿ ಏರುಪೇರು.

**ವೃಶ್ಚಿಕ:** ಸಲ್ಲದ ಅಪವಾದ ನಿಂದನೆ, ಬುದ್ಧಿ ಕ್ಲೇಶ, ಕೆಲಸ ಕಾರ್ಯಗಳಲ್ಲಿ ವಿಘ್ನ, ಮಾನಹಾನಿ.

**ಧನಸ್ಸು:** ಉದ್ಯೋಗದಲ್ಲಿ ಅಭಿವೃದ್ಧಿ, ವ್ಯಾಪಾರದಲ್ಲಿ ಲಾಭ, ರಾಜಕೀಯ ಕ್ಷೇತ್ರದಲ್ಲಿ ಮನ್ನಣೆ, ತೀರ್ಥಯಾತ್ರೆ ದರ್ಶನ, ದೂರ ಪ್ರಯಾಣ.

**ಮಕರ:** ದಾಂಪತ್ಯದಲ್ಲಿ ಸುಖ ಶಾಂತಿ, ಆಕಸ್ಮಿಕ ಧನ ಲಾಭ, ಧಾರ್ಮಿಕ ವಿಷಯಗಳಲ್ಲಿ ಆಸಕ್ತಿ, ವಸ್ತ್ರಾಭರಣ ಖರೀದಿ.

**ಕುಂಭ:** ಭೂ ಲಾಭ, ವಾಹನದಿಂದ ಲಾಭ, ಹಿತಶತ್ರುಗಳಿಂದ ತೊಂದರೆ, ಎಲ್ಲಿ ಹೋದರು ಅಶಾಂತಿ, ದೇಹಾಲಸ್ಯ, ಚಂಚಲ ಮನಸ್ಸು.

**ಮೀನ:** ವಿದ್ಯಾರ್ಥಿಗಳಲ್ಲಿ ಪ್ರಶಂಸೆ, ನೌಕರಿಯಲ್ಲಿ ಕಿರಿಕಿರಿ, ಧನವ್ಯಯ, ಅವಮಾನ, ಸ್ಥಗಿತ ಕಾರ್ಯಗಳು ಮುಂದುವರೆಯುತ್ತವೆ.

## ಡಾಗ್ ಫಿಲ್ಮ್ ಫೆಸ್ಟಿವಲ್




ಡಾಗ್ ಫಿಲ್ಮ್ ಫೆಸ್ಟಿವಲ್ ಅನ್ನು ವಾರ್ಷಿಕವಾಗಿ ಅಕ್ಟೋಬರ್ ಅಥವಾ ನವೆಂಬರ್ನಲ್ಲಿ ಆಚರಿಸಲಾಗುತ್ತದೆ. ಈ ವರ್ಷ, ಇದು ನವೆಂಬರ್ 6 ರಂದು ನಡೆಯುತ್ತದೆ. ಇದು ಕಿರುಚಿತ್ರಗಳ ಮೂಲಕ ನಮ್ಮ ತುಪ್ಪುಳಿನಂತಿರುವ ಸ್ನೇಹಿತರನ್ನು ಪ್ರಶಂಸಿಸಲು ಮತ್ತು ಅವರೊಂದಿಗೆ ನಾವು ಹೊಂದಿರುವ ಬಂಧಗಳನ್ನು ಪಾಲಿಸಲು ಅನುವು ಮಾಡಿಕೊಡುತ್ತದೆ.

ನಾಯಿಗಳು ಸಾಕುಪ್ರಾಣಿಗಳಲ್ಲಿ ನಾವು ಬಯಸುವ ಪ್ರತಿಯೊಂದು ಗುಣವನ್ನು ಹೊಂದಿವೆ: ನಿರ್ಭೀತ ರಕ್ಷಕ, ಸಾರ್ವಕಾಲಿಕ ಒಡನಾಡಿ, ಅನಿಯಮಿತ ಸ್ನಗ್ಲ್ಸ್ ಮತ್ತು ಉತ್ಸಾಹದಿಂದ ಬಾಲ ಅಲ್ಲಾಡಿಸುವಿಕೆ. ಹೆಚ್ಚಿನ ಮಾಲೀಕರಿಗೆ, ನಾಯಿಗಳು ಅವರ ಕುಟುಂಬದ ಭಾಗವಾಗಿದೆ. ಆನುವಂಶಿಕ ಅಧ್ಯಯನಗಳ ಪ್ರಕಾರ, ನಾಯಿಗಳು ತೋಳಗಳಿಂದ ನೇರವಾಗಿ ವಂಶಸ್ಥರು. ಪ್ರಕ್ರಿಯೆಯು ನಿಧಾನವಾಗಿತ್ತು ಮತ್ತು 27,000 ಮತ್ತು 40,000 ವರ್ಷಗಳ ಹಿಂದೆ ಎಲ್ಲೋ ಸಂಭವಿಸಿತು. ಇಂದು, ನೂರಾರು ನಾಯಿ ತಳಿಗಳಿವೆ, ಅಲಾಸ್ಕನ್ ಮಲಾಮ್ಯೂಟ್ಸ್ನಿಂದ ರೊಟ್ವೀಲರ್ಗಳಿಂದ ವೆಲ್ಷ್ ಕಾರ್ಗಿಸ್ವರೆಗೆ.

ನಾಯಿಗಳಿಗೆ ಹೋಲಿಸಿದರೆ ಚಲನಚಿತ್ರಗಳು ಮತ್ತು ಚಲನಚಿತ್ರೋತ್ಸವಗಳ ಇತಿಹಾಸವು ತುಲನಾತ್ಮಕವಾಗಿ ಹೊಸದು. ಸಿನಿಮಾಟೋಗ್ರಫಿ ಕಲೆಯು 1890ರ ಸುಮಾರಿಗೆ ವಿಕಸನಗೊಂಡಿತು. ದಿ ಸ್ಟೋರಿ ಆಫ್ ದಿ ಕೆಲ್ಲಿ ಗ್ಯಾಂಗ್ ಮೊದಲ ವೈಶಿಷ್ಟ್ಯ-ಉದ್ದದ ಬಹು-ರೀಲ್ ಚಲನಚಿತ್ರವಾಗಿದೆ. ಇದು 1906 ರಲ್ಲಿ ಬಿಡುಗಡೆಯಾಯಿತು. ಚಲನಚಿತ್ರ ಬಿಡುಗಡೆಯಾದ ನಂತರ ಚಲನ ಚಿತ್ರಗಳ ವಿಕಾಸವು ವೇಗಗೊಂಡಿತು. 1914 ರ ಹೊತ್ತಿಗೆ, ಧ್ವನಿ-ಸಿಂಕ್ರೊನೈಸ್ ಮಾಡಿದ ಚಲನಚಿತ್ರಗಳನ್ನು ರಚಿಸಲಾಯಿತು. ಚಾರ್ಲ್ಸ್ ಟೇಜ್ ರಸೆಲ್ ಮೊದಲ ಚಲನಚಿತ್ರವನ್ನು ಚಿತ್ರ ಸ್ಲೈಡ್ಗಳು ಮತ್ತು ಚಲಿಸುವ ಚಿತ್ರಗಳನ್ನು ಸಂಗೀತ ಮತ್ತು ಸಂಭಾಷಣೆಯ ದಾಖಲೆಗಳೊಂದಿಗೆ ಸಿಂಕ್ರೊನೈಸ್ ಮಾಡಿದರು.

ಸ್ವಲ್ಪ ಸಮಯದ ನಂತರ, ನಾಯಿಗಳು ಚಲನೆಗಳಲ್ಲಿ ಕಾಣಿಸಿಕೊಳ್ಳಲು ಪ್ರಾರಂಭಿಸಿದವು. ಉದಾಹರಣೆಗೆ, ಮೈನೆನ ತ್ರಿವರ್ಣ ಸ್ಕಾಚ್ ಕೋಲಿಯಾದ ಜೀನ್ 25 ಕ್ಕೂ ಹೆಚ್ಚು ಮೂಕಿ ಚಿತ್ರಗಳಲ್ಲಿ ಕಾಣಿಸಿಕೊಂಡರು ಮತ್ತು ಚಲನಚಿತ್ರದಲ್ಲಿ ಕಾಣಿಸಿಕೊಂಡ ಮೊದಲ ನಾಯಿ ಎನಿಸಿಕೊಂಡರು. ಜೀನ್ ನಂತರ, ಚೆಡ್ಡಾರ್ ಮತ್ತು ವಿಶ್ಬೋನ್ನಂತಹ ಹಲವಾರು ನಾಯಿಗಳನ್ನು ನಿಷ್ಠಾವಂತ ಸಾಕುಪ್ರಾಣಿಗಳು, ಸುಂದರ ಸಂರಕ್ಷಕರು ಮತ್ತು ಉತ್ತಮ ಸ್ನೇಹಿತರಂತೆ ಬಿತ್ತರಿಸಲಾಯಿತು.

## ಭಾರತ ಮೂಲದ 9 ಅಭ್ಯರ್ಥಿಗಳ ಅದೃಷ್ಟ ಪರೀಕ್ಷೆ

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷೀಯ ಚುನಾವಣೆ ಜತೆಗೆ ಅಲ್ಲಿನ ಸಂಸತ್ ಕೆಳಮನೆ, ಹೌಸ್ ಆಫ್ ರೆಪ್ರಸೆಂಟೇಟಿವ್‌ಗೆ 9 ಮಂದಿ ಭಾರತೀಯ-ಅಮೆರಿಕನ್ ಸಮುದಾಯದವರೂ ಸ್ಪರ್ಧಿಸಿದ್ದಾರೆ. ಈ ಪೈಕಿ ಐವರು ಪುನರಾಯ್ಕೆ ಬಯಸಿದ್ದಾರೆ.

ವರ್ಜೀನಿಯಾ ಮತ್ತು ಈಸ್ಟ್ ಕೋಸ್ಟ್‌ನಿಂದ ಸುಹಾಸ್ ಸುಬ್ರಹ್ಮಣ್ಯನ್ ಕಣಕ್ಕೆ ಇಳಿದಿದ್ದು, ಗೆದ್ದರೆ ಇತಿಹಾಸ ನಿರ್ಮಿಸಲಿದ್ದಾರೆ.

ಸದ್ಯ ಅವರು ವರ್ಜೀನಿಯಾ ಪ್ರಾಂತ್ಯದ ಸೆನೆಟರ್. ವೃತ್ತಿಯಲ್ಲಿ ವೈದ್ಯರಾಗಿರುವ ಡಾ.ಆಯಮಿ ಬೇರಾ ಕ್ಯಾಲಿಫೋರ್ನಿಯಾದಿಂದ, ಇಲಿನಾಯ್ಸ್‌ನಿಂದ ರಾಜಾ ಕೃಷ್ಣಮೂರ್ತಿ, ಕ್ಯಾಲಿಫೋರ್ನಿಯಾದಿಂದ ರೋ ಖನ್ನಾ, ಮಿಚಿಗನ್ ಸಂಸದ ಶ್ರೀ ಥಾಣೆದಾರ್ ಪುನರಾಯ್ಕೆ ಬಯಸಿದ್ದಾರೆ ಅರಿಜೋನಾ ಪ್ರಾಂತ್ಯದ ಪ್ರತಿನಿಧಿಯಾಗಿದ್ದ ಡಾ.ಅಮಿಶ್ ಶಾ ಅವರು ಮೊದಲ ಬಾರಿಗೆ ಸಂಸತ್ನ ಅರಿಜೋನಾ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ. ನ್ಯೂಜೆರ್ಸಿಯಿಂದ ಡಾ.ರಾಕೇಶ್ ಮೋಹನ್, ಡಾ.ಪ್ರಶಾಂತ್ ರೆಡ್ಡಿ ಕನ್ಸಾಸ್‌ನಿಂದ, ವಾಷಿಂಗ್ಟನ್ನಿಂದ ಪ್ರಮೀಳಾ ಜಯಪಾಲ್ ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ.



## ರಕ್ಷಣಾ ಸಚಿವರನ್ನು ವಜಾಗೊಳಿಸಿದ ಇಸ್ರೇಲ್ ಪ್ರಧಾನಿ ನೆತನ್ಯಾಹು

**ಇಸ್ರೇಲ್:** ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ವಿಶ್ವಾಸದ ಕೊರತೆಯನ್ನು ಉಲ್ಲೇಖಿಸಿ ತಮ್ಮ ರಕ್ಷಣಾ ಸಚಿವ ಯೋವ್ ಶೌರ್ಯ್ ಅವರನ್ನು ವಜಾಗೊಳಿಸಿದ್ದಾರೆ ಎಂದು ಟೈಮ್ಸ್ ಆಫ್ ಇಸ್ರೇಲ್ ವರದಿ ಮಾಡಿದೆ.

ಲಿಕುಡ್ ಪಕ್ಷದೊಳಗಿನ ದೀರ್ಘಕಾಲದ ಪ್ರತಿಸ್ಪರ್ಧಿಯಾಗಿದ್ದ ಗ್ಯಾಲಂಟ್ ಅವರ ಸ್ಥಾನವನ್ನು ಇಸ್ರೇಲ್ನ ವಿದೇಶಾಂಗ ಸಚಿವ ಇಸ್ರೇಲ್ ಕಾಟ್ಜ್ ತುಂಬಲಿದ್ದಾರೆ.

ಟೈಮ್ಸ್ ಆಫ್ ಇಸ್ರೇಲ್ ಪ್ರಕಾರ, ಖಾತೆಯಿಲ್ಲದ ಸಚಿವ ಗಿಡಿಯನ್ ಸಾರ್ ಕಾಟ್ಜ್ ಅವರ ಸ್ಥಾನವನ್ನು ತುಂಬಲಿದ್ದಾರೆ.

ರಕ್ಷಣಾ ಸಚಿವರಾಗಿ ತಮ್ಮ ಅಧಿಕಾರಾವಧಿ ಈ ಪತ್ರವನ್ನು ಸ್ವೀಕರಿಸಿದ 48 ಗಂಟೆಗಳ ನಂತರ ಕೊನೆಗೊಳ್ಳುತ್ತದೆ ಎಂದು ನೆತನ್ಯಾಹು ಗ್ಯಾಲಂಟ್ಗೆ ಮಾಹಿತಿ ನೀಡಿದ್ದಾರೆ ಎಂದು ಪ್ರಧಾನಿ ಕಚೇರಿಯ ಹೇಳಿಕೆಯನ್ನು ಉಲ್ಲೇಖಿಸಿ ಟೈಮ್ಸ್ ಆಫ್ ಇಸ್ರೇಲ್ ವರದಿ ಮಾಡಿದೆ.

ರಕ್ಷಣಾ ಸಚಿವರಾಗಿ ನಿಮ್ಮ ಸೇವೆಗಾಗಿ ನಾನು ನಿಮಗೆ ಧನ್ಯವಾದ ಹೇಳಲು ಬಯಸುತ್ತೇನೆ ಎಂದು ಪತ್ರದಲ್ಲಿ ಮುಕ್ತಾಯಗೊಳಿಸಲಾಗಿದೆ ಎಂದು ಟೈಮ್ಸ್ ಆಫ್ ಇಸ್ರೇಲ್ ವರದಿ ಮಾಡಿದೆ. ದುರದೃಷ್ಟವಶಾತ್, ಯುದ್ಧದ ಮೊದಲ ತಿಂಗಳುಗಳಲ್ಲಿ, ನಂಬಿಕೆ ಇತ್ತು ಮತ್ತು ಬಹಳ ಫಲಪ್ರದ ಕೆಲಸವಿತ್ತು, ಕೊನೆಯ ತಿಂಗಳುಗಳಲ್ಲಿ ಈ ನಂಬಿಕೆ ನನ್ನ ಮತ್ತು ರಕ್ಷಣಾ ಸಚಿವರ ನಡುವೆ ಬಿರುಕು ಬಿಟ್ಟಿತು ಎಂದು ನೆತನ್ಯಾಹು



ವೀಡಿಯೊ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಯುದ್ಧದ ನಿರ್ವಹಣೆಯ ಬಗ್ಗೆ ಅವರು ಭಿನ್ನಾಭಿಪ್ರಾಯ ಹೊಂದಿದ್ದರು ಮತ್ತು ಗ್ಯಾಲಂಟ್ ಹೇಳಿಕೆಗಳನ್ನು ನೀಡಿದ್ದಾರೆ ಮತ್ತು ಕ್ಯಾಬಿನೆಟ್ ನಿರ್ಧಾರಗಳಿಗೆ ವಿರುದ್ಧವಾದ ಕ್ರಮಗಳನ್ನು ತೆಗೆದುಕೊಂಡಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ಇಸ್ರೇಲ್ ನ ಶತ್ರುಗಳಿಗೆ ಗ್ಯಾಲಂಟ್ ಪರೋಕ್ಷವಾಗಿ ಸಹಾಯ ಮಾಡುತ್ತಿದ್ದಾರೆ ಎಂದು ನೆತನ್ಯಾಹು ಆರೋಪಿಸಿದರು.

## ವಾಜಪೇಯಿ ಇದ್ದಿದ್ರೆ ಜಮ್ಮು-ಕಾಶ್ಮೀರ ಪರಿಸ್ಥಿತಿ ಬೇರೆಯೇ ಆಗ್ತಿತ್ತು- ಸಿಎಂ ಅಬ್ದುಲ್ಲಾ

**ನವದೆಹಲಿ:** ಜಮ್ಮು ಕಾಶ್ಮೀರದ ಕುರಿತಾಗಿ ದಿವಂಗತ, ಮಾಜಿ ಪ್ರಧಾನಿ ವಾಜಪೇಯಿ ಅವರ ಮಾರ್ಗಸೂಚಿಗಳನ್ನು ಕಾರ್ಯಗತಗೊಳಿಸಿ ಅನುಸರಿಸುತ್ತಿದ್ದರೆ, ನಾವು ಪ್ರಸ್ತುತ ಇರುವ ಸ್ಥಿತಿಯಲ್ಲಿರುತ್ತಿರಲಿಲ್ಲ ಎಂದು ಜಮ್ಮು ಮತ್ತು ಕಾಶ್ಮೀರದ ಸಿಎಂ ಓಮರ್ ಅಬ್ದುಲ್ಲಾ ವಿಷಾದ ವ್ಯಕ್ತಪಡಿಸಿದರು. ಜಮ್ಮು ಕಾಶ್ಮೀರ ವಿಧಾನಸಭೆಯಲ್ಲಿ ಸಂತಾಪ ಸೂಚಿಸಿ ಮಾತನಾಡಿ, ಜಮ್ಮು ಕಾಶ್ಮೀರ ವಿಭಜಿತ ಭಾಗಗಳ ಜನರನ್ನು ಸಂಪರ್ಕಿಸಲು ರಸ್ತೆಗಳನ್ನು ವಾಜಪೇಯಿ ತೆರೆದವರು. ಜನರು ಮತ್ತು ನಾಗರಿಕ ಸಮಾಜ ಸಂಪರ್ಕಿಸುವ ಉದ್ದೇಶವಾಗಿತ್ತು ಎಂದು ವಾಜಪೇಯಿ ಅವರ ದೂರದೃಷ್ಟಿ ಬಗ್ಗೆ ಸ್ಮರಿಸಿದರು. ಅವರ ಮಾರ್ಗಸೂಚಿ ಪಾಲಿಸಿದ್ದಿದ್ದರೆ ರಾಜ್ಯ ಕೇಂದ್ರಾಡಳಿತ ಪ್ರದೇಶಕ್ಕೆ ಇಳಿಯುತ್ತಿರಲಿಲ್ಲ ಎಂದರು. ವಾಜಪೇಯಿ ಅವರು ಪ್ರಧಾನಿಯಾಗಿದ್ದ ಸಂದರ್ಭದ ದೆಹಲಿ ತಿರಸ್ಕರಿಸಿದ್ದ ಜಮ್ಮು ಮತ್ತು ಕಾಶ್ಮೀರಕ್ಕೆ ಹೆಚ್ಚಿನ ಸ್ವಾಯತ್ತತೆಗಾಗಿ ಸಭೆಯು ನಿರ್ಣಯವನ್ನು ಅಂಗೀಕರಿಸಿದಾಗ, ವಾಜಪೇಯಿ ತಮ್ಮ ತಪ್ಪನ್ನು ಅರಿತುಕೊಂಡರು. ಅಲ್ಲದೇ ಈ ಬಗ್ಗೆ ರಾಜ್ಯ ಸರ್ಕಾರದ ಜೊತೆ ಸಂವಾದದಲ್ಲಿ ಅವರು ಕಾನೂನು ಸಚಿವರನ್ನೂ ನೇಮಿಸಿದರು. ಆದರೆ, ಪ್ರಾವಿಡೆನ್ಸ್ ಅದನ್ನು ಹೊಂದಿದ್ದಂತೆ ಮುಂದೆ ಅವರು ಅಸುನೀಗಿದರು ಎಂದು ಸಿಎಂ ಸ್ಮರಿಸಿಕೊಂಡರು.



## ಸರಣಿ ಬ್ಯಾಲಿಸ್ಟಿಕ್ ಕ್ಷಿಪಣಿ ಹಾರಿಸಿದ ಉತ್ತರ ಕೊರಿಯಾ

**ಸಿಯೋಲ್:** ಅಮೆರಿಕದಲ್ಲಿ ಅಧ್ಯಕ್ಷೀಯ ಚುನಾವಣೆಗೆ ಮತದಾನ ಆರಂಭವಾಗುವುದಕ್ಕೆ ಕೆಲವೇ ಗಂಟೆಗಳ ಮೊದಲು ಉತ್ತರ ಕೊರಿಯಾ ಕನಿಷ್ಠ 7 ಸಮೀಪ ವ್ಯಾಪ್ತಿಯ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಹಾರಿಸಿದೆ ಎಂದು ದಕ್ಷಿಣ ಕೊರಿಯಾದ ಮಾಧ್ಯಮ ಮಂಗಳವಾರ ವರದಿ ಮಾಡಿದೆ.

ಅಮೆರಿಕ, ದಕ್ಷಿಣ ಕೊರಿಯಾ ಮತ್ತು ಜಪಾನ್ನ ಸಶಸ್ತ್ರ ಪಡೆಗಳು ಇತ್ತೀಚೆಗೆ ನಡೆಸಿದ್ದ ಸೇನಾ ಕವಾಯತನ್ನು ಉತ್ತರ ಕೊರಿಯಾದ ಅಧ್ಯಕ್ಷ ಕಿಮ್ ಜಾಂಗ್ ಉನ್ ಖಂಡಿಸಿದ ಬಳಿಕ ಈ ಬೆಳವಣಿಗೆ ನಡೆದಿದೆ.

ಉತ್ತರ ಹ್ವಾಂಘೆ ಪ್ರಾಂತದ ರಹಸ್ಯ ಸ್ಥಳದಿಂದ ಮಂಗಳವಾರ ಬೆಳಿಗ್ಗೆ 7:30ಕ್ಕೆ ಉತ್ತರ ಕೊರಿಯಾ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಪ್ರಯೋಗಿಸಿದೆ. 100 ಕಿ.ಮೀ ಎತ್ತರದಲ್ಲಿ ಹಾರಿಹೋದ 7 ಕ್ಷಿಪಣಿಗಳು 400 ಕಿ.ಮೀ ದೂರ ಕ್ರಮಿಸಿ ಜಪಾನ್ ನ ವಿಶೇಷ ಆರ್ಥಿಕ ವಲಯದ ಹೊರಗೆ ಸಾಗರಕ್ಕೆ ಬಿದ್ದಿದೆ ಎಂದು ಜಪಾನ್ನ ರಕ್ಷಣಾ ಇಲಾಖೆ ಹೇಳಿದೆ. ಕ್ಷಿಪಣಿ ಪ್ರಯೋಗಿಸಿದ ಬಳಿಕ ದಕ್ಷಿಣ ಕೊರಿಯಾ, ಜಪಾನ್ ಹಾಗೂ ಈ ಪ್ರದೇಶದ ಇತರ ಮಿತ್ರರ ಜತೆ ನಿಕಟ ಸಂಪರ್ಕದಲ್ಲಿದ್ದು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ಅಮೆರಿಕದ ಮಿಲಿಟರಿ ಹೇಳಿದೆ. ಅಮೆರಿಕ, ಜಪಾನ್ ಮತ್ತು ದಕ್ಷಿಣ ಕೊರಿಯಾದ ಮಿಲಿಟರಿ ಕವಾಯತಿಗೆ ಆಕ್ಷೇಪ ಮತ್ತು ಪ್ರತಿಭಟನೆ ಸೂಚಿಸುವುದು ನೇರ ಉದ್ದೇಶವಾಗಿದ್ದರೆ, ಅಮೆರಿಕದ ಅಧ್ಯಕ್ಷೀಯ ಚುನಾವಣೆಯ ಸಂದರ್ಭ ತಮ್ಮ ಉಪಸ್ಥಿತಿಯನ್ನು ಜಾಹೀರುಪಡಿಸುವುದು ಮತ್ತು ರಶ್ಯಕ್ಕೆ ಉತ್ತರ ಕೊರಿಯಾದ ಯೋಧರನ್ನು ರವಾನಿಸಿರುವ ವಿಷಯದಿಂದ ಅಂತರಾಷ್ಟ್ರೀಯ ಗಮನವನ್ನು ಬೇರೆಡೆ ಸೆಳೆಯುವುದು ಕ್ಷಿಪಣಿ ಪ್ರಯೋಗದ ಪರೋಕ್ಷ ಉದ್ದೇಶವಾಗಿದೆ ಎಂದು ದಕ್ಷಿಣ ಕೊರಿಯಾದ ಮಾಧ್ಯಮಗಳು ವರದಿ ಮಾಡಿವೆ.



## ದೇಶಾದ್ಯಂತ ತೆರಿಗೆ ಅಧಿಕಾರಿಗಳ ಭರ್ಜರಿ ಕಾರ್ಯಾಚರಣೆ

**ದೆಹಲಿ:** ದೇಶಾದ್ಯಂತ ತೆರಿಗೆ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಜಿಎಸ್ಟಿ ಅಡಿಯಲ್ಲಿ ನೋಂದಾಯಿಸಲಾದ ಸುಮಾರು 18,000 ನಕಲಿ ಕಂಪನಿಗಳನ್ನು ಪತ್ತೆ ಮಾಡಿದ್ದಾರೆ, ಅವು ಸುಮಾರು 25,000 ಕೋಟಿ ರೂ.ಗಳ ಜಿಎಸ್ಟಿ ವಂಚನೆಯಲ್ಲಿ ತೊಡಗಿತ್ತು ಎಂಬುದು ಬಯಲಾಗಿದೆ.

ಆಗಸ್ಟ್ 16 ರಿಂದ ಆರಂಭವಾದ ಕಾರ್ಯಾಚರಣೆ ಅ.15 ರವರೆಗೆ ನಡೆದಿದೆ.

ಈ ವೇಳೆ 18,000 ನಕಲಿ ಕಂಪನಿಗಳು 25,000 ಕೋಟಿ ರೂ.ಗಳ ಜಿಎಸ್ಟಿ ವಂಚನೆ ಎಸಗಿದೆ ಎಂಬುದು ಪತ್ತೆಯಾಗಿದೆ. ಭೌತಿಕ ಪರಿಶೀಲನೆಯ ಸಮಯದಲ್ಲಿ, ಹೆಚ್ಚಿನ ಸಂಖ್ಯೆಯ ಸಂಸ್ಥೆಗಳು ಮತ್ತು ಕಂಪನಿಗಳು ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಕಂಡುಬಂದಿಲ್ಲ ಎಂದು ಮೂಲಗಳು ತಿಳಿಸಿವೆ. ಜಿಎಸ್ಟಿ ರಿಟರ್ನ್ಸ್ ಪ್ರಕಾರ, ಕಂಪನಿಗಳು ತೋರಿಸುತ್ತಿರುವ ಬೃಹತ್ ವ್ಯವಹಾರವು ಸ್ಥಳದಲ್ಲೇ ಕಂಡುಬಂದಿಲ್ಲ. ಅನೇಕ ಸಂಸ್ಥೆಗಳು ಮತ್ತು ಕಂಪನಿಗಳ ಗೋದಾಮುಗಳು




ಸಂಪೂರ್ಣವಾಗಿ ಖಾಲಿಯಾಗಿದ್ದವು. ಅನೇಕ ಸ್ಥಳಗಳಲ್ಲಿಯೂ, ಗೋದಾಮಿನಂತಹ ಯಾವುದೇ ವಿಷಯವಿರಲಿಲ್ಲ. ಆದರೆ ಆ ಸಂಸ್ಥೆಗಳ ಆದಾಯದ ಪ್ರಕಾರ, ದೊಡ್ಡ ಸರಕುಗಳು ಸ್ಥಳದಲ್ಲೇ ಗೋದಾಮಿನಲ್ಲಿ ಲಭ್ಯವಿರಬೇಕು.

ರಿಟರ್ನ್ಸ್‌ಗೆ ಲಗತ್ತಿಸಲಾದ ದಾಖಲೆಗಳ ಆಧಾರದ ಮೇಲೆ, ಕಂಪನಿಗಳು ಕಾಗದದ ಮೇಲೆ ಮಾತ್ರ ಕಾರ್ಯನಿರ್ವಹಿಸುತ್ತಿವೆ ಎಂದು ತೆರಿಗೆ ಅಧಿಕಾರಿಗಳು ಕಂಡುಕೊಂಡರು. ಖರೀದಿ ಮತ್ತು ಮಾರಾಟವನ್ನು ತೋರಿಸುವಲ್ಲಿ ಕಂಪನಿಗಳ ಸರಪಳಿ ಇದೆ, ಅವು ಸರಕುಗಳ ಖರೀದಿ ಮತ್ತು ಮಾರಾಟವನ್ನು ನಿರಂತರವಾಗಿ ಪರಸ್ಪರ ತೋರಿಸುವ ಮೂಲಕ ಇನ್ಪುಟ್ ಟ್ಯಾಕ್ಸ್ ಕ್ರೆಡಿಟ್ ಪಡೆಯುತ್ತಿವೆ.

ಆಗಸ್ಟ್ 16 ರಂದು ಪ್ರಾರಂಭವಾದ ಡ್ರೈವ್ ಸಮಯದಲ್ಲಿ, ತೆರಿಗೆ ಅಧಿಕಾರಿಗಳು 73,000 ಕಂಪನಿಗಳು ಮತ್ತು ಸಂಸ್ಥೆಗಳನ್ನು ಗುರುತಿಸಿದ್ದರು, ಅವು ತೆರಿಗೆ ವಂಚನೆಯಲ್ಲಿ ತೊಡಗಿವೆ ಅಥವಾ ವ್ಯವಹಾರಗಳನ್ನು ಕುಶಲತೆಯಿಂದ ಬಳಸಿಕೊಂಡು ಇನ್ಪುಟ್ ಟ್ಯಾಕ್ಸ್ ಕ್ರೆಡಿಟ್ಗಳನ್ನು ಮೋಸದಿಂದ ಪಡೆಯುತ್ತಿವೆ ಎಂದು ಅವರು ಶಂಕಿಸಿದ್ದಾರೆ. ಅವರ ಭೌತಿಕ ಪರಿಶೀಲನೆಯ ಸಮಯದಲ್ಲಿ, 18,000 ಕಂಪನಿಗಳು ಅಸ್ತಿತ್ವದಲ್ಲಿಲ್ಲ ಎಂದು ಕಂಡುಬಂದಿದೆ.

## ಗಾಝಾದಿಂದ 100ಕ್ಕೂ ಹೆಚ್ಚು ರೋಗಿಗಳ ಸ್ಥಳಾಂತರ

**ಜಿನೆವಾ:** ಗಂಭೀರ ಗಾಯ ಹಾಗೂ ದೀರ್ಘಕಾಲದ ಕಾಯಿಲೆಯಿಂದ ಬಳಲುತ್ತಿರುವ ಮಕ್ಕಳು ಸೇರಿದಂತೆ 100ಕ್ಕೂ ಅಧಿಕ ರೋಗಿಗಳನ್ನು ಯುದ್ಧದಿಂದ ಧ್ವಂಸಗೊಂಡಿರುವ ಗಾಝಾದಿಂದ ಬುಧವಾರ ಸ್ಥಳಾಂತರಿಸಲಾಗುವುದು ಎಂದು ವಿಶ್ವ ಆರೋಗ್ಯ ಸಂಸ್ಥೆಯ ಅಧಿಕಾರಿಗಳು ಹೇಳಿದ್ದಾರೆ.

ಇವು ತಾತ್ಕಾಲಿಕ ಕ್ರಮಗಳಾಗಿವೆ. ಗಾಝಾದಿಂದ ಹೊರಗೆ ರೋಗಿಗಳನ್ನು ಸ್ಥಳಾಂತರಿಸುವ ಪ್ರಕ್ರಿಯೆ ದೀರ್ಘಕಾಲ ಮುಂದುವರಿಯಬೇಕು ಎಂಬುದು ನಮ್ಮ ಆಶಯವಾಗಿದೆ. ಶಲೋಮ್ ಗಡಿದಾಟು ಮೂಲಕ ರೋಗಿಗಳು ದೊಡ್ಡ ಬೆಂಗಾವಲು ಪಡೆಯಲ್ಲಿ ಪ್ರಯಾಣಿಸುತ್ತಾರೆ. ಕೆಲವರನ್ನು ವಿಮಾನದ ಮೂಲಕ ಯುಎಇಗೆ, ಉಳಿದವರನ್ನು ರೊಮಾನಿಯಾಕ್ಕೆ ಸ್ಥಳಾಂತರಿಸಲಾಗುವುದು. ಸುಮಾರು 12,000 ರೋಗಿಗಳು ಸ್ಥಳಾಂತರಕ್ಕೆ ಕಾಯುತ್ತಿದ್ದಾರೆ ಎಂದು ಆಕ್ರಮಿತ ಫೆಲೆಸ್ತೀನ್ ಪ್ರಾಂತಕ್ಕೆ ವಿಶ್ವಸಂಸ್ಥೆ ಪ್ರತಿನಿಧಿ ರಿಕ್ ಪೀಪರ್ಕಾರ್ನ್ ಹೇಳಿದ್ದಾರೆ.




## ಶಾಲೆಯಲ್ಲಿ ಕಬ್ಬಿಣದ ಗೇಟ್ ಬಿದ್ದು 6ರ ಬಾಲಕ ಸಾವು

**ಹೈದರಾಬಾದ್:** ಶಾಲೆಯಲ್ಲಿ ಕಬ್ಬಿಣದ ಗೇಟ್ ಬಿದ್ದು ತಲೆಗೆ ಪೆಟ್ಟಾದ ಕಾರಣ 6 ವರ್ಷದ ಬಾಲಕ ಸಾವನ್ನಪ್ಪಿರುವ ಘಟನೆ ಹೈದರಾಬಾದ್‌ನ ಹಯಾತ್ ನಗರದ ಎಂಪಿಪಿ ಶಾಲೆಯಲ್ಲಿ ನಡೆದಿದೆ. ಮೃತ ಬಾಲಕನನ್ನು 1ನೇ ತರಗತಿಯ ಅಜಯ್ ಎಂದು ಗುರುತಿಸಲಾಗಿದೆ. ಸೋಮವಾರ ಸಂಜೆ 4 ಗಂಟೆಯ ಸುಮಾರಿಗೆ ಶಾಲೆಯ ಕಬ್ಬಿಣದ ಗೇಟ್ ಬಳಿ ಆಟವಾಡುತ್ತಿದ್ದಾಗ ಘಟನೆ ನಡೆದಿದೆ. ಪೊಲೀಸರ ಮಾಹಿತಿಯ ಪ್ರಕಾರ, ಶಾಲೆಯಲ್ಲಿ ಕೆಲವು ಮಕ್ಕಳು ಗೇಟ್ ಮೇಲೆ ಏರಿ ಅದನ್ನು ಅತ್ತಿಂದಿತ್ತ ತಿರುಗಿಸುತ್ತಾ ಆಟವಾಡುತ್ತಿದ್ದರು. ಈ ವೇಳೆ ಅಜಯ್ ಕೂಡ ಆಟವಾಡುತ್ತಿದ್ದನು. ಗೇಟ್‌ನ ಜಾಯಿಂಟ್‌ಗಳು ಮುರಿದು ಅಲ್ಲಿಯೇ ಆಡುತ್ತಿದ್ದ ಅಜಯ್ ಮೇಲೆ ಬಿದ್ದಿದೆ. ಇದರಿಂದಾಗಿ ಆತನ ತಲೆಗೆ ಗಂಭೀರ ಗಾಯಗಳಾಗಿದ್ದವು. ಇದರಿಂದಾಗಿ ಬಾಲಕ ಸಾವನ್ನಪ್ಪಿದ್ದಾನೆ ಎಂದು ತಿಳಿಸಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ಸದ್ಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆದರೆ ಈ ಘಟನೆ ಮೊದಲನೇಯದಲ್ಲ. ಇದಕ್ಕೂ ಮುನ್ನ ಇದೇ ಜು.31 ರಂದು ಗಿರಿಜಾ ಗಣೇಶ್ ಶಿಂಧೆ ಎಂಬ ಮೂರೂವರೆ ವರ್ಷದ ಬಾಲಕಿಯ ಮೇಲೆ ಕಬ್ಬಿಣದ ಗೇಟ್ ಬಿದ್ದು ಸಾವನ್ನಪ್ಪಿದ್ದಳು. ಭೀಕರ ಅಪಘಾತವು ಸಮೀಪದ ಮನೆಯೊಂದರ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಡಿತ್ತು. ಸಿಸಿಟಿವಿ ದೃಶ್ಯದಲ್ಲಿ ಗೇಟ್ ಬಳಿ ಆಟವಾಡುತ್ತಿದ್ದ ಮಕ್ಕಳು ಗೇಟ್‌ನ್ನು ಮುಚ್ಚಲು ಪ್ರಯತ್ನಿಸುತ್ತಿದ್ದರು. ಈ ವೇಳೆ ಅಲ್ಲಿಯೇ ನಡೆದುಕೊಂಡ ಹೋಗುತ್ತಿದ್ದ ಗಿರಿಜಾ ಮೇಲೆ ಗೇಟ್ ಏಕಾಏಕಿ ಕುಸಿದು ಬಿದ್ದಿತ್ತು. ಇದರಿಂದಾಗಿ ಬಾಲಕಿ ಸಾವನ್ನಪ್ಪಿದ್ದಳು.

## ಕೆನಡಾದ ದೇವಸ್ಥಾನಗಳಿಗೆ ಭಾರತೀಯ ರಾಜತಾಂತ್ರಿಕರನ್ನು ಕಳಿಸಬೇಡಿ : SFJ ಎಚ್ಚರಿಕೆ

**ಒಟ್ಟಾವ :** ಕೆನಡಾದ ಬ್ರಾಂಪ್ಟನ್ ನಲ್ಲಿ ಹಿಂದು ಸಭಾ ದೇವಸ್ಥಾನದಲ್ಲಿ ಭಕ್ತರ ಮೇಲೆ ನಡೆದ ದಾಳಿಯ ಬಳಿಕ ಸಿಖ್ಸ್ ಫಾರ್ ಜಸ್ಟಿಸ್(ಎಸ್‌ಎಫ್ಜೆ) ಸಂಘಟನೆ ನೇರ ಬೆದರಿಕೆ ಒಡ್ಡಿದ್ದು 'ಕೆನಡಾದಲ್ಲಿ ಧಾರ್ಮಿಕ ಸಂಸ್ಥೆಗೆ ಭಾರತೀಯ ರಾಜತಾಂತ್ರಿಕರ ಭೇಟಿಯನ್ನು ನಿಲ್ಲಿಸಬೇಕು.ಇಲ್ಲದಿದ್ದರೆ ಅವರು ಖಾಲಿಸ್ತಾನ್ ಪರ ಸಿಖ್ಖರನ್ನು ಎದುರಿಸಬೇಕಾಗುತ್ತದೆ' ಎಂದು ಭಾರತ ಸರಕಾರವನ್ನು ಆಗ್ರಹಿಸಿದೆ. ಕೆನಡಾದಲ್ಲಿರುವ ಧಾರ್ಮಿಕ ಸಂಸ್ಥೆಗಳಿಗೆ ಭಾರತೀಯ ರಾಜತಾಂತ್ರಿಕರು ಭೇಟಿ ನೀಡುವುದನ್ನು ಎಸ್‌ಎಫ್ಜೆ ವಿರೋಧಿಸುತ್ತದೆ ಎಂದು ಗುರುಪತ್ವಂತ್ ಸಿಂಗ್ ಪನ್ನೂನ್ ನೇತೃತ್ವದ ಖಾಲಿಸ್ತಾನ್ ಪರ ಸಂಘಟನೆಯ ವಕ್ತಾರರು ಮಂಗಳವಾರ ಹೇಳಿರುವುದಾಗಿ ವರದಿಯಾಗಿದೆ.



## ಪದ್ಮಭೂಷಣ ಪುರಸ್ಕೃತ, ಖ್ಯಾತಿಯ ಗಾಯಕಿ ಶಾರದಾ ಸಿನ್ಹಾ ಇನ್ನಿಲ್ಲ

**ನವದೆಹಲಿ:** ಜನಪದ ಗಾಯಕಿ ಶಾರದಾ ಸಿನ್ಹಾ ಅವರು ಮಂಗಳವಾರ ದೆಹಲಿಯ ಏಮ್ಸ್ ನಲ್ಲಿ ನಿಧನರಾದರು. ಕಳೆದ ಕೆಲವು ದಿನಗಳಿಂದ ಅವರು ವೆಂಟಿಲೇಟರ್ ಬೆಂಬಲದಲ್ಲಿ ಚಿಕಿತ್ಸೆ ಪಡೆಯತ್ತಿದ್ದರು.

ಛತ್ ಹಾಡುಗಳಿಗೆ ಹೆಸರುವಾಸಿಯಾಗಿರುವ ಪದ್ಮಭೂಷಣ ಪುರಸ್ಕೃತರು 2018 ರಿಂದ ಮಲ್ಟಿಪಲ್ ಮೈಲೋಮಾ, ಒಂದು ವಿಧದ ರಕ್ತದ ಕ್ಯಾನ್ಸರ್ ವಿರುದ್ಧ ಹೋರಾಡುತ್ತಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಅವರ ಆರೋಗ್ಯದ ಕುರಿತು ಅಪ್ಡೇಟ್ಗಳನ್ನು ಹಂಚಿಕೊಳ್ಳುತ್ತಿದ್ದ ಅವರ ಮಗ ಅಂಶುಮಾನ್ ಸಿನ್ಹಾ, ಸುದ್ದಿಯನ್ನು Instagram ನಲ್ಲಿ ಖಚಿತಪಡಿಸಿದ್ದಾರೆ.



ಶಾರದಾ ಸಿನ್ಹಾ ಅವರ ಅಧಿಕೃತ ಇನ್ಸ್ಟಾಗ್ರಾಮ್ ಹ್ಯಾಂಡಲ್ನ ಫೋಟೋದೊಂದಿಗೆ, ಅಂಶುಮಾನ್ ಹಿಂದಿಯಲ್ಲಿ ಹೀಗೆ ಬರೆದಿದ್ದಾರೆ, ನಿಮ್ಮ ಪ್ರಾರ್ಥನೆ ಮತ್ತು ಪ್ರೀತಿ ಯಾವಾಗಲೂ ನನ್ನ ತಾಯಿಯೊಂದಿಗೆ ಇರುತ್ತದೆ. ಛಾತಿ ಮೈಯಾ ಅವರನ್ನು ತನ್ನ ಬಳಿಗೆ ಕರೆದಿದ್ದಾಳೆ. ಅವರು ಇನ್ನು ಮುಂದೆ ದೈಹಿಕ ರೂಪದಲ್ಲಿ ನಮ್ಮೊಂದಿಗೆ ಇಲ್ಲ ಎಂದು ತಿಳಿಸಿದ್ದಾರೆ.

ಶಾರದಾ ಸಿನ್ಹಾ ಅವರ ಆರೋಗ್ಯದ ಬಗ್ಗೆ ವಿಚಾರಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಮುಂಜಾನೆ ಅವರ ಕುಟುಂಬವನ್ನು ತಲುಪಿದರು ಮತ್ತು ಅವರ ನಿರಂತರ ಚಿಕಿತ್ಸೆಗೆ ಅಗತ್ಯವಿರುವ ಎಲ್ಲಾ ನೆರವು ನೀಡಿದರು.

## ಮರದಿಂದ ತಯಾರಿಸಿದ ವಿಶ್ವದ ಮೊದಲ ಉಪಗ್ರಹ ಉಡಾವಣೆ!

**ನ್ಯೂಯಾರ್ಕ್:** ಚಂದ್ರ ಮತ್ತು ಮಂಗಳನ ಅಂಗಳದಲ್ಲಿ ಮರ ಬಳಸಿ ಮನೆ ಕಟ್ಟುವ ಯೋಜನೆಯನ್ನು ಹೊಂದಿರುವ ವಿಜ್ಞಾನಿಗಳು, ಇದರ ಸಾಧ್ಯಾಸಾಧ್ಯತೆಯನ್ನು ಅರ್ಥ ಮಾಡಿಕೊಳ್ಳಲು ಮರದಿಂದ ತಯಾರಿಸಿದ ಉಪಗ್ರಹವನ್ನು ಉಡಾವಣೆ ಮಾಡಿದ್ದಾರೆ. ಇದು ವಿಶ್ವದಲ್ಲೇ ಮೊದಲ ಮರದ ಉಪಗ್ರಹ ಎಂಬ ಖ್ಯಾತಿ ಪಡೆದುಕೊಂಡಿದೆ.

ಜಪಾನ್ನ ಕ್ಯೋಟೋ ವಿವಿ ಮತ್ತು ಸುಮಿಟಾಮೋ ಫಾರೆಸ್ಟ್ರಿ ಸೇರಿ ತಯಾರು ಮಾಡಿರುವ ಈ ಉಪಗ್ರಹವನ್ನು ಅಮೆರಿಕದ ಸ್ಪೇಸ್‌ಎಕ್ಸ್ನ ರಾಕೆಟ್ ಮೂಲಕ ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ಉಡಾವಣೆ ಮಾಡಲಾಗಿದೆ. ಬಳಿಕ ಇದನ್ನು ಭೂಮಿಯಿಂದ 400 ಕಿ.ಮೀ. ಎತ್ತರದ ಕಕ್ಷೆಯಲ್ಲಿ ಅಳವಡಿಸಲಾಗುತ್ತದೆ ಎಂದು ವಿಜ್ಞಾನಿಗಳು ತಿಳಿಸಿದ್ದಾರೆ.

ಅಂಗೈ ಅಗಲ ಇರುವ ಈ ಉಪಗ್ರಹಕ್ಕೆ ಲಿಗ್ನೊಸ್ಯಾಟ್ ಎಂದು ಹೆಸರಿಡಲಾಗಿದೆ. ಬಾಹ್ಯಾಕಾಶಕ್ಕೆ ಕಳುಹಿಸುವ ನವೀಕರಿಸಬಹುದಾದ ವಸ್ತುವಿನ ಮೇಲೆ ಕಾಸ್ಮಿಕ್ ಪರಿಣಾಮ ಏನಾಗಬಹುದು ಎಂಬುದನ್ನು ಅರ್ಥ ಮಾಡಿಕೊಳ್ಳಲು ಹಾಗೂ ಇದರ ಮೂಲಕ



ಬಾಹ್ಯಾಕಾಶದಲ್ಲಿ ಮನುಷ್ಯದ ಜೀವನ ಕುರಿತ ಅಧ್ಯಯನ ಕೈಗೊಳ್ಳಲಾಗುತ್ತದೆ ಎಂದು ತಜ್ಞರು ಹೇಳಿದ್ದಾರೆ. ಕ್ಯೋಟೋ ಸಂಸ್ಥೆಯ ಪ್ರಮುಖ ಗುರಿ ಚಂದ್ರ ಮತ್ತು ಮಂಗಳನ ಮೇಲೆ ಮರದಿಂದ ಮನೆ ನಿರ್ಮಾಣ ಮಾಡುವುದಾಗಿದೆ. ಇದಕ್ಕಾಗಿ 50 ವರ್ಷಗಳ ಗುರಿ ಹಾಕಿಕೊಳ್ಳಲಾಗಿದ್ದು, ನಾಸಾ ಪ್ರಮಾಣಿತ ಮರದ ಉಪಗ್ರಹವನ್ನು ತಯಾರು ಮಾಡುವ ಉದ್ದೇಶವಿದೆ. ಪ್ರಸ್ತುತ ಈ ಉಪಗ್ರಹವನ್ನು ಜಪಾನ್ನಲ್ಲಿ ಸಿಗುವ ಮ್ಯಾಗ್ನೊಲಿಯಾ ಹೊನೊಕಿ ಎಂಬ ಮರದಲ್ಲಿ ತಯಾರಿಸಲಾಗಿದೆ ಎಂದು ವಿಜ್ಞಾನಿ ಟಾಕೋ ಡಾಯ್ ಹೇಳಿದ್ದಾರೆ.

## ಭಾರತೀಯರಿಗೆ ಥೈಲ್ಯಾಂಡ್ ಪ್ರವಾಸ ಮುಕ್ತ

**ದೆಹಲಿ:** ವಿದೇಶಕ್ಕೆ ಪ್ರವಾಸ ಹೋಗಬೇಕು ಎಂದು ಕನಸು ಕಾಣುವವರಿಗೆ ಶುಭ ಸುದ್ದಿ. ಥೈಲ್ಯಾಂಡ್ ಪ್ರವಾಸ ಈಗ ಭಾರತೀಯರಿಗೆ ವೀಸಾ ಮುಕ್ತವಾಗಿದೆ.

ಹೌದು, ಥೈಲ್ಯಾಂಡ್ ಪ್ರವೇಶವನ್ನು ಭಾರತೀಯ ಪ್ರಯಾಣಿಕರಿಗೆ ವೀಸಾ ಮುಕ್ತವಾಗಿ ಅನಿರ್ದಿಷ್ಟವಧಿ ವರೆಗೆ ವಿಸ್ತರಿಸಲಾಗಿದೆ.

ಥೈಲ್ಯಾಂಡ್ ಪ್ರವಾಸೋದ್ಯಮ ಆಕರ್ಷಣೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದ್ದು, ಈ ಯೋಜನೆಯ ಭಾಗವಾಗಿ ಭಾರತೀಯರಿಗೆ ವೀಸಾ ಮುಕ್ತ ಪ್ರವೇಶವನ್ನು ಕಲ್ಪಿಸಲಾಗಿದೆ.

ಭಾರತೀಯರಿಗೆ ಥೈಲ್ಯಾಂಡ್ ವೀಸಾ ಮುಕ್ತ ಪ್ರವೇಶ ನೀತಿಯ ಅನಿರ್ದಿಷ್ಟ ಅವಧಿಗೆ ವಿಸ್ತರಿಸಲಾಗಿದ್ದು, ಇದು 2024ರ ನವೆಂಬರ್ 11ರಂದು ಕೊನೆಗೊಳ್ಳಲಿದೆ. ಈ ನೀತಿಯ ಅನ್ವಯ ಭಾರತೀಯ ಸಂದರ್ಶಕರು ವೀಸಾ ಇಲ್ಲದೆ 60 ದಿನಗಳವರೆಗೆ ಥೈಲ್ಯಾಂಡ್ನಲ್ಲಿ ಉಳಿಯಬಹುದು. ಇದರೊಂದಿಗೆ ಸ್ಥಳೀಯ ವಲಸೆ ಕಚೇರಿಯ ಅನುಮತಿ ಪಡೆದು ಹೆಚ್ಚುವರಿ 30 ದಿನಗಳವರೆಗೆ ಉಳಿಯುವ ಆಯ್ಕೆ ಇರುತ್ತದೆ. ಈ ಮೂಲಕ ಭಾರತೀಯ ಪ್ರವಾಸಿಗರಿಗೆ ಥೈಲ್ಯಾಂಡ್ನಲ್ಲಿ ಪ್ರಯಾಣವನ್ನು ಹೆಚ್ಚು ಸುಲಭವಾಗಿಸುವ ಗುರಿಯನ್ನು



ಹೊಂದಿದೆ.

ವೀಸಾ ಅರ್ಜಿಯ ಅಗತ್ಯವಿಲ್ಲದೆಯೇ ಥೈಲ್ಯಾಂಡ್ನ ಆಕರ್ಷಕ ಪ್ರದೇಶಗಳನ್ನು ಕಾಣಲು ಭಾರತೀಯರಿಗೆ ಅವಕಾಶ ನೀಡುವ ಥೈಲ್ಯಾಂಡ್ ಸರ್ಕಾರದ ನಿರ್ಧಾರವನ್ನು ಥಾಯ್ಲೆಂಡ್ನ ಪ್ರವಾಸೋದ್ಯಮ ಪ್ರಾಧಿಕಾರ (ಟಿಎಟಿ) ದೃಢಪಡಿಸಿದೆ. ದೆಹಲಿಯ ರಾಯಲ್ ಥಾಯ್ ರಾಯಭಾರ ಕಚೇರಿಯ ಅಧಿಕಾರಿಗಳು ಥಾಯ್ ಪ್ರವಾಸೋದ್ಯಮ ಮತ್ತು ಭಾರತೀಯ ಪ್ರವಾಸಿಗರಿಗೆ ಸುಲಭ ಪ್ರಯಾಣಕ್ಕೆ ವೀಸಾ ಮುಕ್ತ ಪ್ರವೇಶ ಅನಿರ್ದಿಷ್ಟ ವಿಸ್ತರಣೆ ಬಗ್ಗೆ ತಮ್ಮ ಸಂತೋಷವನ್ನು ಹಂಚಿಕೊಂಡಿದ್ದಾರೆ.

## ಭಾರತ್ ಬ್ರ್ಯಾಂಡ್‌ನಲ್ಲಿ ಕೆಜಿಗೆ 30 ರೂ.ಗೆ ಗೋಧಿ ಹಿಟ್ಟು, 34 ರೂಪಾಯಿಗೆ ಅಕ್ಕಿ

**ನವದೆಹಲಿ:** ಭಾರತ್ ಬ್ರ್ಯಾಂಡ್ ನಡಿ ರಿಯಾಯಿತಿ ದರದಲ್ಲಿ ಅಕ್ಕಿ ಮತ್ತು ಗೋಧಿ ಹಿಟ್ಟು ಮಾರಾಟದ ಎರಡನೇ ಹಂತದ ಯೋಜನೆಗೆ ಕೇಂದ್ರ ಸರ್ಕಾರ ಮಂಗಳವಾರ ಚಾಲನೆ ನೀಡಿದೆ.

ಎರಡನೇ ಹಂತದಲ್ಲಿ ದರ ಸ್ವಲ್ಪ ಹೆಚ್ಚಾಗಿದೆ. ಈ ಬಾರಿ ಗೋಧಿ ಹಿಟ್ಟು ಕೆಜಿಗೆ 30 ರೂ.ದರದಲ್ಲಿ, ಅಕ್ಕಿಯನ್ನು ಕೆಜಿಗೆ 34 ರೂಪಾಯಿ ದರದಲ್ಲಿ ಮಾರಾಟ ಮಾಡಲಾಗುತ್ತದೆ. ಮೊದಲನೇ ಹಂತದಲ್ಲಿ ಗೋಧಿ ಹಿಟ್ಟಿಗೆ 27 ರೂ., ಅಕ್ಕಿಗೆ 29 ರೂ. ದರ ನಿಗದಿಪಡಿಸಲಾಗಿತ್ತು.

ಪ್ರಸ್ತುತ ಅಕ್ಕಿ ಮತ್ತು ಗೋಧಿ ಹಿಟ್ಟು 5 ಕೆಜಿ, 10 ಕೆಜಿ ಪ್ಯಾಕ್ ಗಳಲ್ಲಿ ಲಭ್ಯವಿದೆ. ಗ್ರಾಹಕರಿಂದ ಹೆಚ್ಚಿನ ಬೇಡಿಕೆ ಬಂದಲ್ಲಿ ಸಣ್ಣ ಗಾತ್ರದ ಪ್ಯಾಕೆಟ್ ಗಳಲ್ಲಿಯೂ ಅಕ್ಕಿ, ಗೋಧಿಹಿಟ್ಟು ಪೂರೈಕೆ ಮಾಡಲಾಗುತ್ತದೆ. ಭಾರತೀಯ ಆಹಾರ ನಿಗಮದಿಂದ 3.69 ಲಕ್ಷ ಟನ್ ಗೋಧಿ ಮತ್ತು 2.61 ಲಕ್ಷ ಅಕ್ಕಿಯನ್ನು ಕಾಯ್ದಿರಿಸಲಾಗಿದೆ.

ರಾಷ್ಟ್ರೀಯ ಸಹಕಾರ ಗ್ರಾಹಕರ ಮಹಾಮಂಡಳ(ಎನ್‌ಸಿಸಿಎಫ್), ರಾಷ್ಟ್ರೀಯ ಕೃಷಿ ಸಹಕಾರ ಮಾರುಕಟ್ಟೆ ಮಹಾಮಂಡಳ(ನಾಫೆಡ್), ಕೇಂದ್ರೀಯ ಭಂಡಾರ ಮತ್ತು ಇ-ಕಾಮರ್ಸ್ ವೇದಿಕೆಗಳಲ್ಲಿ ಇವುಗಳನ್ನು ಮಾರಾಟ ಮಾಡಲಾಗುವುದು.




ಚಿಲ್ಲರೆ ಮಾರಾಟಕ್ಕೆ ಕೇಂದ್ರ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಹ್ಲಾದ್ ಜೋಶಿ ಚಾಲನೆ ನೀಡಿ ಮಾತನಾಡಿ, ಭಾರತ್ ಬ್ರಾಂಡ್ ನಡಿ ಅಕ್ಕಿ ಗೋಧಿಯನ್ನು ಭಾರತೀಯ ಆಹಾರ ನಿಗಮದಿಂದ ಬೆಲೆ ಸ್ಥಿರೀಕರಣ ನಿಧಿ ಅಡಿಯಲ್ಲಿ ಹಂಚಿಕೆ ಮಾಡಲಾಗಿದೆ. ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಅನುಕೂಲ ಒದಗಿಸಲು, ಮಾರುಕಟ್ಟೆಯಲ್ಲಿ ದರ ಏರಿಕೆ ನಿಯಂತ್ರಣ ಉದ್ದೇಶದಿಂದ ಭಾರತ್ ಬ್ರ್ಯಾಂಡ್ ಹೆಸರಲ್ಲಿ ಗೋಧಿ ಹಿಟ್ಟು, ಅಕ್ಕಿ ಮಾರಾಟ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಾಯಿ ಪಲ್ಲವಿ, ನಾಗಚೈತನ್ಯ ರೊಮ್ಯಾಂಟಿಕ್ ಪೋಸ್ಟರ್ ರಿಲೀಸ್



'ಲವ್ ಸ್ಟೋರಿ' ಸಿನಿಮಾದ ಸಕ್ಸಸ್ ನಂತರ ನಾಗಚೈತನ್ಯ ಮತ್ತು ಸಾಯಿ ಪಲ್ಲವಿ ಮತ್ತೆ ಜೊತೆಯಾಗಿದ್ದಾರೆ. 'ತಾಂಡೆಲ್' ಚಿತ್ರಕ್ಕಾಗಿ ಕೈಜೋಡಿಸಿದ್ದು, ಇದರಲ್ಲೂ ರೊಮ್ಯಾಂಟಿಕ್ ಕಥೆ ಹೇಳಲು ಹೊರಟಿದ್ದಾರೆ. ಅದಷ್ಟೇ ಅಲ್ಲ, ತಾಂಡೆಲ್ ರಿಲೀಸ್‌ಗೆ ಮುಹೂರ್ತ ಕೂಡ ಫಿಕ್ಸ್ ಆಗಿದೆ.

'ತಾಂಡೆಲ್' ಸಿನಿಮಾದಲ್ಲಿನ ಸಾಯಿ ಪಲ್ಲವಿ ಜೊತೆಗಿನ ನಾಗಚೈತನ್ಯ, ರೊಮ್ಯಾಂಟಿಕ್ ಪೋಸ್ಟರ್ ಅನ್ನು ಚಿತ್ರತಂಡ ರಿವೀಲ್ ಮಾಡಿದೆ. ಸಾಯಿ ಪಲ್ಲವಿ ಅವರನ್ನು ನಟ ತಬ್ಬಿಕೊಂಡಿರುವ ಫೋಟೋ ಅಭಿಮಾನಿಗಳ ಗಮನ ಸೆಳೆದಿದೆ. ಫೆ.14 ಪ್ರೇಮಿಗಳ ದಿನಾಚರಣೆಗೂ ಮುನ್ನ ಫೆ.7ರಂದು 'ತಾಂಡೆಲ್' ಸಿನಿಮಾ ರಿಲೀಸ್ ಆಗುತ್ತಿದೆ.

ಈ ಹಿಂದಿನ 'ಲವ್ ಸ್ಟೋರಿ' ಚಿತ್ರಕ್ಕಿಂತ ವಿಭಿನ್ನ ಕಥೆಯನ್ನೇ ತೋರಿಸಲು ಚಿತ್ರತಂಡ ಸಜ್ಜಾಗಿದೆ. ಸದ್ಯ ರಿಲೀಸ್ ಆಗಿರುವ ಪೋಸ್ಟರ್ ನೋಡಿ ಅಭಿಮಾನಿಗಳಿಗೆ ಸಿನಿಮಾ ಬಗೆಗಿನ ನಿರೀಕ್ಷೆ ಹೆಚ್ಚಿಸಿದೆ. ಇನ್ನೂ ಈ ಚಿತ್ರವನ್ನು ಗೀತಾ ಆರ್ಟ್ಸ್ ಮೂಲಕ ಅಲ್ಲು ಅರವಿಂದ್ ನಿರ್ಮಾಣ ಮಾಡಿದ್ದಾರೆ.



# ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಡ್ಯಾನ್ಸ್?



ಬೆಂಗಳೂರಿನ ಬೆಡಗಿ ಶ್ರೀಲೀಲಾಗೆ ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯಾಗಿದ್ದಾರೆ. ಸಿನಿಮಾಗಳಲ್ಲಿ ಬ್ರೇಕ್ ಸಿಗದೇ ಇದ್ದರೂ ಅವರ ಮೇಲಿನ ಕ್ರೇಜ್ ಕಮ್ಮಿಯಾಗಿಲ್ಲ. ಆಯಕ್ಟಿಂಗ್‌ನಲ್ಲೂ ಸೈ, ಡ್ಯಾನ್ಸ್‌ಗೂ ಜೈ ಅನ್ನೋ ಶ್ರೀಲೀಲಾ ಇದೀಗ 'ಪುಷ್ಪ 2' ಸಿನಿಮಾದಲ್ಲಿ ಹೆಜ್ಜೆ ಹಾಕಲು ಚಿತ್ರತಂಡ ಸಂಪರ್ಕಿಸಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ. ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಡ್ಯಾನ್ಸ್ ಮಾಡಲಿದ್ದಾರೆ ಎನ್ನಲಾದ ಸುದ್ದಿ ಕೇಳಿಯೇ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

ಇತ್ತೀಚೆಗೆ 'ಪುಷ್ಪ 2' ಸಿನಿಮಾದಲ್ಲಿ ಅಲ್ಲು ಅರ್ಜುನ್ ಜೊತೆ ತೃಪ್ತಿ ದಿಮ್ರಿ, ಶ್ರದ್ಧಾ ಕಪೂರ್ ಹೆಜ್ಜೆ ಹಾಕಲಿದ್ದಾರೆ ಎನ್ನಲಾಗಿತ್ತು. ಆದರೆ ಕನ್ನಡದ ನಟಿ ಶ್ರೀಲೀಲಾಗೆ 'ಪುಷ್ಪ 2' ಟೀಮ್ ಮಣೆ ಹಾಕಿದೆಯಂತೆ. ಶ್ರೀಲೀಲಾ ಡ್ಯಾನ್ಸ್‌ಗೆ ದೊಡ್ಡ ಮಟ್ಟದಲ್ಲಿ ಫ್ಯಾನ್ಸ್‌ಗೆ ಕ್ರೇಜ್ ಇದೆ. ಹಾಗಾಗಿ ಈ ನಟಿಯನ್ನೇ ಚಿತ್ರತಂಡ ಹೆಜ್ಜೆ ಹಾಕಲು ಕೇಳಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ.

ಇದೇ ನವೆಂಬರ್ 6 ಮತ್ತು 7ರಂದು 'ಪುಷ್ಪ 2' ಸಿನಿಮಾದ ಸ್ಪೆಷಲ್ ಹಾಡಿನ ಶೂಟಿಂಗ್ ಕೂಡ ನಡೆಯಲಿದೆ ಎನ್ನಲಾಗಿದೆ. ಡಿ.5ರಂದು ಅಲ್ಲು ಅರ್ಜುನ್, ರಶ್ಮಿಕಾ ನಟನೆಯ ಈ ಸಿನಿಮಾ ರಿಲೀಸ್‌ಗೆ ರೆಡಿಯಿದೆ. ಹಾಗಾಗಿ ಒಂದು ತಿಂಗಳ ಮುಂಚೆ ಐಟಂ ಸಾಂಗ್ ಶೂಟ್ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದೆ. ಶ್ರೀಲೀಲಾ ಭಾಗಿಯಾಗಲಿದ್ದಾರೆ ಎಂಬ ಸುದ್ದಿ ಅದೆಷ್ಟು ನಿಜ ಎಂಬುದನ್ನು ಚಿತ್ರತಂಡ ಅಧಿಕೃತವಾಗಿ ತಿಳಿಸುವವರೆಗೂ ಕಾಯಬೇಕಿದೆ.

ಅಂದಹಾಗೆ, ಶ್ರೀಲೀಲಾ ಅವರು ಕನ್ನಡದ ಜ್ಯೂನಿಯರ್, ರಾಬಿನ್‌ಹುಡ್, ಉಸ್ತಾದ್ ಭಗತ್ ಸಿಂಗ್ ಸಿನಿಮಾ ಸೇರಿದಂತೆ ಹಲವು ಸಿನಿಮಾಗಳಿವೆ. ಬಾಲಿವುಡ್‌ಗೆ ಎಂಟ್ರಿ ಕೊಡಲು ನಟಿ ತಯಾರಿ ಮಾಡಿಕೊಳ್ತಿದ್ದಾರೆ.

# ಬಿಟ್ಟಿ ಸಲಹೆ ಕೊಟ್ಟ ನೆಟ್ಟಿಗನಿಗೆ ಸಮಂತಾ ತಿರುಗೇಟು



ಸೌತ್ ಬ್ಯೂಟಿ ಸಮಂತಾ 'ಹನಿ ಬನಿ ಸಿಟಾಡೆಲ್' ವೆಬ್ ಸಿರೀಸ್ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸೋಶಿಯಲ್ ಮೀಡಿಯಾದಲ್ಲಿ ನಟಿಗೆ ದೇಹ ತೂಕ ಹೆಚ್ಚಿಸಿಕೊಳ್ಳಿ ಎಂದು ಹೇಳಿದ ನೆಟ್ಟಿಗನಿಗೆ ಸಮಂತಾ ತಕ್ಕ ಶಾಸ್ತಿ ಮಾಡಿದ್ದಾರೆ.

ವರುಣ್ ಧವನ್ ಜೊತೆ ಬಾಲಿವುಡ್ ಪ್ರಾಜೆಕ್ಟ್ ಪ್ರಚಾರ ಕಾರ್ಯದಲ್ಲಿ ಸಮಂತಾ ತೊಡಗಿಸಿಕೊಂಡಿದ್ದಾರೆ. ಬಿಡುವಿನ ಸಮಯದಲ್ಲಿ ಅಭಿಮಾನಿಗಳ ಜೊತೆ ನಟಿ ಪ್ರಶ್ನಾವಳಿ ನಡೆಸಿದ್ದಾರೆ. ಆಗ ನೆಟ್ಟಿಗನೊಬ್ಬ ನಟಿಯ ದೇಹದ ತೂಕದ ಕುರಿತು ಮಾತನಾಡಿದ್ದಾರೆ. ನಿಮ್ಮ ದೇಹದ ತೂಕ ಹೆಚ್ಚಿಸಿಕೊಳ್ಳಿ ಎಂದು ಬಿಟ್ಟಿ ಸಲಹೆ ನೀಡಿದ್ದಾರೆ.

ಅದಕ್ಕೆ ನಟಿ ಪ್ರತಿಕ್ರಿಯಿಸಿ, ನನ್ನ ದೇಹ ಸ್ಥಿತಿಗೆ ಅಗತ್ಯವಿರುವ ಕಟ್ಟುನಿಟ್ಟಾದ ಆಹಾರ ಕ್ರಮವನ್ನು ನಾನು ಫಾಲೋ ಮಾಡುತ್ತಿದ್ದೇನೆ. ಅದು ನನ್ನ ದೇಹದ ತೂಕ ಹೆಚ್ಚಿಸುವುದನ್ನು ತಡೆಯುತ್ತಿದೆ. ಜನರನ್ನು ಮೊದಲು ಜಡ್ಜ್ ಮಾಡೋದನ್ನು ನಿಲ್ಲಿಸಿ. ಬದುಕಿ, ಬದುಕಲು ಬಿಡಿ ಈಗ 2024ರ ಸಮಯ ಎಂದು ನೆಟ್ಟಿಗನಿಗೆ ಸಖತ್ ಆಗಿ ತಿರುಗೇಟು ನೀಡಿದ್ದಾರೆ. ನಟಿಯ ನಡೆಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.

# ಅಭಿಮಾನಿಗಳಿಗೆ ಸಿನಿಮಾ ನೋಡಿ ಎಂದು ಒತ್ತಾಯಿಸುತ್ತಿರಲಿಲ್ಲ ರಾಜ್

ರಾಜ್ ಕುಮಾರ್ ಅವರು ದೊಡ್ಡ ಮಟ್ಟದಲ್ಲಿ ಹೆಸರು ಮಾಡಿದವರು. ಅವರು ಕನ್ನಡ ಚಿತ್ರರಂಗಕ್ಕೆ ನೀಡಿದ ಕೊಡುಗೆ ತುಂಬಾನೇ ದೊಡ್ಡದು. ಅವರು ಮಾಡಿದ ಬಹುತೇಕ ಸಿನಿಮಾಗಳು ಸೂಪರ್ ಹಿಟ್. 100 ದಿನಗಳು ಓಡಿದ ಸಿನಿಮಾಗಳ ಪಟ್ಟಿ ತುಂಬಾನೇ ದೊಡ್ಡದಿದೆ. ಆದರೆ, ಅವರು ಯಾರ ಬಳಿಯೂ ಸಿನಿಮಾ ನೋಡಿ ಎಂದು ಒತ್ತಾಯ ಮಾಡುತ್ತಿರಲಿಲ್ಲ ಅನ್ನೋದು ಇಲ್ಲಿ ಗಮನಿಸಬೇಕಾದ ವಿಚಾರ. ಈ ಕುರಿತ ಹಳೆಯ ವಿಡಿಯೋ ಒಂದು ವೈರಲ್ ಆಗಿದೆ.

ರಾಜ್ ಕುಮಾರ್ ಅವರು ಹಲವು ವರ್ಷಗಳ ಕಾಲ ಚಿತ್ರರಂಗದಲ್ಲಿ ಆ ಯಕ್ಟೀವ್ ಆಗಿದ್ದರು. ಅವರ ಸಿನಿಮಾಗಳನ್ನು ಫ್ಯಾನ್ಸ್ ಖುಷಿಖುಷಿಯಿಂದ ನೋಡುತ್ತಿದ್ದರು. ಅವರು ಒಂದೇ ಒಂದು ಸಿನಿಮಾನ ಮಾತ್ರ ಅಭಿಮಾನಿಗಳ ಬಳಿ ನೋಡುವಂತೆ ಕೋರಿದ್ದರು. ಅವರಿಗೆ ಅವರದ್ದೇ ಸಿನಿಮಾಗಳನ್ನು ನೋಡಲು ಬೇಸರ ಆಗುತ್ತಿತ್ತು, ನಾಚಿಕೆ ಆಗುತ್ತಿತ್ತಂತೆ ಅನ್ನೋದು ಗೊತ್ತಾ ಈ ಬಗ್ಗೆ ಅವರು ಸಂದರ್ಶನ ಒಂದರಲ್ಲಿ ಹೇಳಿಕೊಂಡಿದ್ದರು. ಇದು ವೈರಲ್ ಆಗಿದೆ.

'ನಾನು 200 ಸಿನಿಮಾಗಳವರೆಗೆ ಅಭಿನಯ ಮಾಡಿದ್ದೇನೆ. ಯಾವ ಚಿತ್ರ ಮೆಚ್ಚುಗೆ ಆಗಿದೆ, ಯಾವ ಸಿನಿಮಾದಲ್ಲಿ ಚೆನ್ನಾಗಿ ಅಭಿನಯಿಸಿದ್ದೀನಿ ಎಂಬ ಉತ್ತರ ಇನ್ನೂ ಸಿಕ್ಕಿಲ್ಲ. 'ಮಂತ್ರಾಲಯ ಮಹಾತ್ಮೆ' ಸಿನಿಮಾ ನನಗೆ ಇಷ್ಟವಾದ ಸಿನಿಮಾ. ಅದನ್ನು ಫ್ಯಾನ್ಸ್ ಬಳಿ ನೋಡಿ ಎಂದು ಕೋರಿಕೊಂಡಿದ್ದೆ'



ಎಂದಿದ್ದರು ರಾಜ್ ಕುಮಾರ್.

'ಉಳಿದ ಯಾವ ಸಿನಿಮಾನ ನೋಡಿ ಎಂದು ಅಭಿಮಾನಿಗಳಿಗೆ ಹೇಳಿಲ್ಲ. ನನ್ನ ಚಿತ್ರವನ್ನು ನಾನೇ ನೋಡೋಕೆ ಆಗಿರಲಿಲ್ಲ. ಇತ್ತೀಚೆಗೆ ನನ್ನ ಸಿನಿಮಾನ ಟಿವಿಯಲ್ಲಿ ನೋಡ್ತಾ ಇದೀನಿ. ಹೀಗೆ ನೋಡುವಾಗ ನಾಚಿಕೆ ಆಗಿ ಎದ್ದು ನಡೆಯುತ್ತೇನೆ. ಮಾಡಿದ ಕರ್ತವ್ಯದಲ್ಲಿ ಲೋಪವೇ ಕಾಣುತ್ತದೆ. ಉತ್ತಮವಾದುದ್ದು ಕಾಣಲ್ಲ. ನನ್ನನ್ನು ಹೊಗಳಿಕೊಳ್ಳೋಕೆ ಬರಲ್ಲ. ಅದಕ್ಕೆ ತುಂಬಾ ಹೆಮ್ಮೆ ಎನಿಸುತ್ತದೆ. ಅದು ನನ್ನ ಅಪ್ಪ ಹೇಳಿಕೊಟ್ಟಿದ್ದು. ಅದನ್ನು ಪಾಲಿಸಿಕೊಂಡು ಬಂದಿದ್ದೇನೆ' ಎಂದಿದ್ದರು ರಾಜ್ ಕುಮಾರ್.

ರಾಜ್ ಕುಮಾರ್ ಅವರು ತುಂಬಾನೇ ಶಿಸ್ತಿನಿಂದ ಜೀವನ ನಡೆಸಿದ್ದರು. ಅವರು ಅನೇಕರಿಗೆ ಮಾದರಿ. ಅವರ ಬಗೆಗಿನ ಹಲವು ವಿಚಾರಗಳು ಸೋಶಿಯಲ್ ಮೀಡಿಯಾದಲ್ಲಿ ಆಗಾಗ ವೈರಲ್ ಆಗುತ್ತಾ ಇರುತ್ತವೆ. ಅವರಂತೆ ಅವರ ಮಕ್ಕಳು ಕೂಡ ಇದ್ದಾರೆ. ಪುನೀತ್ ಅವರು ಸರಳತೆಯಿಂದ ನಡೆದುಕೊಳ್ಳುತ್ತಿದ್ದರು. ಶಿವರಾಜ್ ಕುಮಾರ್ ಕೂಡ ಅನೇಕರಿಗೆ ಮಾದರಿ.

# ಮೆಗಾ ಹರಾಜಿಗೂ ಮುನ್ನವೇ ಐಪಿಎಲ್‌ನಿಂದ ಬೆನ್ ಸ್ಟೋಕ್ಸ್ ಔಟ್

ಇಂಡಿಯನ್ ಪ್ರೀಮಿಯರ್ ಲೀಗ್‌ನ 18ನೇ ಆವೃತ್ತಿಯಲ್ಲಿ ಇಂಗ್ಲೆಂಡ್ ಟೆಸ್ಟ್ ತಂಡದ ನಾಯಕ ಬೆನ್ ಸ್ಟೋಕ್ಸ್ ಕಾಣಿಸಿಕೊಳ್ಳುವುದಿಲ್ಲ ಎಂಬುದು ಖಚಿತವಾಗಿದೆ. ಮೆಗಾ ಹರಾಜಿಗಾಗಿ ಹೆಸರು ನೋಂದಣಿ ಮಾಡಿಕೊಂಡಿರುವ ಆಟಗಾರರಲ್ಲಿ ಸ್ಟೋಕ್ಸ್ ಹೆಸರು ಕಾಣಿಸಿಕೊಂಡಿಲ್ಲ. ಇದರೊಂದಿಗೆ ಬೆನ್ ಸ್ಟೋಕ್ಸ್ ಐಪಿಎಲ್ 2025 ರಿಂದ ಹೊರಗುಳಿದಿರುವುದು ಕನ್ಫರ್ಮ್ ಆದಂತಾಗಿದೆ.

ಈ ಬಾರಿಯ ಮೆಗಾ ಹರಾಜಿಗಾಗಿ ಇಂಗ್ಲೆಂಡ್‌ನ 52 ಆಟಗಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ. ಇದಾಗ್ಯೂ ಸ್ಟೋಕ್ಸ್ ಅವರು ಹೆಸರು ರಿಜಿಸ್ಟರ್ ಮಾಡಿಕೊಂಡಿಲ್ಲ. ಇದಕ್ಕೆ ಮುಖ್ಯ ಕಾರಣ ಮುಂಬರುವ ಆಶಸ್ ಸರಣಿ ಎನ್ನಲಾಗಿದೆ. ಆಸ್ಟ್ರೇಲಿಯಾ ವಿರುದ್ಧದ ಪ್ರತಿಷ್ಠಿತ ಟೆಸ್ಟ್ ಸರಣಿಯ ಸಿದ್ಧತೆಗಾಗಿ ಸ್ಟೋಕ್ಸ್ ಐಪಿಎಲ್ ಸೀಸನ್-18 ರಿಂದ ಹೊರಗುಳಿಯಲು ನಿರ್ಧರಿಸಿದ್ದಾರೆ.

ಇದಕ್ಕೂ ಮುನ್ನ ಐಪಿಎಲ್ 2023 ರ ಹರಾಜಿನಲ್ಲಿ ಬೆನ್ ಸ್ಟೋಕ್ಸ್ ಅವರನ್ನು ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿ ಬರೋಬ್ಬರಿ 16.25 ಕೋಟಿ ರೂ.ಗೆ



ಖರೀದಿಸಿತ್ತು. ಆದರೆ ಗಾಯದ ಕಾರಣ ಸ್ಟೋಕ್ಸ್ ಆಡಿದ್ದು ಕೇವಲ 2 ಪಂದ್ಯಗಳನ್ನು ಮಾತ್ರ. ಅಲ್ಲದೆ ಐಪಿಎಲ್ 2024 ರಿಂದ ಹೊರಗುಳಿದಿದ್ದರು. ಇದೀಗ ಐಪಿಎಲ್ 2025 ರಿಂದಲೂ ಸ್ಟೋಕ್ಸ್ ಹಿಂದೆ ಸರಿದಿದ್ದಾರೆ.

ಐಪಿಎಲ್‌ನ ಹೊಸ ನಿಯಮಗಳ ಪ್ರಕಾರ, ತಂಡಗಳಿಗೆ ಆಯ್ಕೆಯಾದ ಬಳಿಕ ಟೂರ್ನಿಯಿಂದ ಹಿಂದೆ ಸರಿದರೆ ಆ ಆಟಗಾರನ ಮೇಲೆ 2 ವರ್ಷಗಳ ನಿಷೇಧ ಹೇರಲಾಗುತ್ತದೆ. ಈ ನಿಯಮವು ಈ ಬಾರಿಯ ಮೆಗಾ ಹರಾಜಿನಿಂದಲೇ ಚಾಲ್ತಿಗೆ ಬರಲಿದೆ. ಹೀಗಾಗಿಯೇ ಬೆನ್ ಸ್ಟೋಕ್ಸ್ ಮೆಗಾ ಹರಾಜಿಗೂ ಮುನ್ನವೇ ಐಪಿಎಲ್‌ಗೆ ತಮ್ಮ ಅಲಭ್ಯತೆಯನ್ನು ತಿಳಿಸಿ, ಟೂರ್ನಿಯಿಂದ ಹಿಂದೆ ಸರಿದಿದ್ದಾರೆ.

ಒಂದು ವೇಳೆ ಮೆಗಾ ಹರಾಜಿನ ಮೂಲಕ ಆಯ್ಕೆಯಾಗಿ ಆ ಬಳಿಕ ಟೂರ್ನಿಯಿಂದ ಹಿಂದೆ ಸರಿದರೆ, ಆ ಆಟಗಾರನ ಮೇಲೆ 2 ವರ್ಷಗಳ ನಿಷೇಧ ಹೇರಲಾಗುತ್ತದೆ. ಇದರಿಂದ 2 ವರ್ಷಗಳ ಕಾಲ ಐಪಿಎಲ್‌ನಿಂದ ಹೊರಗುಳಿಯಬೇಕಾದ ಅನಿವಾರ್ಯತೆ ಎದುರಾಗಲಿದೆ. ಹೀಗಾಗಿಯೇ ಈ ಬಾರಿ ಐಪಿಎಲ್‌ಗೆ ಆಯ್ಕೆಯಾದ ಯಾವುದೇ ಆಟಗಾರ ನಿರ್ದಿಷ್ಟ ಕಾರಣಗಳಿಲ್ಲದೇ ಟೂರ್ನಿಯಿಂದ ಹೊರಗುಳಿಯುವ ಸಾಧ್ಯತೆಯಿಲ್ಲ.

## ರಾಜ್ಯಕ್ಕೆ ಎಂಟ್ರಿಯಾಗ್ತಿದೆ ಕೇರಳ ತ್ಯಾಜ್ಯ

# ವಾಹನಗಳನ್ನು ಹಿಡಿದ ಜನರು

**ಚಾಮರಾಜನಗರ:** ಗಡಿಜಿಲ್ಲೆ ಚಾಮರಾಜನಗರಕ್ಕೆ ಮತ್ತೇ ಮತ್ತೇ ಕೇರಳದಿಂದ ಕಸ ಬರುತ್ತಿದೆ. ಜಿಲ್ಲೆಯ ಗುಂಡ್ಲುಪೇಟೆ ಕೇರಳದ ತ್ಯಾಜ್ಯ ಸುರಿಯುವ ಕಸದ ತೊಟ್ಟಿಯಾಗಿದೆ.

ಕೇರಳಿಗರು ತಮ್ಮ ರಾಜ್ಯದಿಂದ ನಾನಾ ರೀತಿಯ ತ್ಯಾಜ್ಯವನ್ನು ಗುಂಡ್ಲುಪೇಟೆ ತಾಲೂಕಿನ ನಿರ್ಜನ ಪ್ರದೇಶಗಳಲ್ಲಿ ಸುರಿದು ಹೋಗುತ್ತಿದ್ದು, ಜಿಲ್ಲಾಡಳಿತ ಮೌನವಹಿಸಿದೆ. ಹೀಗೆ ನಿತ್ಯ ಇಲ್ಲಿಗೆ ಬಂದು ತ್ಯಾಜ್ಯ ಸುರಿದು ಹೋಗುತ್ತಿರುವುದರಿಂದ ಪರಿಸರ ಮಾಲಿನ್ಯ ಉಂಟಾಗಿ ರೋಗರುಜಿನಗಳು ಹರಡುವ ಆತಂಕ ಎದುರಾಗಿದೆ.

ರಾಷ್ಟ್ರೀಯ ಹೆದ್ದಾರಿ 766ರ ಮೂಲಕ ಕೇರಳದಿಂದ ಮೆಡಿಕಲ್ ವೇಸ್ಟ್, ಚಪ್ಪಲಿ, ಮಾಂಸ, ಕೊಳೆತ ತರಕಾರಿ, ಪ್ಲಾಸ್ಟಿಕ್ ಮತ್ತಿತರ ತ್ಯಾಜ್ಯ ತಂದು ಗಡಿಭಾಗದ ನಿರ್ಜನ ಪ್ರದೇಶಗಳಲ್ಲಿ ಸುರಿದು ಹೋಗುವುದು ಅಥವಾ ಗುಂಡ್ಲುಪೇಟೆ ಮೂಲಕ ಬೇರೆ ಜಿಲ್ಲೆಗಳಿಗೆ ಸಾಗಣೆ ಮಾಡುವುದು ನಿರಂತರವಾಗಿ ನಡೆಯುತ್ತಲೇ ಇದೆ. ಇಷ್ಟೆಲ್ಲಾ ಆಗುತ್ತಿದ್ದರೂ ಕರ್ನಾಟಕ ಗಡಿಭಾಗದ ಚೆಕ್ ಪೋಸ್ಟ್‌ನಲ್ಲಿ ಯಾವುದೇ ತಪಾಸಣೆ ನಡೆಯದೆ ಕೇವಲ ಗ್ರೀನ್ ಟ್ಯಾಕ್ಸ್ ವಸೂಲಿಗಷ್ಟೇ ಸೀಮಿತವಾಗಿದೆ.



ನೆರೆಯ ಕೇರಳಿಗರು ಎಗ್ಗಿಲ್ಲದೇ ಚೆಕ್‌ಪೋಸ್ಟ್ ದಾಟಿ ಲಾರಿ ಮತ್ತು ಟೆಂಪೋಗಳಲ್ಲಿ ಕರ್ನಾಟಕಕ್ಕೆ ಕಸ ಸಾಗಣೆ ಮಾಡುತ್ತಿದ್ದಾರೆ. ಚೆಕ್‌ಪೋಸ್ಟ್ ನಲ್ಲಿರುವ ಪೊಲೀಸ್ ಹಾಗು ಅರಣ್ಯ ಇಲಾಖೆ ಸಿಬ್ಬಂದಿ ಇದರಲ್ಲಿ ಶಾಮೀಲಾಗಿದ್ದಾರೆ ಎಂಬ ಗಂಭೀರ ಆರೋಪವು ಇದೆ.

ಇನ್ನೂ ಕೇರಳದಿಂದ ಕರ್ನಾಟಕಕ್ಕೆ ಕಸ ನಿರಂತರವಾಗಿ ಸಾಗಣೆಯಾಗುತ್ತಿದ್ದರೂ ಕೂಡ ಜಿಲ್ಲಾಡಳಿತ ಕಣ್ಮುಚ್ಚಿ ಕುಳಿತಿದೆ. ಇದರಿಂದ ಬೇಸತ್ತ ಕನ್ನಡಪರ ಸಂಘಟನೆಗಳು ಕೇರಳದಿಂದ ತ್ಯಾಜ್ಯ ತುಂಬಿಕೊಂಡು ಬಂದ 5 ಲಾರಿಗಳನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಈ ಸಂಬಂಧ ಕೇರಳದ ಐವರು ಲಾರಿ ಚಾಲಕರ ವಿರುದ್ಧ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ.

ಚೆಕ್‌ಪೋಸ್ಟ್ ನಲ್ಲಿ ವಾಹನಗಳನ್ನು ಕಟ್ಟುನಿಟ್ಟಾಗಿ ತಪಾಸಣೆ ನಡೆಸುವ ಕೆಲಸಕ್ಕೆ ಅರಣ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆ ಮುಂದಾಗಬೇಕಿದೆ. ಇದರ ಜೊತೆಗೆ ಕೇರಳ ಸರ್ಕಾರದೊಂದಿಗೆ ರಾಜ್ಯ ಸರ್ಕಾರ ಮಾತುಕತೆ ನಡೆಸಿ ತ್ಯಾಜ್ಯ ಸಾಗಾಣಿಕೆಗೆ ಕಡಿವಾಣ ಹಾಕಬೇಕಿದೆ.

# 17 ವರ್ಷಗಳ ಬಳಿಕ ಐಪಿಎಲ್‌ಗೆ ಜೇಮ್ಸ್ ಅಂಡರ್ಸನ್

ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕಾಣಿಸಿಕೊಳ್ಳದ ಕೆಲವೇ ಕೆಲವು ಶ್ರೇಷ್ಠ ಆಟಗಾರರಲ್ಲಿ ಇಂಗ್ಲೆಂಡ್ ವೇಗಿ ಜೇಮ್ಸ್ ಅಂಡರ್ಸನ್ ಕೂಡ ಒಬ್ಬರು. ಇಂಗ್ಲೆಂಡ್ ಪರ ಮೂರು ಸ್ವರೂಪಗಳಲ್ಲಿ ಕಣಕ್ಕಿಳಿದರೂ ಅಂಡರ್ಸನ್ ಐಪಿಎಲ್ ನತ್ತ ಮಾತ್ರ ಮುಖ ಮಾಡಿರಲಿಲ್ಲ. ಅದರಲ್ಲೂ ಐಪಿಎಲ್ ಹರಾಜಿಗಾಗಿ ಒಮ್ಮೆಯೂ ಹೆಸರು ನೋಂದಾಯಿಸಿಕೊಂಡಿರಲಿಲ್ಲ.

ಆದರೆ ಇದೀಗ 17 ವರ್ಷಗಳ ಬಳಿಕ ಐಪಿಎಲ್ ಹರಾಜಿಗಾಗಿ ಜೇಮ್ಸ್ ಅಂಡರ್ಸನ್ ಹೆಸರು ನೋಂದಾಯಿಸಿಕೊಂಡಿದ್ದಾರೆ. ಅದು ಸಹ ತಮ್ಮ 42ನೇ ವಯಸ್ಸಿನಲ್ಲಿ ಎಂಬುದು ವಿಶೇಷ. ಅಂದರೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾಗಿರುವ ಅಂಡರ್ಸನ್ ಇದೀಗ ಇಂಡಿಯನ್ ಪ್ರೀಮಿಯರ್ ಲೀಗ್‌ನತ್ತ ಮುಖ ಮಾಡಲು ಇಚ್ಛಿಸಿದ್ದಾರೆ.

ಇಂಗ್ಲೆಂಡ್‌ನಲ್ಲಿ ನಡೆದ ದಿ ಹಂಡ್ರೆಡ್ ಲೀಗ್ ವೇಳೆ ಮಾತನಾಡಿದ್ದ ಜೇಮ್ಸ್ ಅಂಡರ್ಸನ್, ಈ ಲೀಗ್‌ನಲ್ಲಿ ಒಬ್ಬ ಬೌಲರ್‌ಗೆ ಕೇವಲ 20 ಎಸೆತಗಳು ಮಾತ್ರ ಇದೆ. ವಿಶೇಷ ಎಂದರೆ ಮೊದಲ 20 ಎಸೆತಗಳಲ್ಲಿ ಚೆಂಡು ಸ್ವಿಂಗ್ ಪಡೆಯುತ್ತಿರುವುದನ್ನು ನಾನು ಗಮನಿಸಿದ್ದೇನೆ.



ನಾನು ಸಹ ಅದನ್ನು ಮಾಡಬಲ್ಲೆ ಎಂದು ತಿಳಿಸಿದ್ದರು. ಈ ಮೂಲಕ ಫ್ರಾಂಚೈಸಿ ಲೀಗ್ ಆಡುವ ಇಂಗಿತವನ್ನು ವ್ಯಕ್ತಪಡಿಸಿದ್ದರು.

ಇದರೊಂದಿಗೆ ಜೇಮ್ಸ್ ಅಂಡರ್ಸನ್ ಐಪಿಎಲ್ ಸೇರಿದಂತೆ ಪ್ರಮುಖ ಲೀಗ್‌ನಲ್ಲಿ ಕಾಣಿಸಿಕೊಳ್ಳುವುದು ಖಚಿತ ಎನ್ನಲಾಗಿತ್ತು. ಅದರ ಮೊದಲ ಭಾಗವಾಗಿ ಇದೀಗ ಅಂಡರ್ಸನ್ ಐಪಿಎಲ್ ಮೆಗಾ ಹರಾಜಿಗಾಗಿ 1.5 ಕೋಟಿ ರೂ. ಮೂಲಬೆಲೆಯೊಂದಿಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ. ಹೀಗಾಗಿ ನವೆಂಬರ್ 24 ಮತ್ತು 25 ರಂದು ನಡೆಯಲಿರುವ ಮೆಗಾ ಹರಾಜಿನಲ್ಲಿ ಜೇಮ್ಸ್ ಅಂಡರ್ಸನ್ ಹೆಸರು ಕೂಡ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿದೆ.

ಅಂದಹಾಗೆ ಜೇಮ್ಸ್ ಅಂಡರ್ಸನ್ ಸದ್ಯ ಇಂಗ್ಲೆಂಡ್ ತಂಡದ ಬೌಲಿಂಗ್ ಕೋಚ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ ಇನ್ನುಳಿದ ಸಮಯದಲ್ಲಿ ಲೀಗ್ ಕ್ರಿಕೆಟ್ ಆಡುವ ಇರಾದೆಯಲ್ಲಿದ್ದಾರೆ. ಅಂದರೆ ಇಂಗ್ಲೆಂಡ್ ಆಟಗಾರರು ಐಪಿಎಲ್ ಸೇರಿದಂತೆ ಇತರೆ ಲೀಗ್ ಆಡುವ ವೇಳೆ ಜೇಮ್ಸ್ ಅಂಡರ್ಸನ್ ಸಂಪೂರ್ಣ ಫ್ರೀಯಾಗಿರಲಿದ್ದಾರೆ. ಹೀಗಾಗಿ 42ನೇ ವಯಸ್ಸಿನಲ್ಲಿ ಜೇಮ್ಸ್ ಅಂಡರ್ಸನ್ ಐಪಿಎಲ್‌ನತ್ತ ಮುಖ ಮಾಡಲು ಇಚ್ಛಿಸಿದ್ದಾರೆ.

# ಪಂಚ ಗ್ಯಾರಂಟಿಯಿಂದ ಸಚಿವರಿಗೆ ಎಲ್ಲಿ ಹಣ ತಿನ್ನಬೇಕು ಅನ್ನೋದು ಗೊತ್ತಾಗುತ್ತಿಲ್ಲ

**ವಿಜಯಪುರ:** ಪಂಚ ಗ್ಯಾರಂಟಿಯಿಂದ ಸಚಿವರಿಗೆ ಎಲ್ಲಿ ಹಣ ತಿನ್ನಬೇಕು ಅನ್ನೋದು ಗೊತ್ತಾಗುತ್ತಿಲ್ಲ. ಗ್ಯಾರಂಟಿ ಕೊಟ್ಟ ಮೇಲೆ ಕಾಂಗ್ರೆಸ್ ಸರ್ಕಾರದ್ದೆ ಗ್ಯಾರಂಟಿ ಇಲ್ಲ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವ್ಯಂಗ್ಯವಾಡಿದ್ದಾರೆ.

ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ತಿಮ್ಮಾಪುರ್ ವರ್ಗಾವಣೆ ಭ್ರಷ್ಟಾಚಾರ ವಿಚಾರವಾಗಿ, ಕಾಂಗ್ರೆಸ್ ಸರ್ಕಾರ ಎಲ್ಲಾ ಇಲಾಖೆಗಳಲ್ಲಿ ಭ್ರಷ್ಟಾಚಾರ ಮಾಡಿದೆ. ಪಂಚ ಗ್ಯಾರಂಟಿಯಿಂದ ಸಚಿವರಿಗೆ ಎಲ್ಲಿ ಹಣ ತಿನ್ನಬೇಕು ಎಂದು ಗೊತ್ತಾಗುತ್ತಿಲ್ಲ. ಅಬಕಾರಿ ಇಲಾಖೆ ಹೊರತಾಗಿ ಸಚಿವರಿಗೆ ಮತ್ತೊಂದು ಸೋರ್ಸ್ ಇಲ್ಲ. ಅಬಕಾರಿ ಇಲಾಖೆಯ ವರ್ಗಾವಣೆಯಲ್ಲಿ ದೊಡ್ಡ ಉದ್ಯೋಗ ಹುಟ್ಟಿಕೊಂಡಿದೆ. ಏಕೆಂದರೆ ಅವರಿಗೆ ಗ್ಯಾರಂಟಿ ಇಲ್ಲ. ಗ್ಯಾರಂಟಿ ಕೊಟ್ಟ ಮೇಲೆ ಅವರ ಸರ್ಕಾರದ್ದೆ ಗ್ಯಾರಂಟಿ ಇಲ್ಲ ಎಂದು ಹೇಳಿದರು.

ಸಿಎಂ ಸಿದ್ದರಾಮಯ್ಯಗೆ ಎಷ್ಟು ದಿನ ಮುಂದುವರೆಯುತ್ತೇನೆ ಎನ್ನುವ ಗ್ಯಾರಂಟಿ



ಇಲ್ಲ, ಎಲ್ಲರೂ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಕಾಂಗ್ರೆಸ್ ಶಾಸಕರಿಗೆ ಏನೂ ಸಿಗುತ್ತಿಲ್ಲ ಹೀಗಾಗಿ ಹತಾಶರಾಗಿದ್ದಾರೆ. ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಇದರಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಕಾಂಗ್ರೆಸ್ ಸರ್ಕಾರದಲ್ಲಿ ಶೇ.90 ರಷ್ಟು ಭ್ರಷ್ಟಾಚಾರ ಇದೆ. ಆಗ ನಮ್ಮದು ಶೇ.40 ರಷ್ಟು ಭ್ರಷ್ಟಾಚಾರ ಇದೆ ಎಂದು ಹೇಳುತ್ತಿದ್ದರು. ಜೊತೆಗೆ ಬಿಜೆಪಿ ಮೇಲೆ ಪೇಸಿಎಂ ಎಂದು ಆರೋಪ ಮಾಡುತ್ತಿದ್ದರು. ಆದರೆ ಯಾಕೆ ತನಿಖೆ ಮಾಡಲಿಲ್ಲ? ತನಿಖೆ ಮಾಡಿ ಸಾಬೀತು ಮಾಡುವುದಕ್ಕೆ ಆಗಲಿಲ್ಲ ಎಂದು ಪ್ರಶ್ನಿಸಿದರು.

ಬೆಂಗಳೂರಲ್ಲಿ ಜಾಗಗಳ ಎನ್‌ಎ ಮಾಡಲು ಭ್ರಷ್ಟಾಚಾರ ಮಾಡಿದ್ದಾರೆ. ಎನ್‌ಎ ಮಾಡಲು ಡಿಕೆಶಿಗೆ ಹಣ ಕೊಡಬೇಕು. ಚದರ ಅಡಿಗೆ 75 ರಿಂದ 100 ರೂ. ಕೊಡಬೇಕು. ಡಿಕೆಶಿ ಕ್ಯಾಲ್ಕುಲೇಟರ್ ತೆಗೆದುಕೊಂಡು ಕೂತಿರುತ್ತಾನೆ ಎಂದು ಆರೋಪಿಸಿದ್ದಾರೆ.

ಇದೇ ವೇಳೆ ತಹಶಿಲ್ದಾರ್ ಕಚೇರಿ ಎಸ್‌ಡಿಎ ಆತ್ಮಹತ್ಯೆಯಲ್ಲಿ ಹೆಬ್ಬಾಳ್ಕರ್ ಪಿಎ ಹೆಸರು ಬರೆದಿಟ್ಟ ವಿಚಾರವಾಗಿ ಮಾತನಾಡಿ, ಲಕ್ಷ್ಮಿ ಹೆಬ್ಬಾಳ್ಕರ್ ಬಗ್ಗೆ ಬಹಳಷ್ಟು ದೂರುಗಳಿವೆ. ಭ್ರಷ್ಟಾಚಾರದ ತುತ್ತ ತುದಿಯಲ್ಲಿದ್ದಾರೆ. ಹಿಂದೆ ಮಾಡಿದ ಪಾಪದ ಫಲ ಈಗ ಕಾಡುತ್ತಿದೆ. ಈಶ್ವರಪ್ಪ ರಾಜೀನಾಮೆ ಕೊಡುವಂತೆ ಮಾಡಿದ ಪಾಪದ ಕೊಡ ತುಂಬಿ ಈಗ ಬೆನ್ನು ಹತ್ತಿದೆ. ಬೆಳಗಾವಿಯಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಐದಾರು ಸಾವಿರ ರೂ. ಕೆಲಸಕ್ಕೂ ಲಂಚ ಕೊಡಬೇಕಿದೆ. ಪಿಎ ಹೆಸರು ಬರೆದಿರುವುದಕ್ಕೆ ಲಕ್ಷ್ಮಿ ಹೆಬ್ಬಾಳ್ಕರ್ ಅವರೇ ಹೊಣೆ. ಲಕ್ಷ್ಮಿ ಹೆಬ್ಬಾಳ್ಕರ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com